**ಸಂಪುಟ:** 05 **ಸಂಚಿಕೆ:** 231 **ಪುಟಗಳು:** 08 **ಬುಧವಾರ** 05 **ನವೆಂಬರ್** 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನೀನು ಯೋಚನೆ ಮಾಡದೇ ಹೇಳುವ ಒಂದೊಂದು ಮಾತು... ನಿನ್ನನ್ನು ಒಂದೊಂದು ನಿಮಿಷನೂ ಯೋಚನೆ ಮಾಡಿಸುತ್ತೇ...

# ಕಾಂಗ್ರೆಸ್ ನಾಯಕರಿಂದ ದಿಲ್ಲಿ ಮ್ಯಾರಥಾನ್!

**ಸತೀಶ್, ಸಿದ್ದರಾಮಯ್ಯ, ಡಿಕೆಶಿ ಪ್ರವಾಸ**

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಹಾಗೂ ನವೆಂಬರ್ ಕ್ರಾಂತಿ ಚರ್ಚೆಯ ನಡುವೆ ಕಾಂಗ್ರೆಸ್ ನಾಯಕರ ಸರಣಿ ದೆಹಲಿ ಭೇಟಿ ಕುತೂಹಲ ಕೆರಳಿಸಿದೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಹಾಗೂ ಸಚಿವ ಸತೀಶ್ ಜಾರಕಿಹೊಳಿ ಅವರು ದೆಹಲಿಗೆ ತೆರಳುತ್ತಿದ್ದಾರೆ. ಕೈ ನಾಯಕರ ದೆಹಲಿ ಪ್ರವಾಸ ನಾನಾ ರೀತಿಯ ವ್ಯಾಖ್ಯಾನಕ್ಕೆ ಗ್ರಾಸವಾಗುತ್ತಿದೆ.

ಸಿಎಂ ಸಿದ್ದರಾಮಯ್ಯ ಅವರ ದೆಹಲಿ ಪ್ರವಾಸ ಈಗಾಗಲೇ ನಿಗದಿಯಾಗಿದೆ. ನವೆಂಬರ್ 14 ರಂದು ಸಿದ್ದರಾಮಯ್ಯ ದೆಹಲಿಗೆ ತೆರಳಲಿದ್ದಾರೆ. ಅಷ್ಟೇ ಅಲ್ಲದೆ ಡಿಸಿಎಂ ಡಿಕೆ ಶಿವಕುಮಾರ್ ಕೂಡಾ ದೆಹಲಿಗೆ ತೆರಳಲಿದ್ದಾರೆ.ಇನ್ನು ಇವೆಲ್ಲದರ ನಡುವೆ ಸತೀಶ್ ಜಾರಕಿಹೊಳಿ ಸಹ ದೆಹಲಿ ಪ್ರವಾಸ ಮಾಡಲು ಸಿದ್ದವಾಗಿರುವುದು ಭಾರೀ ಕುತೂಹಲಕ್ಕೆ ಎಡೆಮಾಡಿಕೊಟ್ಟಿದೆ.

**ಸತೀಶ್ ದಿಢೀರ್ ಪ್ರವಾಸ ಏಕೆ:** ಸಿಎಂ ಬದಲಾವಣೆ ಚರ್ಚೆಯ ನಡುವೆ ಸತೀಶ್ ಜಾರಕಿಹೊಳಿ ಹೆಸರು ಮುನ್ನಲೆಗೆ ಬಂದಿದೆ. ಸಿದ್ದರಾಮಯ್ಯ ಅವರ ಪುತ್ರ ಯತೀಂದ್ರ ಅವರು ಸತೀಶ್ ಅವರ ಹೆಸರು ಉಲ್ಲೇಖಿಸಿ ಸಿದ್ದರಾಮಯ್ಯ ಅವರ ಉತ್ತರಾಧಿಕಾರಿ ಎಂದು ಬಿಂಬಿಸಿದ್ದರು. ಇದು ಕಾಂಗ್ರೆಸ್ ಪಾಳೆಯದಲ್ಲಿ ಸಂಚಲನ ಸೃಷ್ಟಿ ಮಾಡಿತ್ತು.

ಆದರೆ ನಾನು ಸಿಎಂ ಆಕಾಂಕ್ಷಿ ಅಲ್ಲ. ಬದಲಾಗಿ 2028 ಕ್ಕೆ ಸಿಎಂ



ಸ್ಥಾನದ ಆಕಾಂಕ್ಷಿಯಾಗಿದ್ದೇನೆ ಎಂದು ಸತೀಶ್ ಹೇಳಿಕೆ ನೀಡಿದ್ದರು. ಯತೀಂದ್ರ ಅವರ ಹೇಳಿಕೆಯ ಮೂಲಕ ಸತೀಶ್ ಹೆಸರು ಸುದ್ದಿಯ ಕೇಂದ್ರ ಬಿಂದುವಿಗೆ ಬಂದಿತ್ತು. ಆದರೆ ಜಾರಕಿಹೊಳಿ ಮಾತ್ರ ಸೈಲೆಂಟಾಗಿದ್ದರು. ಆದರೆ ಇದೀಗ ದಿಢೀರ್ ಆಗಿ ದೆಹಲಿ ಪ್ರವಾಸಕ್ಕೆ ಮುಂದಾಗಿದ್ದು, ಸೈಲಂಟಾಗೆ ಹೊಸ ತಂತ್ರವೇನಾದರೂ ಹೆಣೆಯುತ್ತಿದ್ದಾರಾ ಎಂಬ ಪ್ರಶ್ನೆ ಮನೆಮಾಡಿದೆ.

**ಸಿಎಂ, ಡಿಸಿಎಂ ದೆಹಲಿ ಯಾತ್ರೆ:** ಸತೀಶ್ ಅಷ್ಟೇ ಅಲ್ಲ, ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಕೂಡಾ ದೆಹಲಿ ಪ್ರವಾಸ ಕೈಗೊಳ್ಳುತ್ತಿದ್ದಾರೆ. ಇವರ ಜೊತೆಗೆ ಕೆಲವು ಸಚಿವರು ಸಾಥ್ ನೀಡಲಿದ್ದಾರೆ.

ಕಪಿಲ್ ಸಿಬಲ್ ಅವರ ಪುಸ್ತಕ ಬಿಡುಗಡೆ ಕಾರ್ಯಕ್ರಮಕ್ಕೆ ಇವರೆಲ್ಲಾ ತೆರಳಲಿದ್ದಾರೆ. ಆದರೆ ಇದೇ ನೆಪದಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುವ ಉದ್ದೇಶ ಅಡಗಿದೆ ಎಂಬ ಚರ್ಚೆಗಳು ರಾಜಕೀಯ ವಲಯದಲ್ಲಿ ಜೋರಾಗಿ ನಡೆಯುತ್ತಿದೆ.

ಸದ್ಯ ಹೈಕಮಾಂಡ್ ನಾಯಕರು ಬಿಹಾರ ಚುನಾವಣೆಯಲ್ಲಿ ಬ್ಯುಸಿಯಾಗಿದ್ದಾರೆ. ಬಿಹಾರದಲ್ಲಿ ಮೊದಲ ಹಂತದ ಚುನಾವಣೆ ನವೆಂಬರ್ 6 ಹಾಗೂ ಎರಡನೇ ಹಂತದ ಚುನಾವಣೆ ನವೆಂಬರ್ 11 ರಂದು ನಡೆಯಲಿದೆ. ಬಿಹಾರ ಚುನಾವಣೆಯ ಬಳಿಕ ಹೈಕಮಾಂಡ್ ನಾಯಕರು ದೆಹಲಿಯಲ್ಲಿ ಕರ್ನಾಟಕದ ರಾಜಕೀಯ ಬೆಳವಣಿಗೆಗಳ ಬಗ್ಗೆ ಗಮನ ಸೆಳೆಯುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಸಿಎಂ ಹಾಗೂ ಡಿಸಿಎಂ ದೆಹಲಿ ಪ್ರವಾಸ ಮಹತ್ವ ಪಡೆದುಕೊಳ್ಳುತ್ತಿದೆ.

## ಆಹಾರ ಸುರಕ್ಷತೆಗೆ ಮಾನದಂಡ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ

• **ಉದಯವಾಹಿನಿ, ಬೆಂಗಳೂರು**

ಬೀದಿ ಬದಿ ವ್ಯಾಪಾರಿಗಳು, ದೊಡ್ಡ-ದೊಡ್ಡ ರೆಸ್ಟೋರೆಂಟ್‌ಗಳು ಆರೋಗ್ಯ ಸುರಕ್ಷತಾ ಮಾನದಂಡ ನಿಯಮಗಳನ್ನು ಚಾಚೂ ತಪ್ಪದೆ ಅನುಸರಣೆ ಮಾಡುವ ಜತೆಗೆ, ನಿಯಮಗಳ ಕಟ್ಟುನಿಟ್ಟಿನ ಅನುಷ್ಠಾನದ ಬಗ್ಗೆ ನಿಗಾ ಇರಿಸುವುದಕ್ಕೆ ಸೂಕ್ತ ಕಾರ್ಯ ವಿಧಾನವೊಂದನ್ನು ರೂಪಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಮಹತ್ವದ ನಿರ್ದೇಶನ ನೀಡಿದೆ. ಕರ್ನಾಟಕ ಪ್ರದೇಶ ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳ ಸಂಘದ ಗೌರವ ಕಾರ್ಯದರ್ಶಿ ನಾಗರಾಜ ಧನ್ಯ, ಬೃಹತ್ ಬೆಂಗಳೂರು ಹೋಟೆಲ್‌ಗಳ ಸಂಘದ ಅಧ್ಯಕ್ಷ ಕೆ.ಎನ್. ವಾಸುದೇವ ಅಡಿಗ ಸಲ್ಲಿಸಿದ್ದ ರಿಟ್ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಕುರಿತಂತೆ ತೀರ್ಪು ನೀಡಿದೆ. ಮನುಷ್ಯರ ಆರೋಗ್ಯಕ್ಕೆ ಎದುರಾಗುವ ಅಪಾಯಗಳ ಬಗ್ಗೆ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಕಾಯ್ದೆ-2006ರ ನಿಯಮಗಳ ಅಡಿಯಲ್ಲಿ ಸಣ್ಣ, ಮಧ್ಯಮ ಮತ್ತು ಬೃಹತ್ ರೆಸ್ಟೋರೆಂಟ್‌ಗಳಿಗೆ ತ್ರಿಪಕ್ಷೀಯ ಮಾರ್ಗಸೂಚಿಯೊಂದನ್ನು ರೂಪಿಸಬೇಕು ಎಂದೂ ನ್ಯಾಯಪೀಠ ಇದೇ ವೇಳೆ ಕೇಂದ್ರ ಸರ್ಕಾರಕ್ಕೆ ಖಡಕ್ ತಾಕೀತು ಮಾಡಿದೆ. ಅರ್ಜಿದಾರರು ಆಕ್ಷೇಪಿಸಿರುವ ನಿಬಂಧನೆಗಳನ್ನು ಅಸಂವಿಧಾನಿಕ ಎಂದು ನಿರ್ಣಯಿಸಿ ಅವುಗಳನ್ನು ರದ್ದುಗೊಳಿಸಲು ಯಾವುದೇ ಕಾರಣಗಳಿಲ್ಲ ಎಂದು ಸ್ಪಷ್ಟಪಡಿಸಿದೆ.

## ಕಿರ್ಲೋಸ್ಕರ್ ಫೆರೋಸ್‌ನಿಂದ 3000 ಕೋಟಿ ಹೂಡಿಕೆ

• **ಉದಯವಾಹಿನಿ, ಬೆಂಗಳೂರು**

ಕಿರ್ಲೋಸ್ಕರ್ ಫೆರೋಸ್ ಇಂಡಸ್ಟ್ರೀಸ್ ರಾಜ್ಯದಲ್ಲಿ ಮುಂದಿನ ಮೂರು ವರ್ಷಗಳಲ್ಲಿ 3,000 ಕೋಟಿ ಬಂಡವಾಳ ಹೂಡಿಕೆ ಮಾಡಲಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ರಾಜ್ಯದ ಕೈಗಾರಿಕೆ ಮತ್ತು ವಾಣಿಜ್ಯ ಉನ್ನತಮಟ್ಟದ ನಿಯೋಗದೊಂದಿಗೆ ಪುಣೆಯಲ್ಲಿ ರೋಡ್ ಶೋ ನಡೆಸಿ, ಹೂಡಿಕೆ ಕುರಿತು ಹತ್ತಕ್ಕೂ ಹೆಚ್ಚು ಉದ್ಯಮಿಗಳ ಜತೆ ಅವರು ಮಾತುಕತೆ ನಡೆಸಿದರು.


ರಾಜ್ಯದಲ್ಲಿ ಬಂಡವಾಳ ಹೂಡಲು ವಿಪ್ರೊ ಪ್ಯಾರಿ, ಅಟ್ಲಾಸ್ ಕಾಪ್ರೊ, ಬೆಲ್-ರೈಸ್ ಇಂಡಸ್ಟ್ರೀಸ್, ಫಿನೋಲೆಕ್ಸ್ ಮತ್ತು ಫ್ಲೋಯಿಡ್ ಕಂಟ್ರೋಲ್ಸ್ ಲಿಮಿಟೆಡ್ ಉದ್ಯಮಗಳು ಆಸಕ್ತಿ ತೋರಿಸಿವೆ. ಬಂಡವಾಳ ತೊಡಗಿಸಲು ಮುಂದಾಗಿರುವ ಈ ಕಂಪನಿಗಳಿಗೆ ಭೂಮಿ, ಮೂಲಸೌಕರ್ಯ ಮುಂತಾದ ಅನುಕೂಲಗಳ ಜತೆಗೆ ಹೆಚ್ಚಿನ ಸಹಕಾರ ನೀಡಲಾಗುವುದು ಎಂದರು. 'ಕಿರ್ಲೋಸ್ಕರ್ ಫೆರೋಸ್ ಈಗಾಗಲೇ ಹಿರಿಯೂರಿನಲ್ಲಿ ತನ್ನ ಘಟಕ ಹೊಂದಿದ್ದು, ಅದನ್ನು ಮೇಲ್ದರ್ಜೆಗೇರಿಸಲು ಮುಂದಾಗಿದೆ. ಉಕ್ಕು ಉತ್ಪಾದನಾ ಘಟಕದ ಸಾಮರ್ಥ್ಯ ಹೆಚ್ಚಳ, ಕಬ್ಬಿಣದ ಅದಿರು ಸಂಸ್ಕರಣೆ ಹೆಚ್ಚಳ, ಮುಂತಾದ ಯೋಜನೆಗಳನ್ನು ಕೈಗೆತ್ತಿಕೊಳ್ಳಲಿದೆ' ಎಂದರು.

## ಸುರಂಗ ರಸ್ತೆ ಅನುಮಾನಗಳಿಗೆ ಉತ್ತರ ಕೊಡಿ: ಎಸ್.ಆರ್.ವಿಶ್ವನಾಥ್

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ಸುರಂಗ ರಸ್ತೆ ನಿರ್ಮಾಣ ಮಾಡುವ ಕುರಿತು ಸರ್ಕಾರ ಜನಾಭಿಪ್ರಾಯ ಕೇಳಿಲ್ಲ, ತಜ್ಞರ ವರದಿ ಪಡೆದಿಲ್ಲ. ಮಣ್ಣಿನ ಪರೀಕ್ಷೆ ನಡೆಸಿಲ್ಲ. ತರಾತುರಿಯಲ್ಲಿ ಟೆಂಡರ್ ಕರೆದಿದ್ದಾರೆ. ಶಾಸಕರು, ತಜ್ಞರಿಗೆ ಪ್ರಾತ್ಯಕ್ಷಿಕೆ ತೋರಿಸಿ ಎಲ್ಲಾ ಅನುಮಾನಗಳನ್ನು ಬಗೆಹರಿಸಬೇಕಿತ್ತು ಎಂದು ಬಿಜೆಪಿ ಶಾಸಕ ಎಸ್.ಆರ್.ವಿಶ್ವನಾಥ್ ಹೇಳಿದ್ದಾರೆ.

ಯಾರ ಮಾತು ಕೇಳದೇ ಯೋಜನೆ ಮಾಡೇ ತೀರುತ್ತೇವೆ ಎಂದು ಹಟ ಹಿಡಿದು ಹೊರಟರೆ ಸಹಜವಾಗಿ ವಿರೋಧಿಸುತ್ತೇವೆ ಎಂದು ಅವರು ಸುದ್ದಿಗಾರರ ಜತೆ ಮಾತನಾಡಿ ತಿಳಿಸಿದರು. ನಮ್ಮ ಪಕ್ಷದ ಮುಖಂಡರು ಕೆಲವು ವೈಜ್ಞಾನಿಕ ಅಂಶಗಳನ್ನು ಮುಂದಿಟ್ಟುಕೊಂಡು ಪ್ರಶ್ನಿಸಿದ್ದಾರೆ. ಸುರಂಗ ರಸ್ತೆ ಕನಿಷ್ಠ 60 ಅಡಿ ಆಳದಲ್ಲಿ ನಿರ್ಮಿಸಬೇಕಾಗುತ್ತದೆ. ಎಲ್ಲಿ ಗಟ್ಟಿ ಬಂಡೆ, ಮಣ್ಣು ಇದೆ. ಮೃದು ಬಂಡೆಗಳು ಎಲ್ಲೆಲ್ಲಿವೆ ನೀರಿನ ಹರಿವು ಇದೆಯೇ ಕಟ್ಟಡಗಳು ಸುರಕ್ಷಿತವಾಗಿರುತ್ತವೆಯೇ ಎಂಬುದನ್ನು ಪರಿಶೀಲನೆ ಮಾಡದೇ ಒಪ್ಪಿಗೆ ನೀಡಿರುವುದು ಅವ್ಯವಹಾರದ ಬಗ್ಗೆ ಸಂಶಯ ಮೂಡುವಂತೆ ಮಾಡಿದೆ ಎಂದು ಅವರು ದೂರಿದರು.



ಕನಸಿನ 2 ಯೋಜನೆಗಳಿಗೆ ಎರಡು ಪಕ್ಷಗಳ ಅಡ್ಡಗಾಲು!

## ಜೆಡಿಎಸ್-ಬಿಜೆಪಿ ಸವಾಲು

# ಡಿಕೆಶಿ ಕನಸಿಗೆ ಅಡ್ಡಗಾಲು

**ಟೌನ್‌ಶಿಪ್‌ಗೆ ಜೆಡಿಎಸ್ ಅಡ್ಡಿ**

**ಸುರಂಗಕ್ಕೆ ಬಿಜೆಪಿ ವಿರೋಧ!**







• **ಉದಯವಾಹಿನಿ, ಬೆಂಗಳೂರು**

ಡಿಸಿಎಂ ಡಿಕೆ ಶಿವಕುಮಾರ್ ಅವರ ಕನಸಿನ ಎರಡು ಯೋಜನೆಗಳಿಗೆ ಆರಂಭಿಕ ಹಂತದಲ್ಲೇ ಅಡ್ಡಿ ಆತಂಕಗಳು ಎದುರಾಗಿವೆ. ಬಿಡದಿಯಲ್ಲಿ ಟೌನ್ ಶಿಪ್ ಯೋಜನೆಗೆ ಡಿಕೆಶಿ ಮುಂದಾಗಿದ್ದಾರೆ. ಆದರೆ ಜೆಡಿಎಸ್ ಇದಕ್ಕೆ ಪೂರ್ಣಪ್ರಮಾಣದಲ್ಲಿ ವಿರೋಧಿಸಲು ನಿರ್ಧಾರ ಮಾಡಿದೆ. ಡಿಸಿಎಂ ವಿರುದ್ಧ ಈಗಾಗಲೇ ಹೋರಾಟ ನಡೆಸಿದೆ. ಈ ನಡುವೆ ಬೆಂಗಳೂರಿನಲ್ಲಿ ಸುರಂಗ ಮಾರ್ಗಕ್ಕೂ ಅಡ್ಡಿ ಉಂಟಾಗಿದೆ. ಸುರಂಗ ಮಾರ್ಗ ಅವೈಜ್ಞಾನಿಕ ಎಂದು ಬಿಜೆಪಿ ವಾದಿಸುತ್ತಿದೆ. ವಿಪಕ್ಷದ ಬಾಣಗಳನ್ನು ಎದುರಿಸಲು ಶಿವಕುಮಾರ್ ಪರದಾಟ ನಡೆಸುವಂತಾಗಿದೆ.

**ಏನಿದು ಬಿಡದಿ ಟೌನ್ ಶಿಪ್**

ಬೃಹತ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್‌ಶಿಪ್ ಯೋಜನೆಗೆ ವಿರೋಧ ವ್ಯಕ್ತವಾಗಿದೆ. ಟೌನ್ ಶಿಪ್ ನಿಂದ ರೈತರಿಗೆ ಅನ್ಯಾಯ ಆಗಲಿದೆ ಎಂದು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ, ನಿಖಿಲ್ ಕುಮಾರಸ್ವಾಮಿ ಆದಿಯಾಗಿ ಜೆಡಿಎಸ್ ನಾಯಕರಿಂದ ವಿರೋಧ ವ್ಯಕ್ತವಾಗಿತ್ತು. ಈ ನಡುವೆ ಸರ್ಕಾರದ ವಿರುದ್ಧ ಬಿಡದಿಯಲ್ಲಿ ರೈತ ಮಹಿಳೆಯರ ಶಕ್ತಿಪ್ರದರ್ಶನ ನಡೆಸಿದ್ದಾರೆ.. ನಾವು ಭೂಮಿ ಕೊಡುವುದಿಲ್ಲ ಎಂದು ಎಚ್ಚರಿಸಿದ್ದಾರೆ.


ಬಿಡದಿಯ ಭೈರಮಂಗಲ-ಕಂಚುಗಾರನಹಳ್ಳಿ ಪಂಚಾಯತಿ ವ್ಯಾಪ್ತಿಯಲ್ಲಿ ರಾಜ್ಯ ಸರ್ಕಾರ 'ನ್ಯೂ ಟೌನ್ ಶಿಪ್' ಯೋಜನೆ ರೂಪಿಸಲು ಮುಂದಾಗಿದೆ. ಸರ್ಕಾರದ ಈ ಯೋಜನೆಗೆ ಸುಮಾರು 9,600 ಎಕರೆ ರೈತರ ಕೃಷಿಭೂಮಿಯ ಅಗತ್ಯ ಇದೆ. ಇದನ್ನು ಸ್ವಾಧೀನಕ್ಕೆ ಮುಂದಾಗಿದೆ. ಆದರೆ ರೈತರಿಂದ ಇದಕ್ಕೆ ಭಾರೀ ವಿರೋಧ ವ್ಯಕ್ತವಾಗಿದೆ. ಯಾವುದೇ ಕಾರಣಕ್ಕೂ ಭೂಮಿ ಕೊಡುವುದಿಲ್ಲ ಎಂದು ರೈತರು ಪಟ್ಟು ಹಿಡಿದಿದ್ದಾರೆ.

**ಇದೀಗ ಸುರಂಗ ಮಾರ್ಗದ ಸರದಿ:** ಈ ನಡುವೆ ಡಿಸಿಎಂ ಡಿಕೆ ಶಿವಕುಮಾರ್ ಅವರು ಬೆಂಗಳೂರಿನಲ್ಲಿ ಸುರಂಗ ಮಾರ್ಗ ನಿರ್ಮಾಣಕ್ಕೆ ಮುಂದಾಗಿದ್ದಾರೆ. ಬೆಂಗಳೂರಿನ ಟ್ರಾಫಿಕ್ ಸಮಸ್ಯೆಗೆ ಪರಿಹಾರ ನೀಡಲು ಸುರಂಗ ಮಾರ್ಗವೊಂದೇ ಪರಿಹಾರ ಎಂಬುವುದು ಡಿಕೆ ಶಿವಕುಮಾರ್ ವಾದವಾಗಿದೆ. ಈ ನಿಟ್ಟಿನಲ್ಲಿ ಸುರಂಗ ಮಾರ್ಗ ಮಾಡಿಯೆ ಸಿದ್ದ ಎಂದು ಪಟ್ಟು ಹಿಡಿದಿದ್ದಾರೆ. ಈ ಪೂರ್ವ-ಪಶ್ಚಿಮ ಕಾರಿಡಾರ್ ಸುರಂಗ ಮಾರ್ಗ ಬೆಂಗಳೂರಿನ ಕೆ.ಆರ್.ಪುರದಿಂದ ಜವಾಹರಲಾಲ್ ನೆಹರೂ ಪಾರ್ಕ್, ಸಿ.ವಿ. ರಾಮನ್ ಆಸ್ಪತ್ರೆ, ಇಂದಿರಾನಗರ, ದೊಮ್ಮಲೂರು, ಲಾಲ್‌ಬಾಗ್, ನ್ಯಾಷನಲ್ ಕಾಲೇಜು, ಚಾಮರಾಜಪೇಟೆ, ಕಾರ್ಯಸಿದ್ಧಿ ಆಂಜನೇಯ ದೇವಸ್ಥಾನ ಹಾಗೂ ನಾಯಂಡಹಳ್ಳಿ ಬಳಿಯ ನೈಸ್ ರಸ್ತೆ ಜಂಕ್ಷನ್‌ವರೆಗೆ ನಿರ್ಮಾಣವಾಗಲಿದೆ.

ವಿರೋಧ ಏಕೆ: ಐದು ಪಥಗಳಾಗಿ ಈ ಟ್ವಿನ್ ಟ್ಯೂಬ್ ಟನಲ್ ಅನ್ನು ನಿರ್ಮಿಸಲು ಉದ್ದೇಶಿಸಲಾಗಿದ್ದು, ಮೇಲೆ ಎರಡು ಹಾಗೂ ಕೆಳಗೆ ಮೂರು ಪಥಗಳು ಬರಲಿವೆ. ಈ ಮಾರ್ಗದಲ್ಲಿ ಪ್ರತಿ ಗಂಟೆಗೆ ಸುಮಾರು 4,500 ವಾಹನಗಳು ಸುಗಮವಾಗಿ ಸಂಚರಿಸಬಹುದು ಎಂದು ಹೇಳಲಾಗಿದೆ. ಅಲ್ಲದೆ ಮಾರ್ಗಮಧ್ಯೆ ಎಮರ್ಜೆನ್ಸಿಗಾಗಿಯೂ ಒಂದು ಪಥವನ್ನು ಮೀಸಲಿಡಲಾಗುವುದು. ಇದರಿಂದ ನಿರ್ಮಾಣ ವೆಚ್ಚ ಕೂಡ ತಗ್ಗಲಿದೆ ಎಂದು ಹೇಳಲಾಗುತ್ತಿದೆ. ಆದರೆ ಇದಕ್ಕೆ ಬಿಜೆಪಿ ತೀವ್ರ ವಿರೋಧ ವ್ಯಕ್ತಪಡಿಸಿದೆ. ಟನೆಲ್ ರಸ್ತೆಗೆ 43 ಸಾವಿರ ಕೋಟಿ ಖರ್ಚು ಆಗಲಿದೆ. ಹೊಸ 18 ಕಿಮೀ ಸುರಂಗ ಮಾರ್ಗ ರಚನೆಯಿಂದ ಬೆಂಗಳೂರಿನ ಎಲ್ಲ ಟ್ರಾಫಿಕ್ ಸಮಸ್ಯೆ ಪರಿಹಾರ ಹೇಗೆ ಸಾಧ್ಯ, ದುರಂತ ನಿಭಾಯಿಸುವುದು ಹೇಗೆ ಸಾರಿಗೆ ಸಾಧ್ಯತೆ ಕುರಿತು ಅಧ್ಯಯನ ನಡೆದಿಲ್ಲ; ತಜ್ಞರು ಹೇಳಿದ್ದನ್ನೂ ಕೇಳುತ್ತಿಲ್ಲ ಎಂಬುವುದು ಸಂಸದ ತೇಜಸ್ವಿ ಸೂರ್ಯ ವಾದವಾಗಿದೆ. ಇದಕ್ಕೆ ಅವರು ಕೆಲವೊಂದ ಪರ್ಯಾಯವನ್ನು ಸೂಚಿಸಿದ್ದಾರೆ. ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಬೆಂಗಳೂರಿನ ಶೇ 70 ಜನರು ಸಾರ್ವಜನಿಕ ಸಾರಿಗೆಯಲ್ಲಿ ಓಡಾಡುವಂತಾಗಬೇಕು. ಆ ನಿಟ್ಟಿನಲ್ಲಿ 5 ಅಂಶಗಳನ್ನು ಮುಂದಿಟ್ಟದ್ದೇವೆ. ಎಲ್ಲಾ ಯೋಜನೆಗಳು ವಿಳಂಬವಾಗಿವೆ ಮತ್ತು ನಿಧಾನವಾಗಿವೆ. ಹೊಸ ಯೋಜನೆಗಳನ್ನು ಆರಂಭಿಸುವ ಮೊದಲು ಬಾಕಿ ಇರುವ ಯೋಜನೆ ಮುಗಿಸಿ. ಕಡಿಮೆ ಸಮಯ, ಕಡಿಮೆ ಖರ್ಚಿನಲ್ಲಿ ಅತಿ ಹೆಚ್ಚು ಜನರಿಗೆ ಪ್ರಯೋಜನ ಲಭಿಸಬೇಕಿದೆ. ಕಾರುಗಳಿಗೆ ಆದ್ಯತೆ ಕೊಡುವ ಹಾಗೆ ಇರಬಾರದು ಎಂಬುವುದು ಅವರ ವಾದವಾಗಿದೆ.



ಟನಲ್ ರೋಡ್ ವಿವಾದವನ್ನು ತೀವ್ರಗೊಳಿಸಲು ಬಿಜೆಪಿ ನಿರ್ಧಾರ ಮಾಡಿದೆ. ಈಗಾಗಲೇ ಆರ್ ಅಶೋಕ್ ನೇತೃತ್ವದಲ್ಲಿ ಲಾಲ್‌ಬಾಗ್‌ನಲ್ಲಿ ಪ್ರತಿಭಟನೆ ನಡೆದಿದೆ. ಇನ್ನು ಬೆಂಗಳೂರಿನ ಬಿಜೆಪಿ ಶಾಸಕರು ಟನಲ್ ರಸ್ತೆಗೆ ತೀವ್ರ ವಿರೋಧ ಸೂಚಿಸಿದ್ದಾರೆ. ಇದು ದುಡ್ಡು ದೋಚುವ ಯೋಜನೆ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಹೀಗಾಗಿ ವಿಪಕ್ಷಗಳ ನಡೆ ಡಿಕೆಶಿಗೂ ತಲೆನೋವು ಉಂಟು ಮಾಡಿದೆ. ಆರ್ ಅಶೋಕ್ ನೇತೃತ್ವದಲ್ಲೇ ಸಮಿತಿ ರಚನೆ ಮಾಡುವ ಆಫರ್ ನೀಡಿದ್ದರು. ಆದರೆ ಅದನ್ನು ಅಶೋಕ್ ತಿರಸ್ಕರಿಸಿದ್ದಾರೆ. ಅತ್ತ, ತೇಜಸ್ವಿ ಸೂರ್ಯ ಅವರು ಟನಲ್ ಯೋಜನೆಗೆ ಪರ್ಯಾಯ ಯೋಜನೆಯೊಂದನ್ನು ಜಾರಿಗೊಳಿಸಿದ್ದಾರೆ.



**ವಿರೋಧ ತೀವ್ರಗೊಳಿಸಲು ಬಿಜೆಪಿ ನಿರ್ಧಾರ**

**ಡಿಕೆಶಿ ಪಟ್ಟು ಸಡಿಲಿಸುತ್ತಾರಾ**

ಇದೆಲ್ಲದರ ನಡುವೆಯೇ ಸುರಂಗ ಯೋಜನೆಯಿಂದ ಲಾಲ್ ಬಾಗ್‌ನ 6 ಎಕರೆಯಷ್ಟು ಜಾಗವನ್ನು ವಶಪಡಿಸಿಕೊಂಡು ಕಾಮಗಾರಿ ನಡೆಸಬೇಕಾಗುತ್ತದೆ ಎಂದು ಯೋಜನೆಯ ಪೂರ್ವಭಾವಿ ಅಂದಾಜಿನಲ್ಲಿ ಗೊತ್ತಾಗಿದೆ. ಇದೂ ಸಹ ಪರಿಸರವಾದಿಗಳ ವಿರೋಧಕ್ಕೆ ಕಾರಣವಾಗಿದೆ. ಟೌನ್ ಶಿಫ್ ಮತ್ತು ಸುರಂಗ ಮಾರ್ಗ ವಿಚಾರವಾಗಿ ಡಿಕೆ ಶಿವಕುಮಾರ್ ವಿಪಕ್ಷಗಳ ವಾದಕ್ಕೆ ಕಿವಿಯಾಗುತ್ತಾರಾ ಎಂಬ ಕುತೂಹಲ ಕೆರಳಿಸಿದೆ. ಕೆಲವೊಂದು ಅನುಮಾನಗಳಿಗೆ ಉತ್ತರ ಕೊಡಬೇಕು ಹಾಗೂ ಯೋಜನೆಯ ಕುರಿತಾಗಿ ಪಾರದರ್ಶಕವಾಗಿ ನಡೆದುಕೊಳ್ಳಬೇಕು ಎಂಬ ಬೇಡಿಕೆ ಬಿಜೆಪಿ ನಾಯಕರದ್ದು. ಈ ನಿಟ್ಟಿನಲ್ಲಿ ಡಿಕೆಶಿ ಮುಂದಿನ ನಡೆ ಏನು ಎಂಬುವುದು ಕಾದುನೋಡಬೇಕಾಗಿದೆ.


## ಭಾರೀ ಸ್ಫೋಟದ ಸದ್ದಿನೊಂದಿಗೆ ನಡುಗಿದ ಭೂಮಿ

# ರಾಜ್ಯದಲ್ಲಿ ಮತ್ತೆ ಭೂಕಂಪನ

• **ಉದಯವಾಹಿನಿ, ವಿಜಯಪುರ**

ಉತ್ತರ ಕರ್ನಾಟಕದ ವಿಜಯಪುರ ಜಿಲ್ಲೆಯಲ್ಲಿ ಮತ್ತೊಮ್ಮೆ ಭೂಕಂಪನ ಸಂಭವಿಸಿದೆ. ಬೆಳಿಗ್ಗೆ 7:49ರ ಸುಮಾರಿಗೆ ಭಾರೀ ಸ್ಫೋಟದ ಸದ್ದಿನೊಂದಿಗೆ ಭೂಮಿ ನಡುಗಿದೆ. ಜನರು ಬೆಳಗ್ಗೆಯೇ ಭೂಮಿ ನಡುಗುತ್ತಿರುವ ಅನುಭವ ಪಡೆದಿದ್ದಾರೆ. ಭಾರೀ ಸ್ಫೋಟದಂತಹ ಜೋರಾದ ಧ್ವನಿಯೊಂದಿಗೆ ಭೂಮಿ ಕಂಪಿಸಿದ್ದು, ಸ್ಥಳೀಯರು ಭಯಭೀತರಾಗಿ ಮನೆಗಳಿಂದ ಹೊರಬಂದಿದ್ದಾರೆ. ಇದು ಕಳೆದ ಎರಡು ತಿಂಗಳಲ್ಲಿ 13ನೇ ಬಾರಿಗೆ ಭೂಕಂಪನ ಸಂಭವಿಸಿದ್ದು, ಜನರು ಕಂಗಾಲಾಗಿದ್ದಾರೆ. ರಾಜ್ಯದ ವಿಜಯಪುರ ಜಿಲ್ಲೆಯಲ್ಲಿ ಪದೇ ಪದೇ ಇಂತಹ ಭೂಕಂಪನಗಳು ಸಂಭವಿಸುತ್ತಿರುವುದರಿಂದ ಜನರಲ್ಲಿ ಆತಂಕ ಹೆಚ್ಚಾಗಿದೆ. ಸರಣಿ ಭೂಕಂಪನದಿಂದ ಕಂಗೆಟ್ಟ ಜನ ಭಯದಲ್ಲಿದ್ದಾರೆ, ಭೂಮಿ ನಡುಗಿದ ಶಬ್ದದಿಂದ ಬೆಚ್ಚಿಬಿದ್ದಿದ್ದಾರೆ.

**ವಿಜಯಪುರದಲ್ಲಿ ಬೆಳಗ್ಗೆಯೇ ಭೂಕಂಪನ!:** ಸುಮಾರು ರಿಕ್ಟರ್ ಮಾಪಕದಲ್ಲಿ 3.1 ತೀವ್ರತೆಯ ಕಂಪನ ಸಂಭವಿಸಿರುವ ಸಾಧ್ಯತೆ ಇದೆ. ಈ ಕಂಪನವು ವಿಜಯಪುರ ನಗರ, ತಿಕೋಟ, ಕಳ್ಳಕವಟಗಿ,





ತೊರವಿ, ಶಿವಗಿರಿ, ಹೊನ್ನೂಟಗಿ ಸೇರಿದಂತೆ ತಾಲ್ಲೂಕುಗಳಲ್ಲಿ ಅನುಭವವಾಗಿದೆ.

**13ನೇ ಭೂಕಂಪನ**

ವಿಜಯಪುರ ಜಿಲ್ಲೆಯಲ್ಲಿ ಕಳೆದ ಎರಡು ತಿಂಗಳಲ್ಲಿ ಇದು 13ನೇ ಭೂಕಂಪನ. ಅಕ್ಟೋಬರ್‌ನಲ್ಲಿ 2.9 ತೀವ್ರತೆಯ ಕಂಪನವು ಹಟ್ಟರಕಿಹಾಳ್ ಗ್ರಾಮದ ಬಳಿ ಸಂಭವಿಸಿತ್ತು. ಸೆಪ್ಟೆಂಬರ್‌ನಲ್ಲಿ 2.5 ತೀವ್ರತೆಯ ಭೂಕಂಪವು ಸಮೀಪದಲ್ಲಿ ಅನುಭವವಾಗಿತ್ತು. ಈ ಸರಣಿ ಭೂಕಂಪನಗಳು ಜನರಲ್ಲಿ ಭಯವನ್ನು ಹೆಚ್ಚಿಸಿವೆ. ಹಿಂದೆ ಒಂದು ವರ್ಷಕ್ಕೊಮ್ಮೆ ಬರುತ್ತಿತ್ತು, ಈಗ ಎಲ್ಲಾ ದಿನ ಕಂಪನ. ಮನೆಗಳು ಸುರಕ್ಷಿತನಾ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸುತ್ತಿದ್ದಾರೆ.

ಸಿಸಿಟಿವಿ ಕ್ಯಾಮೆರಾಗಳಲ್ಲಿ ಸೆರೆಯಾದ ವಿಡಿಯೋಗಳು ಭೂಕಂಪನದ ತೀವ್ರತೆಯನ್ನು ತೋರಿಸುತ್ತಿವೆ. ಭಾರೀ ಸ್ಫೋಟದ ಸದ್ದಿನೊಂದಿಗೆ ಭೂಮಿ ನಡುಗಿದ ದೃಶ್ಯ ಮತ್ತು ಶಬ್ಧ ಎರಡು ಸಿಸಿಟಿವಿ ಕ್ಯಾಮೆರಾದಲ್ಲಿ ಸರೆಯಾಗಿದ್ದು ಜನರಲ್ಲಿ ಆತಂಕ ಹೆಚ್ಚಿಸಿದೆ.

**ಭಾರೀ ಸ್ಫೋಟದ ಶಬ್ಧದೊಂದಿಗೆ ನಡುಗಿದ ಭೂಮಿ!:** ಭೂಕಂಪನದ ಸಮಯದಲ್ಲಿ ಜನರು ಭೂಮಿ ನಡುಗುತ್ತಿರುವಂತೆ ಭಾಸವಾಯಿತು. ಭಾರೀ ಸ್ಫೋಟದಂತಹ ಧ್ವನಿ ಕೇಳಿ, ಗೋಡೆಗಳು ನಡುಗಿದಂತೆ ಆಯಿತು. ಭಯಪಟ್ಟು ಮಕ್ಕಳನ್ನು ಕರೆದುಕೊಂಡು ಹೊರಬಂದೆವು ಎಂದು ವಿಜಯಪುರ ನಗರದ ನಿವಾಸಿಗಳು ಹೇಳಿದ್ದಾರೆ. ತಿಕೋಟ ತಾಲ್ಲೂಕಿನ ಕಳ್ಳಕವಟಗಿಯಲ್ಲಿ ಸಹ ಜನರು ಭಯಭೀತರಾಗಿ ರಸ್ತೆಗೆ ಓಡಿದ್ದಾರೆ. ಸಿಸಿಟಿವಿ ಫೂಟೇಜ್‌ಗಳಲ್ಲಿ ಜೋರಾದ ಧ್ವನಿ ಮತ್ತು ಕಂಪನದ ಸೆರೆಗಳು ಸಾಮಾಜಿಕ ಮಾಧ್ಯಮದಲ್ಲಿ ಹರಡಿವೆ. ಭೂಕಂಪನ ಆಪ್‌ಗಳಾದ ಇರಿಸ್ ಅಥವಾ ಮೈಈರ್ಥ್‌ಕ್ವೇಕ್‌ನಲ್ಲಿ ಈ ಘಟನೆ ದಾಖಲಾಗಿದ್ದು, ತೀವ್ರತೆ 3.1 ಆಗಿದೆ. ಆಳ ಸುಮಾರು 10 ಕಿ.ಮೀ. ಎಂದು ತಿಳಿದುಬಂದಿದೆ.

# ಕಬ್ಬು ಬೆಳೆ ದರ ನಿಗದಿಗೆ ಆಗ್ರಹ ಬಾಗಲಕೋಟೆ, ಬೆಳಗಾವಿಯಲ್ಲಿ ಪ್ರತಿಭಟನೆ

■ ಕಬ್ಬು ಬೆಳೆಗಾರರ ಪ್ರತಿಭಟನೆ ಯಾಕೆ ■ ಮಹಾರಾಷ್ಟ್ರ, ಗುಜರಾತ್‌ನಲ್ಲಿ 1 ಟನ್ ಕಬ್ಬಿಗೆ ಎಷ್ಟು ಸಿಗುತ್ತೆ

• **ಉದಯವಾಹಿನಿ, ಬೆಳಗಾವಿ**

ಕಬ್ಬು ದರ ನಿಗದಿ ಮತ್ತು ಬಾಕಿ ಪಾವತಿಗೆ ಆಗ್ರಹಿಸಿ ರೈತರ ಪ್ರತಿಭಟನೆ ತೀವ್ರ ಸ್ವರೂಪ ಪಡೆದಿದ್ದು, 6ನೇ ದಿನಕ್ಕೆ ಕಾಲಿಟ್ಟಿದೆ. ಬೆಳಗಾವಿಯ ಅಥಣಿ, ಚಿಕ್ಕೋಡಿ, ಗುರ್ಲಾಪುರ, ಜಾಂಬೋಟಿ, ಗೋಕಾಕ್ ಸೇರಿದಂತೆ ವಿವಿಧ ಕಡೆಗಳಲ್ಲಿ ರೈತರು ಪ್ರತಿಭಟನೆ ನಡೆಸಿದ್ದಾರೆ. ವರ್ತಕರು ಅಂಗಡಿ-ಮುಂಗಟ್ಟುಗಳನ್ನು ಸ್ವಯಂಪ್ರೇರಿತವಾಗಿ ಮುಚ್ಚಿ ಪ್ರತಿಭಟನೆಗೆ ಸಾಥ್ ನೀಡಿದ್ದಾರೆ. ಹುಕ್ಕೇರಿ ಪಟ್ಟಣವಂತೂ ಸಂಪೂರ್ಣ ಸ್ತಬ್ಧವಾಗಿತ್ತು. ಹುಕ್ಕೇರಿ ಪಟ್ಟಣದ ಅಡವಿಸಿದ್ದೇಶ್ವರ ಮಠದಿಂದ ಕೋರ್ಟ್ ಸರ್ಕಲ್‌ವರೆಗೆ ರಯಾಲಿ ನಡೆಸಿ, ಹೆದ್ದಾರಿ ಬಂದ್ ಮಾಡಿ ಆಕ್ರೋಶ ವ್ಯಕ್ತಪಡಿಸಿದರು. ಶಿವಯೋಗಿ ವೃತ್ತದಲ್ಲಿ ಜತ್ತ ಜಂಬೋಟಿ- ಸಂಕೇಶ್ವರ ಜೇವರ್ಗಿ ರಾಜ್ಯ ಹೆದ್ದಾರಿ ತಡೆದು ನೂರಕ್ಕೂ ಹೆಚ್ಚು ರೈತರು ಪ್ರತಿಭಟನೆ ಮಾಡಿದರು.

ಟನ್ ಕಬ್ಬಿಗೆ 3,500 ರೂ. ನೀಡುವಂತೆ ರೈತರು ಬಿಗಿಪಟ್ಟು ಹಿಡಿದಿದ್ದಾರೆ. ಸರ್ಕಾರ ದರ ನಿಗದಿ ಮಾಡದಿದ್ದಲ್ಲಿ ಪಂಜಾಬ್ ಮಾದರಿ ಹೋರಾಟ ನಡೆಸೋದಾಗಿಯೂ ಎಚ್ಚರಿಕೆ ಕೊಟ್ಟಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆಗಮಿಸಿ ರೈತರಿಗೆ ಸಾಥ್ ನೀಡಿದ್ದು ರೈತರ ಜೊತೆಗೇ ಮಲಗುವುದಾಗಿ ಹೇಳಿದ್ದಾರೆ.

ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಮಾತಾಡಿ, ಬಿಜೆಪಿಯ ರಾಜೀವ್ ರೈತರನ್ನು ಎತ್ತಿಕಟ್ಟಿದ್ದಾರೆ. ವಿಜಯೇಂದ್ರ ಜೊತೆ ನಾವೂ ಸೇರಿಯೇ ಕೇಂದ್ರಕ್ಕೆ ಭೇಟಿ ಮಾಡೋಣ ಎಂದು ಹೇಳಿದರೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಡಿಸಿ ರೈತರ ಜೊತೆ



**ಕರ್ನಾಟಕ ರಾಜ್ಯದಲ್ಲಿ ಸಿಡಿದೆದ್ದ ರೈತರು**

ನಿರಂತರ ಸಂಪರ್ಕದಲ್ಲಿ ಇದ್ದಾರೆ. ಅವಶ್ಯಕತೆ ಬಿದ್ದರೆ ನಾವು ಹೋಗಿ ಭೇಟಿ ಮಾಡುತ್ತೇವೆ ಎಂದರೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೆಬ್ಬಾಳ್ಕರ್, ಕಾರ್ಖಾನೆ ಮಾಲೀಕರು, ರೈತರು ಸೇರಿ ಸಭೆ ಮಾಡಿ ಪರಿಹಾರಕ್ಕೆ ಪ್ಲಾನ್ ರೂಪಿಸುತ್ತೇವೆ ಎಂದು ತಿಳಿಸಿದರು. ಬೆಳಗಾವಿಯಲ್ಲಿ 29 ಸಕ್ಕರೆ ಕಾರ್ಖಾನೆಗಳಿದ್ದು, 20 ಕಾಂಗ್ರೆಸ್ ಹಾಗೂ 9 ಬಿಜೆಪಿ ನಾಯಕರಿಗೆ ಸೇರಿದ ಕಾರ್ಖಾನೆಗಳಿವೆ.

**ಕಬ್ಬು ಎಷ್ಟು ಪ್ರಮಾಣದಲ್ಲಿ ಬೆಳೆಯಲಾಗುತ್ತೆ:** ರಾಜ್ಯದಲ್ಲಿ 9.87 ಲಕ್ಷ ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ ಕಬ್ಬು ಬೆಳೆಯಲಾಗುತ್ತದೆ. ರಾಜ್ಯದಲ್ಲಿ ಒಟ್ಟು 81 ಸಕ್ಕರೆ ಕಾರ್ಖಾನೆಗಳಿವೆ. ಈ ಪೈಕಿ ಬೆಳಗಾವಿ ಜಿಲ್ಲೆಯೊಂದರಲ್ಲೇ 29 ಸಕ್ಕರೆ ಕಾರ್ಖಾನೆಗಳಿವೆ. 2024ರಲ್ಲಿ 5.40 ಕೋಟಿ ಟನ್ ಕಬ್ಬು ಬೆಳೆಯಲಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ 1.94 ಕೋಟಿ ಟನ್ ಕಬ್ಬು ಅರೆಯಲಾಗಿದೆ. ಕರ್ನಾಟಕದಲ್ಲಿ ಒಟ್ಟು 41 ಲಕ್ಷ ಟನ್ ಸಕ್ಕರೆ ಉತ್ಪಾದನೆಯಾದರೆ ಬೆಳಗಾವಿಯಲ್ಲೇ ಈ ಪೈಕಿ 16.15 ಲಕ್ಷ ಟನ್ ಸಕ್ಕರೆ ಉತ್ಪಾದನೆ ಮಾಡಲಾಗಿದೆ.


**ರೈತರ ಬೇಡಿಕೆಗಳು ಏನು:** ಸಾಗಾಟ ವೆಚ್ಚ, ಕಠಾವು ವೆಚ್ಚ ಎಫ್‌ಆರ್‌ಪಿಯಲ್ಲಿ ತೆಗೆದು ಹಾಕಿ ಪ್ರತಿ ಟನ್‌ಗೆ 3,550 ರೂ. ಕೊಡಬೇಕು. ಇದರಲ್ಲಿ ಯಾವುದೇ ವೆಚ್ಚವನ್ನು ಇದರಲ್ಲಿ ಸೇರಿಸಬಾರದು. ಕಬ್ಬು ಉಪ ಉತ್ಪನ್ನಗಳ ಲಾಭಾಂಶವನ್ನು ಕೊಡಬೇಕು. ಮಹಾರಾಷ್ಟ್ರದಲ್ಲಿ ಪ್ರತಿ ಟನ್‌ಗೆ 3,600 ರೂ., ಗುಜರಾತ್‌ನಲ್ಲಿ 4,000 ರೂ. ನೀಡಲಾಗುತ್ತಿದೆ. ಹೀಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರ ತಲಾ 1,000 ರೂ. ಬೆಂಬಲ ಬೆಲೆ ಕೊಡಬೇಕು.

**ಕೇಂದ್ರದ ಎಫ್‌ಆರ್‌ಪಿ ದರ ಎಷ್ಟು**

ಪ್ರತಿ ವರ್ಷ ಕೇಂದ್ರ ಸರ್ಕಾರ ನ್ಯಾಯಯುತ, ಲಾಭದಾಯಕ ದರವನ್ನು ನಿಗದಿ ಮಾಡುತ್ತದೆ. ಈ ಬಾರಿ ಪ್ರತಿ ಟನ್‌ಗೆ 3,550 ರೂ. ಎಫ್‌ಆರ್‌ಪಿ ದರ ಘೋಷಣೆ ಮಾಡಲಾಗಿದೆ. 1 ಟನ್ ಕಬ್ಬಿಗೆ ರಿಕವರಿ ರೇಟ್ 10.25% (102 ಕೆಜಿ) ಸಕ್ಕರೆ ಉತ್ಪಾದನೆಯಾದ್ರೆ ಉತ್ತಮ ಇಳುವರಿ ಸಿಗುತ್ತದೆ. ಉತ್ತಮ ಇಳುವರಿಗೆ ಕೇಂದ್ರದಿಂದ 3,550 ರೂ. ನಿಗದಿ(ಕಠಾವು, ಸಾಗಾಟ ವೆಚ್ಚ ಸೇರಿ 3550 ರೂ.) ಮಾಡಲಾಗಿದೆ. ರಿಕವರಿ ರೇಟ್ 10.25% ಸಕ್ಕರೆ ಉತ್ಪಾದನೆಗಿಂತ ಕಮ್ಮಿ ಇದ್ದರೆ 3,290 ರೂ. ನಿಗದಿ ಮಾಡಲಾಗಿದೆ. ಕೇಂದ್ರ ಘೋಷಿಸಿರುವ ಎಫ್‌ಆರ್‌ಪಿಯಲ್ಲಿ ಕಟಿಂಗ್, ಸರಬರಾಜು ಕೂಡ ಸೇರಿರುತ್ತದೆ.

**ಹುಕ್ಕೇರಿ ಬಂದ್‌ಗೆ ಕರೆ**

ಕಬ್ಬಿಗೆ ಪ್ರತಿ ಟನ್‌ಗೆ 3,500 ದರ ನಿಗದಿ ಮಾಡಬೇಕು ಎಂದು ಆಗ್ರಹಿಸಿ ನಡೆದಿರುವ ರೈತರ ಹೋರಾಟ ದಿನದಿಂದ ದಿನಕ್ಕೆ ತೀವ್ರ ಸ್ವರೂಪ ಪಡೆಯುತ್ತಿದೆ. ಕಳೆದ 5 ದಿನಗಳಿಂದ ನಡೆಯುತ್ತಿರುವ ಹೋರಾಟ 7ನೇ ದಿನಕ್ಕೆ ಕಾಲಿಟ್ಟಿದೆ. ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲ್ಲೂಕಿನ



ಗುರ್ಲಾಪೂರ ಕ್ರಾಸ್ ಬಳಿ ಸಾವಿರಾರು ರೈತರು ಕಳೆದ 5 ದಿನಗಳಿಂದ ಅಹೋರಾತ್ರಿ ಪ್ರತಿಭಟನೆ ನಡೆಸುತ್ತಿದ್ದರೆ, ಈ ಹೋರಾಟ ಜಿಲ್ಲೆಯಾದ್ಯಂತ ವ್ಯಾಪಿಸುತ್ತಿದೆ. ರೈತರ ಹೋರಾಟಕ್ಕೆ ಸರಕಾರ ಸ್ಪಂದಿಸದ ಕಾರಣ ಚಿಕ್ಕೋಡಿ ಪಟ್ಟಣ ಸೇರಿ ವಿವಿಧೆಡೆ ಹೆದ್ದಾರಿ ಬಂದ್ ಮಾಡಿ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹12,246/Gram24ct ₹11,225/Gram22ct ಬೆಳ್ಳಿ: ₹151.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ವೀರಶೈವ - ಲಿಂಗಾಯತ ಎರಡೂ ಒಂದೇ?

ವೀರಶೈವ ಲಿಂಗಾಯತ ಎರಡೂ ಒಂದೆಂಬುದು ವೀರಶೈವರ ಹೊರ ವಾದ. ಬೇರೆ ಎಂಬುದು ಲಿಂಗಾಯತರ ವಾದ. ಎರಡೂ ಒಂದೇ ಎಂದರೆ ಎರಡಿವೆ ಒಂದೆಂದು ತಿಳಿಯುವುದು. ನಾವಿಬ್ಬರೂ ಒಂದೇ ಎಂದಂತೆ. ವ್ಯಾವಹಾರಿಕ ಭೇದ, ಭಾವನಾತ್ಮಕ ಅಭೇದ. ವೀರಶೈವ ಲಿಂಗಾಯತ ಎರಡೂ ಶಬ್ದಗಳು ಬೇರೆ ಬೇರೆ. ವೀರಶೈವರ ಶಿವ-ಜೀವೈಕ್ಯ, ಲಿಂಗಾಯತರ ಲಿಂಗಾಂಗಸಾಮರಸ್ಯ ಎರಡೂ ಸಿದ್ಧಾಂತ ಒಂದೇ. ಎರಡೂ ಒಂದೆಂಬುವ ವೀರಶೈವರು ಹುಟ್ಟಿನ ಜಾತಿಯಿಂದ ಜಂಗಮರು, ತಾವು ಗುರುಗಳು ಲಿಂಗಾಯತರು ಭಕ್ತರು, ಭಕ್ತರೆಂದೆಂದಿಗೂ ಭಕ್ತರು, ಗುರುವಾಗಲಾರರು ಎನ್ನುವರು. ಲಿಂಗಾಯತರು ಇದನ್ನು ಒಪ್ಪರು. ಜಂಗಮ ಜ್ಞಾನೀ.ಸ್ಥಾವರಕ್ಕಳಿವುಂಟು ಜಂಗಮಕ್ಕಳಿವಿಲ್ಲ ಎನ್ನುವುದು ಈ ಅರ್ಥದಲ್ಲಿ. ಸಾಧನೆಯಿಂದ ಯಾರು ಬೇಕಾದರೂ ಜಂಗಮನಾಗಬಹುದು.

ಇಷ್ಟಾದರೂ ಒಂದೆನ್ನುವುದೇಕೆ ವೀರಶೈವರ ಸಂಖ್ಯೆ ಕಡಿಮೆ. ಲಿಂಗಾಯತರ ಸಂಖ್ಯೆ ಹೆಚ್ಚು. ಲಿಂಗಾಯತರು ಭಕ್ತರು ದೂರಾದರೆ ಬೇರೆಯಾದರೆ ಸಂಖ್ಯಾಬಲ ಕುಗ್ಗುವುದಲ್ಲದೇ ಭಕ್ತರಿಲ್ಲದ ಗುರುವಿಗೆ ಬೆಲೆ ಪೂಜೆ ಎಲ್ಲಿ! ವಾಸ್ತವವಾಗಿ ಒಂದಾಗಿರಬೇಕೆಂದರೆ ಭೇದ ಭಾವ ಅಡಗಬೇಕು.

ಎರಡು ಶಬ್ದಗಳ ಪೈಕಿ ಒಂದೇ ಶಬ್ದ ಉಳಿಯಬೇಕು. ಯಾವ ಶಬ್ದ ಉಚಿತ ವೈದಿಕಕ್ಕೆ ವಿಭಿನ್ನವಾಗಿ ಗುರುತಿಸಿಕೊಳ್ಳಲು ಲಿಂಗಾಯತವನ್ನು ಉಳಿಸಿಕೊಳ್ಳುವುದು ಒಳಿತು. ಇದನ್ನು ಇಬ್ಬರೂ ಒಪ್ಪಬೇಕು. ಒಪ್ಪದಿದ್ದಲ್ಲಿ ಯಾವುದನ್ನು ಉಳಿಸಿಕೊಳ್ಳಬೇಕೆಂಬುದರ ಬಗ್ಗೆ ಜನಸಮೀಕ್ಷೆಯಾಗಲಿ. ಬಹುಮತದ್ದೇ ಅಂತಿಮ! ಇದಾಗದಿದ್ದರೆ ಜಗಳ ಇಬ್ಭಾಗ ಕಾಟ ನಿರಂತರ.

# 2ನೇ ವಿಮಾನ ನಿಲ್ದಾಣ: ಜಾಗ ಸಮತಟ್ಟಿಗೇ ಬೇಕು ಭಾರಿ ಹಣ

## ಮೂಲಸೌಕರ್ಯ ಅಭಿವೃದ್ಧಿಗೆ ಭೂರಚನೆಯ ಸರ್ವೇ ಅಗತ್ಯ, ಕೇಂದ್ರ ಗೃಹ ಸಚಿವಾಲಯ ಸಂಸ್ಥೆಗಳ ಅನುಮೋದನೆ ಅಗತ್ಯ

• **ಉದಯವಾಹಿನಿ, ಬೆಂಗಳೂರು**

ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ರಾಜ್ಯ ಸರಕಾರ ಗುರುತಿಸಿರುವ ಮೂರೂ ಪ್ರದೇಶಗಳು ಏರುಪೇರಿನಿಂದ ಕೂಡಿದ್ದು, ಸಮತಟ್ಟು ಮಾಡಿಕೊಳ್ಳಲು ಹೆಚ್ಚುವರಿ ಹಣದ ಅಗತ್ಯ ಉದ್ಭವಿಸುತ್ತದೆ ಎಂದು ವಿಮಾನ ನಿಲ್ದಾಣ ಪ್ರಾಧಿಕಾರ (ಎಎಐ) ತಂಡ ವರದಿ ನೀಡಿದೆ.

**ಸೈಟ್ -1 ಚೂಡಹಳ್ಳಿ:** ಕನಕಪುರ ರಸ್ತೆಯಿಂದ ಮೈಸೂರು ರಸ್ತೆ ನಡುವಿನ ಚೂಡಹಳ್ಳಿ ಸುತ್ತಮುತ್ತಲ ಪ್ರದೇಶವು ಗಡುಸಾದ ಮತ್ತು ಮೃದು ಕಲ್ಲುಗುಡ್ಡಗಳು ಮತ್ತು ಇಳಿಜಾರುಗಳಿಂದ ಕೂಡಿದೆ. ಪೂರ್ವ ಮತ್ತು ಪಶ್ಚಿಮ ಬದಿಗಳು ಬೆಟ್ಟಗಳಿಂದ ಕೂಡಿದ್ದು, ಸುರಕ್ಷಿತ ವಿಮಾನ ಸಂಚಾರಕ್ಕಾಗಿ ಬೆಟ್ಟಗಳನ್ನು ಕಡಿದು ಸಮತಟ್ಟು ಮಾಡಬೇಕಾಗುತ್ತದೆ. ಮೂಲಸೌಕರ್ಯ ಅಭಿವೃದ್ಧಿಗೆ ಭೂರಚನೆಯ ಸರ್ವೇ ಅಗತ್ಯ.

ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನದ ಬೆಟ್ಟ ತೊಡಕಾಗಲಿದ್ದು, ಅದನ್ನು ಕಡಿದು ನೆಲಸಮ ಮಾಡುವುದಕ್ಕೆ ಹೆಚ್ಚುವರಿ ಹಣ ಬೇಕಾಗುತ್ತದೆ. ಎಚ್ಎಎಲ್ ಪ್ರದೇಶದಲ್ಲಿ ಬರುವುದರಿಂದ




ನಾಗರಿಕ ವಿಮಾನಯಾನ ಮತ್ತು ರಕ್ಷಣಾ ಸಚಿವಾಲಯದ ನಿರಕ್ಷೇಪಣಾ ಪತ್ರ ಅಗತ್ಯ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ 150 ಕಿ.ಮೀ ವ್ಯಾಪ್ತಿಯಲ್ಲಿ ಬರುವುದರಿಂದ ಕೆಐಎ ನಿರಪೇಕ್ಷಣಾ ಪತ್ರ ಅಗತ್ಯ.

ಮರಗಳನ್ನು ಕಡಿಯಲು ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ ಅನುಮೋದನೆ, ಬನ್ನೇರುಘಟ್ಟ ಪಾರ್ಕ್‌ನಲ್ಲಿ ಶಬ್ದ ಮಾಲಿನ್ಯದ ಪ್ರಮಾಣ, ಪರಿಣಾಮ ಅಧ್ಯಯನ ಆಗಬೇಕು. ಕೇಂದ್ರ ಗೃಹ ಸಚಿವಾಲಯ ಮತ್ತಿತರ ಸಂಸ್ಥೆಗಳ ಅನುಮೋದನೆ ಅಗತ್ಯ.

**ಸೈಟ್ -3 ನೆಲಮಂಗಲ:** ಈ ಪ್ರದೇಶದಲ್ಲೂ ಗಡಸು ಮತ್ತು ಮೃದು ಕಲ್ಲುಬಂಡೆಗಳು ಹಾಗೂ ಇಳಿಜಾರುಗಳಿವೆ. ಪೂರ್ವ ಮತ್ತು ಪಶ್ಚಿಮ ಬದಿಗಳು ಬೆಟ್ಟಗುಡ್ಡಗಳಿಂದ ಕೂಡಿದ್ದು, ಸುರಕ್ಷಿತ ವಿಮಾನ ತೊಡಕಾಗಬಹುದು. ಸಂಚಾರಕ್ಕೆ ಅದಕ್ಕಾಗಿ ಬೆಟ್ಟಗಳನ್ನು ಕಡಿದು ಸಮತಟ್ಟು ಮಾಡುವ ಅಗತ್ಯವಿದೆ. ನೆಲಮಂಗಲದ ಉದ್ದೇಶಿತ ಜಾಗವು ನಾಡಪ್ರಭು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ (ಕೆಐಎಲ್), ಯಲಹಂಕದ ವಾಯುನೆಲೆ (ಐಎಎಫ್) ಹಾಗೂ ಎಚ್ಎಎಲ್‌ನ 20 ನಾಟಿಕಲ್ ಮೈಲ್ ವ್ಯಾಪ್ತಿಯಲ್ಲಿ ಬರುವುದರಿಂದ ಈ ಮೂರು ಏರ್‌ಪೋರ್ಟ್‌ಗಳ ವೈಮಾನಿಕ ಕಾರ್ಯಾಚರಣೆ ಸಾಮರ್ಥ್ಯದ ಮೇಲೆ ಪರಿಣಾಮ ಬೀರಬಹುದು. ಇದರಿಂದ ನಿರ್ಬಂಧಿತ ವೈಮಾನಿಕ ಪ್ರದೇಶದಲ್ಲಿ ಸಂಚಾರಕ್ಕೆ ತೊಂದರೆಯಾಗುವ ಸಾಧ್ಯತೆ ಮೇಲ್ನೋಟಕ್ಕೆ ಗೊತ್ತಾಗುತ್ತದೆ. ಕೆಐಎಲ್, ನಾಗರಿಕ ವಿಮಾನಯಾನ ಮತ್ತು ರಕ್ಷಣಾ ಸಚಿವಾಲಯದ ನಿರಪೇಕ್ಷಣಾ ಪತ್ರ, ಕೇಂದ್ರ ಅರಣ್ಯ, ಗೃಹ ಸಚಿವಾಲಯಗಳು ಮತ್ತಿತರ ಸಂಸ್ಥೆಗಳ ಅನುಮೋದನೆ ಅಗತ್ಯವಿದೆ.

**ಸೈಟ್ -2 ಸೋಮನಹಳ್ಳಿ**

**ಗಡುಸಾದ ಮತ್ತು ಮೃದು ಕಲ್ಲುಗುಡ್ಡ, ಇಳಿಜಾರು ಪ್ರದೇಶದಲ್ಲಿ ಕಟ್ ಅಂಡ್ ಫಿಲ್‌ನ ಸವಾಲಿದೆ. ಪೂರ್ವ ಮತ್ತು ಪಶ್ಚಿಮ ಬದಿಯ ಬೆಟ್ಟಗಳನ್ನು ಕಡಿದು ಸಮತಟ್ಟು ಮಾಡಬೇಕಾಗುತ್ತದೆ. ರನ್‌ವೇ ಬಗ್ಗೆ ಎಲ್‌ಡಿಎಆರ್ ಟೆಕ್ನಾಲಜಿ ಬಳಸಿ ಭೂಸ್ಥಿರ ಹಾಗೂ ಒಎಲ್ಎಸ್ ಸರ್ವೇ ಮಾಡಬೇಕಾಗುತ್ತದೆ. ಚೂಡಹಳ್ಳಿ ಸೈಟ್ -1ಕ್ಕೆ ಅನ್ವಯವಾಗುವ ಎಲ್ಲ ಸವಾಲುಗಳು ಈ ಜಾಗಕ್ಕೂ ಬಹುತೇಕ ಅನ್ವಯವಾಗಲಿವೆ. ಈ ಜಾಗವು ಮೇಲ್ನೋಟಕ್ಕೆ ಯೋಜನೆಗೆ ಹೆಚ್ಚು ಕಾರ್ಯಸಾಧ್ಯ ಎಂಬುದು ಗೊತ್ತಾಗುತ್ತದೆ ಎಂದು ವರದಿಯಲ್ಲಿ ಉಲ್ಲೇಖಿಸಿರುವುದು ಗಮನಾರ್ಹ.**

# ಭರತನಾಟ್ಯ ಪ್ರದರ್ಶನ

• **ಉದಯವಾಹಿನಿ, ಬೆಂಗಳೂರು**



ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ.ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ನವೆಂಬರ್ 6, ಗುರುವಾರ ಸಂಜೆ 5-15ಕ್ಕೆ ವಿದುಷಿ ಉಷಾ ಬಸಪ್ಪ ಅವರ ನಿರ್ದೇಶನದಲ್ಲಿ ಪದ್ಮಿನಿಪ್ರಿಯ ಕಲಾ ಅಕಾಡೆಮಿಯ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಿದೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ. **ಸ್ಥಳ:** ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-41

# ಕಿರುತೆರೆ ನಟಿಗೆ ಅಶ್ಲೀಲ ಸಂದೇಶ, ವಿಡಿಯೋಗಳನ್ನು ಕಳುಹಿಸಿ ಕಿರುಕುಳ

• **ಉದಯವಾಹಿನಿ, ಬೆಂಗಳೂರು**

ಸಾಮಾಜಿಕ ಮಾಧ್ಯಮಗಳಲ್ಲಿ ಅಶ್ಲೀಲ ಸಂದೇಶಗಳು ಮತ್ತು ಅಶ್ಲೀಲ ವಿಡಿಯೋಗಳನ್ನು ಕಳುಹಿಸುವ ಮೂಲಕ ಕಿರುತೆರೆ ನಟಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ವ್ಯಕ್ತಿಯೊಬ್ಬನನ್ನು ಬಂಧಿಸಲಾಗಿದೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ. ಆರೋಪಿಯನ್ನು ನವೀನ್ ಕೆ ಎಂದು ಗುರುತಿಸಲಾಗಿದ್ದು, ವೈಟ್‌ಫೀಲ್ಡ್‌ನಲ್ಲಿರುವ ಕಂಪನಿಯೊಂದರಲ್ಲಿ ಡೆಲಿವರಿ ಮ್ಯಾನೇಜರ್ ಆಗಿ ಕೆಲಸ ಮಾಡುತ್ತಿದ್ದ ಎಂದು ಅವರು ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ದೂರುದಾರರಿಗೆ ನವೀನ್‌ಝಡ್ ಎಂಬ ಫೇಸ್‌ಬುಕ್ ಬಳಕೆದಾರ ಫ್ರೆಂಡ್ ರಿಕ್ವೆಸ್ಟ್ ಕಳುಹಿಸಿದ್ದ. ಆಕೆ ಆತನ ರಿಕ್ವೆಸ್ಟ್ ಅನ್ನು ಅಕ್ಸೆಪ್ಟ್ ಮಾಡಿಕೊಳ್ಳದಿದ್ದರೂ, ಆರೋಪಿ ಮೆಸೆಂಜರ್ ಮೂಲಕ ಕಳೆದ ಮೂರು ತಿಂಗಳಿನಿಂದ ಅಶ್ಲೀಲ ಸಂದೇಶಗಳನ್ನು ಕಳುಹಿಸುತ್ತಿದ್ದ ನಟಿ ಅವನನ್ನು ಬ್ಲಾಕ್ ಮಾಡಿದ ನಂತರ, ಆ ವ್ಯಕ್ತಿ ಹಲವಾರು ಹೊಸ ನಕಲಿ ಖಾತೆಗಳನ್ನು ಸೃಷ್ಟಿಸಿ ತನ್ನ ಖಾಸಗಿ ಭಾಗಗಳನ್ನು ಒಳಗೊಂಡಂತೆ ಹಲವಾರು ಅಶ್ಲೀಲ ವಿಡಿಯೋಗಳನ್ನು ಕಳುಹಿಸಿದ್ದಾನೆ. ಪದೇ ಪದೆ ಎಚ್ಚರಿಕೆ ನೀಡಿದ್ದರೂ ಕಿರುಕುಳ ಮುಂದುವರೆದಿದೆ ಎಂದು ಅವರು ಆರೋಪಿಸಿದ್ದಾರೆ.

# ಬೆಸ್ಕಾಂ ರಾಜ್ಯ-ರಾಷ್ಟ್ರೀಯ ಹೆದ್ದಾರಿಗಳಲ್ಲಿ ಇವಿ 40 ಚಾರ್ಜಿಂಗ್ ಸ್ಟೇಷನ್ ಸ್ಥಾಪನೆ

• **ಉದಯವಾಹಿನಿ, ಬೆಂಗಳೂರು**

ಸರ್ಕಾರಿ ಸ್ವಾಮ್ಯದ ಬೆಸ್ಕಾಂ ಮೂಲಕ ಕರ್ನಾಟಕದ ಇಂಧನ ಇಲಾಖೆಯು, ಚಾರ್ಜಿಂಗ್ ಪಾಯಿಂಟ್‌ಗಳ ಪ್ರಸ್ತಾವಿತ ಸ್ಥಾಪನೆಯೊಂದಿಗೆ ರಾಜ್ಯದಲ್ಲಿ ಎಲೆಕ್ಟ್ರಿಕ್ ವಾಹನಗಳ ದೀರ್ಘ ಹೆದ್ದಾರಿ ಚಾಲನೆಯನ್ನು ತೊಂದರೆ-ಮುಕ್ತವಾಗಿಸುವ ಗುರಿಯನ್ನು ಹೊಂದಿದೆ.

ಬೆಂಗಳೂರು-ಬೆಳಗಾವಿ ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯಾದ್ಯಂತ 40 ಇತರ ಟೋಲ್ ಪಾಯಿಂಟ್‌ಗಳಲ್ಲಿ ಚಾರ್ಜಿಂಗ್ ಸ್ಟೇಷನ್‌ಗಳನ್ನು ಸ್ಥಾಪಿಸುತ್ತಿದೆ ಎಂದು ಇಂಧನ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ. ಈ ಗುರಿಯು ವ್ಯಾಪಕವಾದ ಇವಿ ಕಾರಿಡಾರ್ ಜಾಲವನ್ನು ನಿರ್ಮಿಸುವತ್ತ ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ಹೇಳಿದರು.

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ್ ಎನ್, ವಿದ್ಯುತ್ ಕಂಪನಿಯು ಕರ್ನಾಟಕದ ಪ್ರತಿಯೊಬ್ಬ ಪ್ರಯಾಣಿಕರಿಗೂ ವಿದ್ಯುತ್ ಚಲನಶೀಲತೆಯನ್ನು ತಡೆರಹಿತ ಅನುಭವವನ್ನಾಗಿ ಮಾಡಲು ಬದ್ಧವಾಗಿದೆ ಎಂದು ಹೇಳಿದರು. ಈ ಉಪಕ್ರಮವು ದೀರ್ಘ-ದೂರ ಇವಿ ಪ್ರಯಾಣವನ್ನು ಹೆಚ್ಚು ಪ್ರಾಯೋಗಿಕವಾಗಿಸಲು ಮತ್ತು ರಾಜ್ಯದ ವೇಗವಾಗಿ ಬೆಳೆಯುತ್ತಿರುವ ವಿದ್ಯುತ್ ಚಲನಶೀಲತೆ ವಲಯಕ್ಕೆ ಅನುಗುಣವಾಗಿ ಮೂಲಸೌಕರ್ಯವನ್ನು ನಿರ್ಮಿಸುವ ವಿಶಾಲ ಯೋಜನೆಯ ಭಾಗವಾಗಿದೆ. ಕರ್ನಾಟಕವು ಈಗಾಗಲೇ 5,960 ಕಾರ್ಯನಿರ್ವಹಿಸುತ್ತಿರುವ ಇವಿ ಚಾರ್ಜಿಂಗ್ ಸ್ಟೇಷನ್‌ಗಳೊಂದಿಗೆ ಸಾರ್ವಜನಿಕ ಚಾರ್ಜಿಂಗ್ ಮೂಲಸೌಕರ್ಯದಲ್ಲಿ ದೇಶವನ್ನು ಮುಂಚೂಣಿಯಲ್ಲಿದೆ ಎಂದು ಬೆಸ್ಕಾಮ್‌ನ ಮತ್ತೊಬ್ಬ ಅಧಿಕಾರಿ ಹೇಳಿದರು. ಹೊಸ ಟೋಲ್ ಆಧಾರಿತ ನೆಟ್‌ವರ್ಕ್ ಪ್ರಮುಖ ನಗರಗಳು ಮತ್ತು ಆರ್ಥಿಕ




**ಹೆದ್ದಾರಿಗಳಲ್ಲಿ, ಪ್ರವಾಸಿ ತಾಣಗಳಲ್ಲಿ ಮತ್ತು ಪ್ರಮುಖ ಸಾರ್ವಜನಿಕ ಸ್ಥಳಗಳಲ್ಲಿ ಇವಿ ಚಾರ್ಜಿಂಗ್ ಸ್ಟೇಷನ್‌ಗಳನ್ನು ಸ್ಥಾಪಿಸುವುದರೊಂದಿಗೆ, ಎಲೆಕ್ಟ್ರಿಕ್ ವಾಹನಗಳ ಬಳಕೆಯನ್ನು ಹೆಚ್ಚಿಸುವ ಕ್ರಮ ಕೈಗೊಳ್ಳಲಾಗುವುದು. ಈ ಉಪಕ್ರಮವು ಕೇವಲ ಅನುಕೂಲತೆಯ ಬಗ್ಗೆ ಅಲ್ಲ. ಇದು ರಾಜ್ಯದ ಶುದ್ಧ ಇಂಧನ ಪರಿವರ್ತನೆಯನ್ನು ವೇಗಗೊಳಿಸುವುದು, ಸುಸ್ಥಿರ ಪ್ರವಾಸೋದ್ಯಮವನ್ನು ಉತ್ತೇಜಿಸುವುದು ಮತ್ತು ಭವಿಷ್ಯಕ್ಕಾಗಿ ಹಸಿರು ಸಾರಿಗೆ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವುದರ ಬಗ್ಗೆಯಾಗಿದೆ ಎಂದು ಶಿವಶಂಕರ್ ಪಿಟಿಐ ಸುದ್ದಿಸಂಸ್ಥೆಗೆ ತಿಳಿಸಿದರು.**


ವಲಯಗಳ ನಡುವಿನ ನಿರ್ಣಾಯಕ ಸಂಪರ್ಕ ಅಂತರವನ್ನು ಕಡಿಮೆ ಮಾಡುತ್ತದೆ. ವಿದ್ಯುತ್ ಪ್ರಯಾಣವನ್ನು ನಗರ ಮಿತಿಗಳನ್ನು ಮೀರಿ ವಾಸ್ತವಿಕ ಆಯ್ಕೆಯನ್ನಾಗಿ ಮಾಡುತ್ತದೆ ಎಂದು ವಿವರಿಸಿದರು.

# ಪರಿಶಿಷ್ಟ ಪಂಗಡಗಳು ಕಾಂಗ್ರೆಸ್‌ಗೆ ಕೇವಲ ಮತ ಬ್ಯಾಂಕ್ ಮಾತ್ರ

• **ಉದಯವಾಹಿನಿ, ಬೆಂಗಳೂರು**

ಭಾರತದ ಸ್ವಾತಂತ್ರ್ಯದ ನಂತರ ಕಾಂಗ್ರೆಸ್ ಪರಿಶಿಷ್ಟ ಪಂಗಡಗಳನ್ನು ಕೇವಲ ಮತ ಬ್ಯಾಂಕ್ ಆಗಿ ಪರಿಗಣಿಸುತ್ತಿದೆ ಎಂದು ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ಪಕ್ಷದ ರಾಜ್ಯ ಪ್ರಧಾನ ಕಚೇರಿ ಜಗನ್ನಾಥ ಭವನದಲ್ಲಿ ನಡೆದ ಬಿಜೆಪಿಯ ಎಸ್‌ಟಿ ಮೋರ್ಚಾ ಸಭೆಯನ್ನುದ್ದೇಶಿಸಿ ಮಾತನಾಡಿದ ವಿಜಯೇಂದ್ರ, 2014 ರಿಂದ ಸಮುದಾಯವನ್ನು ಆರ್ಥಿಕವಾಗಿ ಸಾಮಾಜಿಕವಾಗಿ ಸಬಲೀಕರಣಗೊಳಿಸಲು ಪ್ರಧಾನಿ ನರೇಂದ್ರ ಮೋದಿ ಮಾಡಿದ ಪ್ರಯತ್ನಗಳನ್ನು ಶ್ಲಾಘಿಸಿದ ಅವರು ಬುಡಕಟ್ಟು ಸಂಸ್ಕೃತಿ ಸಂಪ್ರದಾಯಗಳನ್ನು ಗುರುತಿಸುವ



ಗುರಿಯನ್ನು ಹೊಂದಿರುವ ಸರ್ಕಾರದ ಯೋಜನೆಗಳ ಬಗ್ಗಮ ಮಾಹಿತಿ ನೀಡಿದರು.

ಬುಡಕಟ್ಟು ನಾಯಕ ಬಿರ್ಸಾ ಮುಂಡಾ ಅವರ ಜನ್ಮ ದಿನಾಚರಣೆಯನ್ನು ಜನಜಾತಿಯ ಗೌರವ್ ದಿವಸ್ ಬುಡಕಟ್ಟು ಹೆಮ್ಮೆಯ ದಿನ ಎಂದು ಘೋಷಿಸುವ ಮೋದಿಯವರ ನಿರ್ಧಾರವನ್ನು ಶ್ಲಾಘಿಸಿದರು.

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಬುಡಕಟ್ಟು ಜನಾಂಗದವರ ಪಾತ್ರವನ್ನು ಸ್ಥಳೀಯ ಸಂಸ್ಕೃತಿ ಸಂಪ್ರದಾಯಗಳನ್ನು ಸಂರಕ್ಷಿಸುವ ಅವರ ಪ್ರಯತ್ನಗಳನ್ನು ಅಂಗೀಕರಿಸುತ್ತದೆ ಎಂದು ಅವರು ಹೇಳಿದರು. ಅಂಕಿಅಂಶಗಳು ಸ್ವತಂತ್ರ ಭಾರತದ ಇತಿಹಾಸದಲ್ಲಿ ಅಭೂತಪೂರ್ವವಾಗಿದೆ.

**ಕೇಂದ್ರ ಬಜೆಟ್‌ನಿಂದ ಬುಡಕಟ್ಟು ಕಲ್ಯಾಣಕ್ಕಾಗಿ ವಾರ್ಷಿಕ ಹಂಚಿಕೆಗಳನ್ನು ವಿಜಯೇಂದ್ರ ಉಲ್ಲೇಖಿಸಿದರು 2014-15ರಲ್ಲಿ ರೂ 4,427.96 ಕೋಟಿ, 2018-19ರಲ್ಲಿ ರೂ 6,000 ಕೋಟಿ, 2021-22ರಲ್ಲಿ ರೂ 7,524.87 ಕೋಟಿ, 2023-24ರಲ್ಲಿ ರೂ 12,461 ಕೋಟಿ, 2024-25ರಲ್ಲಿ ರೂ 13,000 ಕೋಟಿ ಮತ್ತು 2025-26ಕ್ಕೆ ರೂ 14,925.81 ಕೋಟಿಗೆ ಮೀಸಲಿಟ್ಟಿದೆ ಎಂದರು.**

ಯಾವುದೇ ಸರ್ಕಾರವು ಬುಡಕಟ್ಟು ಅಭಿವೃದ್ಧಿಗೆ ಇಷ್ಟೊಂದು ಗಣನೀಯ ಸಂಪನ್ಮೂಲಗಳನ್ನು ಹಂಚಿಕೆ ಮಾಡಿಲ್ಲ ಎಂದು ಪ್ರತಿಪಾದಿಸಿದರು.

# ರೈತರ ಪ್ರತಿಭಟನೆ: ಆದಷ್ಟು ಬೇಗ ಕಬ್ಬಿಗೆ ಬೆಲೆ ನಿಗದಿ: ಪರಂ

• **ಉದಯವಾಹಿನಿ, ಬೆಂಗಳೂರು**

ಸಾಧ್ಯವಾದಷ್ಟು ಬೇಗ ಕಬ್ಬಿನ ಬೆಲೆಯನ್ನು ನಿಗದಿಪಡಿಸಿ ಸಮಸ್ಯೆಯನ್ನು ಪರಿಹರಿಸಲು ಸೂಚನೆ ನೀಡಲಾಗಿದೆ ಎಂದು ಗೃಹ ಸಚಿವ ಪರಮೇಶ್ವರ್ ಅವರು ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿ ಪ್ರತಿಭಟನೆ ಕುರಿತು ಸಚಿವ ಶಿವಾನಂದ ಪಾಟೀಲ್ ಜೊತೆ ಚರ್ಚೆ ನಡೆಸಲಾಗಿದ್ದು,

ಆದಷ್ಟು ಬೇಗ ಕಬ್ಬಿಗೆ ಬೆಲೆ ನಿಗದಿ ಮಾಡಿ ಸಮಸ್ಯೆ ಬಗೆಹರಿಸುವಂತೆ ತಿಳಿಸಲಾಗಿದೆ. ಇಲ್ಲದಿದ್ರೆ ಪೊಲೀಸರಿಗೆ ಪರಿಸ್ಥಿತಿ ನಿಭಾಯಿಸುವುದು ಕಷ್ಟ ಆಗುತ್ತದೆ ಎಂದು ತಿಳಿಸಿದ್ದೇನೆಂದು ಹೇಳಿದರು.

ಸತೀಶ್ ಜಾರಕಿಹೊಳಿ ಸೇರಿ ಆ ಭಾಗದ ಸಚಿವರು ಸಮಸ್ಯೆ ಬಗೆಹರಿಸುವ ಭರವಸೆ ಕೊಟ್ಟಿದ್ದಾರೆ. ನಿನ್ನೆ ಒಬ್ಬರು ರೈತರು ಆತ್ಮಹತ್ಯೆ ಪ್ರಯತ್ನ ಮಾಡಿದ್ದರು. ಪೊಲೀಸರು ಅವರನ್ನು ರಕ್ಷಣೆ ಮಾಡಿದ್ದಾರೆ. ಈ ರೀತಿಯ ಘಟನೆಗಳು ಮರುಕಳಿಸಬಾರದು. ಬಿಜೆಪಿಯವರು ಸಹಜವಾಗಿ ಇಂತಹ ಸಂದರ್ಭದಲ್ಲಿ ಬೆಂಬಲ ಕೊಟ್ಟಿದ್ದಾರೆ.



**ಸಚಿವ ಸಂಪುಟ ಪುನಾರಚನೆ ಕುರಿತು ಮಾತನಾಡಿ, ಈ ಕುರಿತು ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳುತ್ತದೆ. ನಾವೆಲ್ಲರೂ ಹೈಕಮಾಂಡ್ ನಿರ್ಧಾರಗಳನ್ನು ಗೌರವಿಸುತ್ತೇವೆ ಮತ್ತು ಅನುಸರಿಸುತ್ತೇವೆ. ಪಾಲಿಸದವರ ವಿರುದ್ಧ ಕ್ರಮ ಕೈಗೊಳ್ಳಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದು ಸರಿ. ಹೈಕಮಾಂಡ್ ಏನು ನಿರ್ಧರಿಸುತ್ತದೆಯೋ ಅದನ್ನು ನಾವು ಕೇಳುತ್ತೇವೆಂದು ತಿಳಿಸಿದರು.**

ಇಂತಹ ಅವಕಾಶ ಮತ್ತೆ ಸಿಕ್ಕರೆ ಬಿಡುತ್ತಾರಾ? ಸರ್ಕಾರ ಕುರ್ಚಿ ಕಚ್ಚಾಟದಲ್ಲಿ ತೊಡಗಿದೆ ಎಂದು ಬಿಜೆಪಿಯವರು ಆರೋಪಿಸುತ್ತಿದ್ದಾರೆ. ಅವರು ಅಧಿಕಾರದಲ್ಲಿದ್ದಾಗ ಏನಾಗಿತ್ತು ಎಂದು ಅವರೇ ನೋಡಿಕೊಳ್ಳಲಿ ಎಂದು ತಿರುಗೇಟು ನೀಡಿದರು.

# ಬಿಎಂಟಿಸಿ ಅಧಿಕಾರಿಗೆ 3 ವರ್ಷ ಕಠಿಣ ಜೈಲು ಶಿಕ್ಷೆ; 70 ಲಕ್ಷ ರೂ ದಂಡ..!

• **ಉದಯವಾಹಿನಿ, ಬೆಂಗಳೂರು**

ಅಕ್ರಮ ಆಸ್ತಿಗಳಿಕೆ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಬಿಎಂಟಿಸಿ ಅಧಿಕಾರಿಯೊಬ್ಬರಿಗೆ 3 ವರ್ಷ ಕಠಿಣ ಜೈಲು ಶಿಕ್ಷೆ, 70 ಲಕ್ಷ ರೂಪಾಯಿ ದಂಡ ವಿಧಿಸಿ ಲೋಕಾಯುಕ್ತ ವಿಶೇಷ ನ್ಯಾಯಾಲಯ ತೀರ್ಪು ನೀಡಿದೆ. ಬಿಎಂಟಿಸಿ ವಿಭಾಗೀಯ ಸಂಚಾರ ನಿಯಂತ್ರಕ ಕೆ.ಬಿ. ರಾಮಕೃಷ್ಣ ರೆಡ್ಡಿ ಶಿಕ್ಷೆಗೆ ಗುರಿಯಾದ ಅಧಿಕಾರಿಯಾಗಿದ್ದಾರೆ. ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿದ ಆರೋಪದಡಿ 2014ನೇ ಸಾಲಿನಲ್ಲಿ ಕೆ.ಬಿ. ರಾಮಕೃಷ್ಣ ರೆಡ್ಡಿ ಅವರ ಮನೆ, ಕಚೇರಿ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ಮಾಡಿ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದರು ನಂತರ ಪ್ರಕರಣದ ವಿಚಾರಣೆ ನಡೆಸಿದ ಲೋಕಾಯುಕ್ತ ಪೊಲೀಸರು ರಾಮಕೃಷ್ಣ ರೆಡ್ಡಿ ಅವರು ಆದಾಯಕ್ಕಿಂತ 61.45 ಲಕ್ಷ ರೂ. ಮೌಲ್ಯದ ಅಧಿಕ ಆಸ್ತಿ ಹೊಂದಿರುವುದನ್ನು ಬಯಲು ಮಾಡಿದ್ದರು. ಈ ಸಂಬಂಧ ತನಿಖೆ ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಲೋಕಾಯುಕ್ತ ಪೊಲೀಸರ ಪರವಾಗಿ ಪಬ್ಲಿಕ್ ಪ್ರಾಸಿಕ್ಯೂಟರ್ ಮಂಜುನಾಥ ಹೊನ್ನಯ್ಯ ನಾಯಕ್ ಅವರು ಪ್ರಕರಣಕ್ಕೆ ಪೂರಕವಾದ ಸಾಕ್ಷ್ಯಗಳೊಂದಿಗೆ ವಾದಿಸಿದರು. ಅಂತಿಮವಾಗಿ, ಆರೋಪಿಯು 69.33 ಲಕ್ಷ ರೂ. ಅಕ್ರಮ ಆಸ್ತಿಯನ್ನು ಹೊಂದಿದ್ದಾರೆಂಬುದು ಸಾಬೀತಾಯಿತು.

ಆರೋಪಿಯು ತಾನು ನಿರಪರಾಧಿ ಎಂದು ಸಾಬೀತುಪಡಿಸುವಲ್ಲಿ ವಿಫಲನಾಗಿದ್ದಾನೆಂದು ನ್ಯಾಯಾಲಯ ಹೇಳಿದ್ದು, ಈ ಹಿನ್ನೆಲೆಯಲ್ಲಿ ಅ. 31ರಂದು ಕೆ.ಬಿ. ರಾಮಕೃಷ್ಣ ರೆಡ್ಡಿ ಅವರಿಗೆ 3 ವರ್ಷ ಕಠಿಣ ಜೈಲು ಶಿಕ್ಷೆ, 70 ಲಕ್ಷ ರೂ. ದಂಡ ವಿಧಿಸಿ ಅಂತಿಮ ತೀರ್ಪು ನೀಡಿದೆ. ದಂಡ ಪಾವತಿಸುವಲ್ಲಿ ವಿಫಲರಾದರೆ ಆರು ತಿಂಗಳ ಸಾದಾ ಜೈಲು ಶಿಕ್ಷೆ ಅನುಭವಿಸುವಂತೆ ಉಲ್ಲೇಖಿಸಲಾಗಿದೆ.

# ಸಂಸ್ಕರಿಸದ ನೀರನ್ನು ಕೆರೆಗಳಿಗೆ ಹರಿಸುವುದು ಅಪಾಯ: ಮಂಜುನಾಥ್

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನ ಕೊಳಚೆ ನೀರನ್ನು ಸರಿಯಾಗಿ ಸಂಸ್ಕರಿಸದೇ ಕೋಲಾರ, ಚಿಕ್ಕಬಳ್ಳಾಪುರ, ದೊಡ್ಡಬಳ್ಳಾಪುರ, ಆನೇಕಲ್ ಭಾಗದ ಕೆರೆಗಳಿಗೆ ಹರಿಸುತ್ತಿರುವುದರಿಂದ ಮಾಲಿನ್ಯದ ಜತೆಗೆ ಆ ಭಾಗದ ಜನರಲ್ಲಿ ರೋಗಗಳಿಗೆ ದಾರಿ ಮಾಡಿ ಕೊಡಲಿದೆ' ಎಂದು ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್.ಮಂಜುನಾಥ್ ಕಳವಳ ವ್ಯಕ್ತಪಡಿಸಿದರು.

ಗ್ರೀನ್ ಸ್ಕಿಲ್ಸ್ ಅಕಾಡೆಮಿ ಹಾಗೂ ಸೆಂಟರ್ ಫಾರ್ ಸಸ್ಟೇನೆಬಲ್ ಡೆವಲಪ್‌ಮೆಂಟ್ (ಸಿಎಸ್‌ಡಿ) ನಗರದಲ್ಲಿ ಹಮ್ಮಿಕೊಂಡಿದ್ದ 3ನೇ ವಾರ್ಷಿಕ ಸುಸ್ಥಿರ ನಾಯಕತ್ವ ಶೃಂಗಸಭೆಯಲ್ಲಿ ಅವರು ಮಾತನಾಡಿದರು.

'ಕೊಳಚೆ ನೀರನ್ನು ಸಂಪೂರ್ಣ ಸಂಸ್ಕರಣೆ ಮಾಡಿದ ಬಳಿಕವೇ ಕೆರೆಗಳಿಗೆ ಇಲ್ಲವೇ ಅಂತರ್ಜಲ ವೃದ್ಧಿಗೆ ಬಳಸಬೇಕು ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ನಿಯಮ ರೂಪಿಸಿದೆ. ಆದರೆ, ಸರಿಯಾಗಿ ಸಂಸ್ಕರಣೆ ಮಾಡದೇ ನೀರು ಹರಿಸುತ್ತಿರುವ ಬಗ್ಗೆ ದೂರುಗಳು ಕೇಳಿ ಬರುತ್ತಿವೆ. ಈ ಭಾಗದಲ್ಲಿ ನೀರಿನ ರುಚಿ, ವಾಸನೆ ಕೂಡ ಭಿನ್ನವಾಗಿದೆ. ಎಳನೀರು ಕೂಡ ಭಿನ್ನರುಚಿಗೆ ತಿರುಗಿದೆ. ಇದರ ಬಳಕೆ ಕ್ಯಾನ್ಸರ್, ಚರ್ಮರೋಗ ಉಲ್ಬಣಕ್ಕೂ ದಾರಿ ಮಾಡಿಕೊಡಬಹುದು' ಎಂದು ಹೇಳಿದರು. 'ನಗರ ಪ್ರದೇಶಗಳಲ್ಲಿ ಮಾಲಿನ್ಯ ಪ್ರಮಾಣ ಮಿತಿ




ಮೀರುತ್ತಿದೆ. ಅತಿಯಾದ ಕಾಮಗಾರಿಗಳು, ವಾಹನಗಳ ದಟ್ಟಣೆ, ಹಸಿರು ಪ್ರಮಾಣದಲ್ಲಿ ಇಳಿಕೆಯಿಂದಾಗಿ ಮಾಲಿನ್ಯ ಹೆಚ್ಚಿ ಇದರ ಪರಿಣಾಮ ಜನರ ಮೇಲೆ ಬೀರುತ್ತಿದೆ. ಧೂಳಿನ ಕಣಗಳು ದೇಹದೊಳಕ್ಕೆ ಸೇರಿ ಇದು ಹೃದಯಾಘಾತ, ಪಾರ್ಶ್ವವಾಯು, ಶ್ವಾಸಕೋಶ ಸಂಬಂಧಿ ಕಾಯಿಲೆಗಳ ಹೆಚ್ಚಳಕ್ಕೂ ದಾರಿ ಮಾಡಿ ಕೊಡುತ್ತಿದೆ ಎಂದು ತಿಳಿಸಿದರು. ನಿವೃತ್ತ ಮುಖ್ಯ ಕಾರ್ಯದರ್ಶಿ ಎ.ರವೀಂದ್ರ, ಮಾತನಾಡಿ, ಇಂದಿನ ಯುವ ಪೀಳಿಗೆ ಮಾತ್ರವಲ್ಲದೇ ಮುಂದಿನ ಪೀಳಿಗೆಗೆ ಉತ್ತಮ ಪರಿಸರ ನೀಡಲು ಶುದ್ಧ ಗಾಳಿ, ನೀರು ಆಹಾರ ನೀಡಲು ಸಾಮೂಹಿಕ ಪ್ರಯತ್ನ ಅತ್ಯಗತ್ಯ ಎಂದರು.

ನಿವೃತ್ತ ಐಎಎಸ್ ಅಧಿಕಾರಿಗಳಾದ ಉಪೇಂದ್ರ ತ್ರಿಪಾಠಿ, ಕೆ.ಜೈರಾಜ್, ಸಿಎಸ್‌ಡಿ ನಿರ್ದೇಶಕ ಆರ್. ಶ್ರೀನಿವಾಸ್ ಹಾಜರಿದ್ದರು. ಬಳಿಕ ಸುಸ್ಥಿರ ಅಭಿವೃದ್ಧಿ ಸಾಧಿಸಲು ಹೊಸ ತಂತ್ರಜ್ಞಾನ ವಿನೂತನ ಆವಿಷ್ಕಾರಗಳ ಅಳವಡಿಕೆ ಕುರಿತು ಸಂವಾದ ನಡೆಯಿತು.

**ನಮ್ಮ ಎಲ್ಲಾ ಬೇಡಿಕೆಗಳ ತಾಯಿಯಂತಿರುವ ಅರಣ್ಯದ ನಾಶ ಮಾತ್ರ ನಿರಂತರವಾಗಿ ನಡೆದೇ ಇದೆ. ಆಯುರ್ವೇದಕ್ಕೆ ಬೇಕಾದ ವಸ್ತುಗಳಿಗೆ ಅರಣ್ಯವೇ ಮೂಲವಾಗಿರುವಾಗ ಅರಣ್ಯ ನಾಶ ಮಾಡುವುದರಿಂದ ನಮ್ಮ ಆರೋಗ್ಯದ ಮೇಲೂ ಪರೋಕ್ಷವಾಗಿ ಪರಿಣಾಮ ಬೀರಲಿದೆ' ಎಂದು ಎಚ್ಚರಿಸಿದರು. ಪರಿಸರ ನೆಲೆಯಲ್ಲಿ ನಮ್ಮ ಯೋಚನಾ ಕ್ರಮದಲ್ಲಿ ಬದಲಾವಣೆ ಮಾಡಿಕೊಳ್ಳಲೇಬೇಕಾಗಿದೆ. ಇಂಗಾಲ ಪ್ರಮಾಣ ಶೂನ್ಯಗೊಂಡರೆ ಮಾತ್ರ ಪರಿಸರ ಮೇಲಿನ ಹಾನಿ ಪ್ರಮಾಣವನ್ನು ತಗ್ಗಿಸಬಹುದು. ಕೋವಿಡ್ ನಂತರವಂತೂ ಪ್ರವಾಸೋದ್ಯಮ ಎನ್ನುವುದು ಹೆಚ್ಚು ಬೆಳೆಯುತ್ತಿರುವುದು ಪರಿಸರದ ಮೇಲೆ ಪರಿಣಾಮ ಬೀರುತ್ತಿದೆ' ಎಂದು ಹೇಳಿದರು.**

**- ಶ್ರೀನಿವಾಸುಲು**

# ಜಾತಿಗಣತಿ ಎಫೆಕ್ಟ್: ಸಿಬ್ಬಂದಿಗಳ ಕೊರತೆಯಿಂದ ನಾಗರೀಕ ಯೋಜನೆಗಳು ವಿಳಂಬ




• **ಉದಯವಾಹಿನಿ, ಬೆಂಗಳೂರು**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಸಿಬ್ಬಂದಿ ಸಾಮಾಜಿಕ-ಆರ್ಥಿಕ ಸಮೀಕ್ಷೆಯಲ್ಲಿ ನಿರತರಾಗಿರುವುದರಿಂದ ನಗರದ ಹಲವಾರು ನಾಗರಿಕ ಯೋಜನೆಗಳು ವಿಳಂಬವಾಗಿದ್ದು, ಈ ಹಿನ್ನೆಲೆಯಲ್ಲಿ ನಗರಾಭಿವೃದ್ಧಿ ಇಲಾಖೆಯ ಯುಡಿಡಿ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅವರು 5 ಪಾಲಿಕೆಗಳ ಆಯುಕ್ತರೊಂದಿಗೆ ಸಭೆ ನಡೆಸಿದರು.

ಪಾಲಿಕೆಯ ಸಿಬ್ಬಂದಿಗಳು ಸಮೀಕ್ಷೆಯಲ್ಲಿ ನಿರತರಾಗಿರುವುದರಿಂದ ಅಕ್ಟೋಬರ್‌ನಲ್ಲಿ ನಿಯಮಿತ ಸಭೆಗಳನ್ನು ಕರೆಯಲಾಗಿಲ್ಲ ಎಂದು ಗಿರಿನಾಥ್ ಅವರು ಹೇಳಿದ್ದಾರೆ. ಕಾಮಗಾರಿ ಪ್ರಗತಿಯನ್ನು ಮೌಲ್ಯಮಾಪನ ಮಾಡಲು, ಸವಾಲುಗಳನ್ನು ಚರ್ಚಿಸಲು ಜಿಬಿಎ ಅಡಿಯಲ್ಲಿ ವ್ಯವಸ್ಥೆಗಳನ್ನು ಸುಗಮಗೊಳಿಸಲು ಪಾಲಿಕೆಯ ಹಿರಿಯ ಅಧಿಕಾರಿಗಳ ಸಭೆ ಕರೆಯಲಾಗಿತ್ತು. ಸಭೆಯಲ್ಲಿ ದೆಹಲಿಯಲ್ಲಿ ನಿಯೋಗವೊಂದು ಸಮ್ಮೇಳನದಲ್ಲಿ ಭಾಗವಹಿಸುವುದರಿಂದ ನಗರ ಚಲನಶೀಲತೆ, ಮೆಗಾ ಭವಿಷ್ಯದ ನಗರಗಳ ಯೋಜನೆಗಳ ಕುರಿತು ಅಧಿಕಾರಿಗಳಿಗೆ ವಿವರಿಸಲಾಗಿದೆ.

ದೆಹಲಿಯಲ್ಲಿ ನಡೆಯುವ ಸಮ್ಮೇಳನವು ಯಾವುದೇ ಹಣದ ಬೇಡಿಕೆಯಲ್ಲದೆ, ಸಾರ್ವಜನಿಕ ಸಾರಿಗೆ, ಪ್ರಾದೇಶಿಕ ಕ್ಷಿಪ್ರ ಸಾರಿಗೆ, ಕ್ಲಸ್ಟರ್‌ಗಳು ಮತ್ತು ನಗರಗಳ ಕುರಿತು ಚರ್ಚೆ ನಡೆಸುವುದಾಗಿದೆ ಎಂದು ತಿಳಿಸಿದ್ದಾರೆ.

# ಬೆಂಗಳೂರು ವರ್ತುಲ ರೈಲು ಯೋಜನೆ ಸ್ಥಗಿತ ಎಂದ ಕೇಂದ್ರ ಸಚಿವ ವಿ.ಸೋಮಣ್ಣ

• **ಉದಯವಾಹಿನಿ, ಬೆಂಗಳೂರು**

ಪ್ರಸ್ತಾವಿತ ವರ್ತುಲ ರೈಲು ಯೋಜನೆಯನ್ನು ಸದ್ಯಕ್ಕೆ ಸ್ಥಗಿತಗೊಳಿಸಲಾಗಿದೆ ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದ್ದಾರೆ, ವೆಚ್ಚವು ಆರಂಭಿಕ ಅಂದಾಜುಗಳನ್ನು ಮೀರಿದ್ದು, 1 ಲಕ್ಷ ಕೋಟಿ ರೂಪಾಯಿ ತಲುಪುವ ನಿರೀಕ್ಷೆಯಿದೆ. ಆದಾಗ್ಯೂ, ಪ್ರಾದೇಶಿಕ ಸಂಪರ್ಕವನ್ನು ಸುಧಾರಿಸಲು ದಟ್ಟಣೆಯನ್ನು ಕಡಿಮೆ ಮಾಡಲು ಇದು ನಿರ್ಣಾಯಕವಾಗಿದೆ ಎಂದು ಹೇಳುವ ಮೊಬಿಲಿಟಿ ತಜ್ಞರು ಯೋಜನೆಯನ್ನು ಕೈಬಿಡಬಾರದು ಎಂದು ಒತ್ತಾಯಿಸಿದ್ದಾರೆ.

ಪೆರಿಫೆರಲ್ ರಿಂಗ್ ರಸ್ತೆ ಬೆಂಗಳೂರು ಉಪನಗರ ರೈಲು ಜಾಲದಂತಹ ಇತರ ಮೂಲಸೌಕರ್ಯ ಯೋಜನೆಗಳೊಂದಿಗೆ ಏಕೀಕರಣದ ಮೂಲಕ ಹಾಗೂ ವೆಚ್ಚವನ್ನು ಕಡಿಮೆ ಮಾಡಲು ಈಗಿರುವ ರೈಲ್ವೆ ಜೋಡಣೆಗಳನ್ನು ಬಳಸುವ ಮೂಲಕ ಈ ಯೋಜನೆಯನ್ನು ಇನ್ನೂ ಕಾರ್ಯಸಾಧ್ಯವಾಗಿಸಬಹುದು ಎಂದು ಹೇಳುತ್ತಾರೆ.

**ಮೊಬಿಲಿಟಿ ತಜ್ಞರು ಹೇಳುವುದೇನು?:** ಮಾತನಾಡಿದ ಮೊಬಿಲಿಟಿ ತಜ್ಞ ಸಂಜೀವ್ ದ್ಯಾಮ್ಮನವರ್, ರಾಜ್ಯ ಸರ್ಕಾರವು ಈಗಾಗಲೇ ಪಿಆರ್‌ಆರ್‌ನ್ನು ಯೋಜಿಸುತ್ತಿದೆ. ಕೆಲವು ಪ್ರದೇಶಗಳಲ್ಲಿ ಮೆಟ್ರೋ ನಿಬಂಧನೆಗಳಿಗೆ ಸ್ಥಳಾವಕಾಶವನ್ನು ಬಿಟ್ಟಿದೆ ಎಂದರು. ಪಿಆರ್ ಆರ್ ತುಮಕೂರು ಮಾರ್ಗ, ಬಿಡದಿ, ದೊಡ್ಡಬಳ್ಳಾಪುರ, ಚಿಕ್ಕಬಳ್ಳಾಪುರ ಮತ್ತು ಇತರ ಹಲವಾರು ಹಂತಗಳಲ್ಲಿ ಅಸ್ತಿತ್ವದಲ್ಲಿರುವ ರೈಲ್ವೆ ಮಾರ್ಗಗಳನ್ನು ಛೇದಿಸುವುದರಿಂದ - ಜೋಡಣೆಗಳನ್ನು ಅತ್ಯುತ್ತಮವಾಗಿಸುವುದು ಅರ್ಥಪೂರ್ಣವಾಗಿದೆ.

# ಬಿಸಿನೆಸ್ ಕಾರಿಡಾರ್‌ನ 400 ಎಕರೆಯಲ್ಲಿ ವಾಣಿಜ್ಯ ನಿವೇಶನ ಅಭಿವೃದ್ಧಿ

## ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಯೋಜನೆಗಾಗಿ 2,410 ಎಕರೆ ಜಮೀನು ಸ್ವಾಧೀನಕ್ಕೆ ಅಂತಿಮ ಅವಾರ್ಡ್ ನೋಟಿಸ್

• **ಉದಯವಾಹಿನಿ, ಬೆಂಗಳೂರು**

ಬ್ಯುಸಿನೆಸ್ ಕಾರಿಡಾರ್ ಪಿಆರ್‌ಆರ್-1 ಯೋಜನೆಗೆ ಸ್ವಾಧೀನ ಪಡಿಸಿಕೊಳ್ಳುತ್ತಿರುವ ಜಮೀನಿನ ಪೈಕಿ 400 ಎಕರೆಯಲ್ಲಿ ವಾಣಿಜ್ಯ ನಿವೇಶನಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಈ ಎಲ್ಲಾ ನಿವೇಶನಗಳನ್ನೂ ಭೂಮಿ ಕಳೆದುಕೊಂಡ ರೈತರಿಗೆ ಹಂಚಿಕೆ ಮಾಡಲು ತೀರ್ಮಾನಿಸಲಾಗಿದೆ.

ದಶಕಗಳಿಂದ ನನೆಗುದಿಗೆ ಬಿದ್ದಿರುವ ಯೋಜನೆಗೆ ವೇಗ ನೀಡಲು ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಲಿಮಿಟೆಡ್ ಇನ್ನಿಲ್ಲದ ಕಸರತ್ತು ನಡೆಸುತ್ತಿದೆ. ಈ ತಿಂಗಳಾಂತ್ಯದೊಳಗೆ 2,410 ಎಕರೆ ಜಮೀನು ಸ್ವಾಧೀನಕ್ಕೆ ಅಂತಿಮ ಅವಾರ್ಡ್ ನೋಟಿಸ್ ನೀಡಲು ನಿರ್ಧರಿಸಲಾಗಿದೆ. ವಿಸ್ತೃತ ಯೋಜನಾ ವರದಿಯಂತೆ 117 ಕಿ.ಮೀ. ಉದ್ದದ ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ನಿರ್ಮಾಣಕ್ಕೆ ಜಮೀನು ಸ್ವಾಧೀನಪಡಿಸಿಕೊಳ್ಳಲಾಗುತ್ತಿದೆ.

ಭೂಮಿ ಕಳೆದುಕೊಂಡ ರೈತರಿಗೆ 5 ಪರಿಹಾರ ಆಯ್ಕೆಗಳನ್ನು ನೀಡಲಾಗಿದೆ. ವಾಣಿಜ್ಯ ನಿವೇಶನಗಳಿಗೆ ಹೆಚ್ಚಿನ ಮಂದಿ ಬೇಡಿಕೆ ಸಲ್ಲಿಸಿದರೆ, ಲಾಟರಿ ಮೂಲಕ ಹಂಚಿಕೆ ಮಾಡಲಾಗುವುದು. ವಾಣಿಜ್ಯ ನಿವೇಶನಗಳ ಹಂಚಿಕೆಯಲ್ಲಿ ಭೂ ಮಾಲೀಕರಿಗೆ ಮೊದಲ ಆದ್ಯತೆ ನೀಡಲಾಗುತ್ತದೆ.

ಇದರಲ್ಲಿ ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಲಿಮಿಟೆಡ್‌ನ ಪಾಲು ಇರುವುದಿಲ್ಲ. ವಸತಿ ನಿವೇಶನಗಳಿಗೆ ಬೇಡಿಕೆ ಸಲ್ಲಿಸಿದವರಿಗೆ ಡಾ. ಶಿವರಾಮ ಕಾರಂತ ಬಡಾವಣೆ ಹಾಗೂ ವಿಸ್ತರಿತ ಬಡಾವಣೆಯಲ್ಲಿ ಹಂಚಿಕೆ ಮಾಡಲಾಗುತ್ತದೆ. ಇದಕ್ಕೆ ಸಿಎಂ ಹಾಗೂ ಡಿಸಿಎಂ ಒಪ್ಪಿಗೆ ನೀಡಿದ್ದಾರೆ, ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದರು. 20 ಗುಂಟೆ ಅದಕ್ಕಿಂತ ಕಡಿಮೆ ಜಮೀನು ಕಳೆದುಕೊಂಡವರಿಗೆ ಸಂಪೂರ್ಣವಾಗಿ ನಗದು ಪರಿಹಾರ ನೀಡಲಾಗುತ್ತದೆ. 20 ಗುಂಟೆಗಿಂತ ಜಾಸ್ತಿ ಭೂಮಿ ಕಳೆದುಕೊಂಡವರಿಗೆ ನಗದು, ಟಿಡಿಆರ್, ಎಫ್ಎಆರ್, ವಸತಿ ನಿವೇಶನ ಅಥವಾ ವಾಣಿಜ್ಯ ನಿವೇಶನಗಳನ್ನು ಪರಿಹಾರ ರೂಪದಲ್ಲಿ ಕೊಡಲಾಗುತ್ತದೆ.




**ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಯೋಜನೆಗೆ ಭೂಮಿ ಬಿಟ್ಟುಕೊಡುವ ರೈತರಿಗೆ 5 ಪರಿಹಾರ ಆಯ್ಕೆಗಳನ್ನು ನೀಡಲಾಗಿದೆ. ತಿಂಗಳಾಂತ್ಯದೊಳಗೆ ಪ್ರತಿಯೊಂದು ಪರಿಹಾರದ ಲೆಕ್ಕಾಚಾರದೊಂದಿಗೆ ಅಂತಿಮ ಅವಾರ್ಡ್ ನೋಟಿಸ್‌ಗಳನ್ನು ನೀಡಲಾಗುವುದು. ಆ ಬಳಿಕ ಸಂಬಂಧಪಟ್ಟ ರೈತರು ತಮ್ಮಿಷ್ಟದ ಪರಿಹಾರವನ್ನು ಆಯ್ಕೆ ಮಾಡಿಕೊಂಡು ದಾಖಲೆಗಳನ್ನು ಸಲ್ಲಿಸಬಹುದಾಗಿದೆ. ಈಗಾಗಲೇ ಅನೇಕ ರೈತರು ಸರಕಾರ ನಿಗದಿಪಡಿಸಿರುವ ಪರಿಹಾರಕ್ಕೆ ಸಮ್ಮತಿ ಸೂಚಿಸಿದ್ದಾರೆ ಎಂದು ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಲಿಮಿಟೆಡ್ ಅಧ್ಯಕ್ಷ ಎಲ್‌ಕೆ ಅತೀಕ್ ಹೇಳಿದ್ದಾರೆ.**

**ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ರಸ್ತೆಯ ವಿನ್ಯಾಸವನ್ನು 100 ಮೀಟರ್ ಬದಲಿಗೆ 65 ಮೀಟರ್‌ಗೆ ಸೀಮಿತಗೊಳಿಸಲಾಗಿದೆ. 35 ಮೀಟರ್ ಅಗಲದಲ್ಲಿ ಭೂಮಾಲೀಕರಿಗೆ ಪರಿಹಾರ ನೀಡಲು ವಾಣಿಜ್ಯ ನಿವೇಶನಗಳನ್ನು ಅಭಿವೃದ್ಧಿಪಡಿಸಲಾಗುತ್ತದೆ. 73 ಕಿ.ಮೀ. ಉದ್ದದ ಮಾರ್ಗದಲ್ಲೂ ವಾಣಿಜ್ಯ ನಿವೇಶನಗಳನ್ನು ರಚಿಸುವುದಿಲ್ಲ. ಅಲ್ಲಲ್ಲಿ ಸಿಎ ನಿವೇಶನ, ಉದ್ಯಾನಕ್ಕೆ ಜಾಗ ಕಾಯ್ದಿರಿಸಲಾಗುತ್ತದೆ. ಮುಖ್ಯ ಹೆದ್ದಾರಿಯು 41 ಮೀಟರ್ ಅಗಲವಿರುತ್ತದೆ. ರಸ್ತೆ ವಿಭಜಕ, ಚರಂಡಿಗಳು ಸೇರಿ ಒಟ್ಟು 136 ಅಡಿ ವಿಸ್ತೀರ್ಣದಲ್ಲಿ 8 ಪಥಗಳ ರಸ್ತೆ ನಿರ್ಮಿಸಲಾಗುತ್ತದೆ. 60 ಅಡಿ ಅಗಲದ 4 ಪಥಗಳ ಸರ್ವೀಸ್ ರಸ್ತೆ, 2 ಬೈಕ್ ಪಥಗಳು ಹಾಗೂ ಎರಡೂ ಬದಿಗಳಲ್ಲಿ 10 ಅಡಿ ಅಗಲದ ಪಾದಚಾರಿ ಮಾರ್ಗವಿರಲಿದೆ. ಭವಿಷ್ಯದಲ್ಲಿ ಮೆಟ್ರೋ ನಿರ್ಮಾಣಕ್ಕೂ ಜಾಗ ಮೀಸಲಿಡಲಾಗುತ್ತಿದೆ. ಸುಮಾರು 6,00 ಎಕರೆಯಷ್ಟು ಜಾಗವನ್ನು ಇಂಟರ್‌ಚೇಂಜ್, ಜಂಕ್ಷನ್‌ಗಳ ನಿರ್ಮಾಣಕ್ಕೆ ಬಳಸಲಾಗುತ್ತದೆ.**

**ರಸ್ತೆಗೆ 2010 ಎಕರೆ ಬಳಕೆ**

**5 ಸಾವಿರ ಕುಟುಂಬಗಳ ಭೂಮಿ ಸ್ವಾಧೀನ:** ಬೆಂಗಳೂರು ಬ್ಯುಸಿನೆಸ್ ಕಾರಿಡಾರ್‌ಗೆ 2,410 ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳುತ್ತಿದ್ದು, ಸುಮಾರು 5,000 ಕುಟುಂಬಗಳು ಮಾತ್ರ ಪೂರ್ಣ ಅಥವಾ ಭಾಗಶಃ ಭೂಮಿಯನ್ನು ಕಳೆದುಕೊಳ್ಳುತ್ತಿವೆ.

ನಗರದ ಪ್ರದೇಶಗಳಲ್ಲಿ ಮಾರ್ಗಸೂಚಿ ದರದ ಎರಡು ಪಟ್ಟು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮೂರು ಪಟ್ಟು ನಗದು ಪರಿಹಾರ ನೀಡಲಾಗುತ್ತದೆ. ಕೃಷಿ ಭೂಮಿಯ ಮಾರ್ಗಸೂಚಿ ದರಕ್ಕಿಂತ ಹೆಚ್ಚಿರುವ ನಗರ ಪ್ರದೇಶದ ಭೂಮಿಯ ಮಾರ್ಗಸೂಚಿ ಮೌಲ್ಯದ ಟಿಡಿಆರ್‌ಗಳನ್ನು ನೀಡಲಾಗುತ್ತದೆ. ಪರಿಹಾರಕ್ಕೆ ಸಂಬಂಧಿಸಿದಂತೆ ವಿವರವಾದ ಲೆಕ್ಕಾಚಾರಗಳೊಂದಿಗೆ ರೈತರಿಗೆ ಲಿಖಿತ ಅವಾರ್ಡ್ ನೋಟಿಸ್‌ಗಳನ್ನು ನೀಡಲು ನಿರ್ಧರಿಸಲಾಗಿದೆ. ಯೋಜನೆಗೆ ಶೇ. 70ರಷ್ಟು ರೈತರು ಭಾಗಶಃ ಭೂಮಿಯನ್ನಷ್ಟೇ ಕಳೆದುಕೊಳ್ಳಲಿದ್ದಾರೆ. ಇದರಿಂದ ಉಳಿದ ಜಮೀನು ಮೌಲ್ಯ ಜಾಸ್ತಿಯಾಗಲಿದೆ.

# ರೈತರ ಮೇಲೆ ಕಾಡುಪ್ರಾಣಿಗಳ ದಾಳಿಗೆ ಅಕ್ರಮ ರೆಸಾರ್ಟ್‌ಗಳೇ ಕಾರಣ

## ■ ಕಬಿನಿ ಹಿನ್ನೀರಿನಲ್ಲಿ ಅಕ್ರಮ ರೆಸಾರ್ಟ್; ಸರ್ಕಾರಿ ಸ್ವಾಮ್ಯದ ಜಂಗಲ್ ಲಾಡ್ಜ್ ಸೇರಿ 15 ರೆಸಾರ್ಟ್‌ಗಳ ಪಟ್ಟಿ ಬಿಡುಗಡೆ

• **ಉದಯವಾಹಿನಿ, ಮೈಸೂರು**

ಮೈಸೂರು ಜಿಲ್ಲೆಯ ಕಾಡಂಚಿನ ಗ್ರಾಮಗಳಲ್ಲಿ ಕಾಡುಪ್ರಾಣಿಗಳ ದಾಳಿ ತೀವ್ರಗೊಂಡಿದೆ. ಕಬಿನಿ ಹಿನ್ನೀರಿನಲ್ಲಿ ಅಕ್ರಮವಾಗಿ ರೆಸಾರ್ಟ್ ನಿರ್ಮಿಸಲಾಗಿರುವುದು ಮಾನವ-ವನ್ಯಜೀವಿ ಸಂಘರ್ಷಕ್ಕೆ ಮುಖ್ಯ ಕಾರಣ ಎಂದು ಸೇವ್ ಕಬಿನಿ ತಂಡ ಗಂಭೀರ ಆರೋಪ ಮಾಡಿದೆ. ಮೈಸೂರಿನ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ರೈತ ಮುಖಂಡ ಹೊನ್ನೂರು ಪ್ರಕಾಶ್ ಮತ್ತು ವಕೀಲ ರವಿಕುಮಾರ್ ಅವರು, ಸರ್ಕಾರಿ ಸ್ವಾಮ್ಯದ ಜಂಗಲ್ ಲಾಡ್ ಸೇರಿದಂತೆ 15 ಅಕ್ರಮ ರೆಸಾರ್ಟ್‌ಗಳ ಪಟ್ಟಿಯನ್ನು ಬಿಡುಗಡೆ ಮಾಡಿ, ಅವುಗಳನ್ನು ಕೂಡಲೇ ತೆರವುಗೊಳಿಸಬೇಕೆಂದು ಆಗ್ರಹಿಸಿದರು.

**ಅಧಿಕಾರಿಗಳ ನಿರ್ಲಕ್ಷ್ಯದಿಂದ ಮಾನವ-ಪ್ರಾಣಿ ಸಂಘರ್ಷ**
ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರೈತ ಮುಖಂಡ ಹೊನ್ನೂರು ಪ್ರಕಾಶ್, ಕಬಿನಿ ಹಿನ್ನೀರಿನ ಪ್ರದೇಶದಲ್ಲಿ ಅಕ್ರಮ ರೆಸಾರ್ಟ್‌ಗಳು, ಹೋಂ ಸ್ಟೇಗಳು ಅಣಬೆಗಳಂತೆ ಎದ್ದು ನಿಂತಿವೆ. ಕಾಡಿನ ಪ್ರದೇಶದಲ್ಲಿ ಯಾವುದೇ ರೆಸಾರ್ಟ್ ಇರಬಾರದು, ಅದು ಅಕ್ರಮವಾಗಿರಲಿ, ಸಕ್ರಮವಾಗಿರಲಿ. ಇತ್ತೀಚೆಗೆ ಹುಲಿಯೊಂದು ರೈತನನ್ನು ಬಲಿ ಪಡೆದಿದೆ. ಇದಕ್ಕೆಲ್ಲ ಅಧಿಕಾರಿಗಳ ನಿರ್ಲಕ್ಷ್ಯವೇ ನೇರ ಕಾರಣ, ಎಂದು ಆಕ್ರೋಶ ವ್ಯಕ್ತಪಡಿಸಿದರು. ರೆಸಾರ್ಟ್‌ಗಳು, ಸಫಾರಿ ಚಟುವಟಿಕೆಗಳು ಮಾನವ-ವನ್ಯಜೀವಿ ಸಂಘರ್ಷವನ್ನು ಹೆಚ್ಚಿಸಿವೆ. ಕಾಡಿನೊಳಗಿನ ಕೆರೆಗಳು ಬತ್ತಿ, ಹುಲ್ಲುಗಾವಲು ನಾಶವಾಗಿ ಪ್ರಾಣಿಗಳು ನಾಡಿಗೆ ಬರುತ್ತಿವೆ. ಅಕ್ರಮ ರೆಸಾರ್ಟ್‌ಗಳಿಗೆ ಅನುಮತಿ ನೀಡಿದ ಅರಣ್ಯ ಇಲಾಖೆ ಅಧಿಕಾರಿಗಳನ್ನು ಜೈಲಿಗೆ ಕಳುಹಿಸಬೇಕು. ಆದರೆ, ಇಲ್ಲಿ ಪ್ರಶ್ನೆ ಮಾಡುವ ರೈತರ ಮೇಲೆಯೇ ಕೇಸ್ ದಾಖಲಿಸಲಾಗುತ್ತಿದೆ, ಎಂದು ಅವರು ದೂರಿದರು.

**ಅಧಿಕಾರಿಗಳ ಶಾಮೀಲು**
**ಮೈಸೂರು ಜಿಲ್ಲೆಯ ಕಾಡಂಚಿನ ಗ್ರಾಮಗಳಲ್ಲಿ ಹೆಚ್ಚುತ್ತಿರುವ ವನ್ಯಜೀವಿ-ಮಾನವ ಸಂಘರ್ಷಕ್ಕೆ ಕಬಿನಿ ಹಿನ್ನೀರಿನಲ್ಲಿ ಅಕ್ರಮವಾಗಿ ತಲೆ ಎತ್ತಿರುವ ರೆಸಾರ್ಟ್‌ಗಳೇ ಕಾರಣವೆಂದು ಆರೋಪಿಸಿ ಸೇವ್ ಕಬಿನಿ ತಂಡವು 15 ರೆಸಾರ್ಟ್‌ಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಅಧಿಕಾರಿಗಳ ಶಾಮೀಲಿನಿಂದಾಗಿ ರೈತರ ಪ್ರಾಣಹಾನಿಯಾಗುತ್ತಿದೆ. ಕೂಡಲೇ ಅಕ್ರಮವಾಗಿ ನಿರ್ಮಿಸಿರುವ ಎಲ್ಲಾ ರೆಸಾರ್ಟ್‌ಗಳನ್ನು ತೆರವುಗೊಳಿಸಿ, ತಪ್ಪಿತಸ್ಥ ಅಧಿಕಾರಿಗಳನ್ನು ಶಿಕ್ಷಿಸಬೇಕೆಂದು ಸರ್ಕಾರ ರೈತ ಮುಖಂಡರು, ವಕೀಲರು ತೀವ್ರವಾಗಿ ಆಗ್ರಹಿಸಿದ್ದಾರೆ.**

**ನೋಟಿಸ್ ವಿರುದ್ಧ ಕಿಡಿ:** ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ ಎಂಬ ಕಾರಣ ನೀಡಿ ರೆಸಾರ್ಟ್‌ಗಳಿಗೆ ನೋಟಿಸ್ ನೀಡುತ್ತಿರುವುದು ಹಾಸ್ಯಾಸ್ಪದ. ರೆಸಾರ್ಟ್‌ಗಳು ಅಕ್ರಮ ಎಂದು ನೋಟಿಸ್ ನೀಡುವ ಬದಲು, ರೈತರು ಪ್ರಶ್ನಿಸುತ್ತಿದ್ದಾರೆಂದು ನೋಟಿಸ್ ನೀಡುತ್ತಿದ್ದಾರೆ.

ಉದಯವಾಹಿನಿ ಚಿತ್ರ



**15 ಅಕ್ರಮ ರೆಸಾರ್ಟ್‌ಗಳ ಪಟ್ಟಿ**

- ಜಂಗಲ್ ಲಾಡ್ಜ್ ಅಂಡ್ ರೆಸಾರ್ಟ್ ರೀಜೆಂಟಾ ಜಂಗಲ್ ರೆಸಾರ್ಟ್
- ಆರೆಂಜ್ ಕೌಂಟಿ (ದಿ ಎವಾಲ್ವ್ ಬ್ಯಾಕ್)
- ಸಂದೇಶ ವಾಟರ್ ಎಡ್ಜ್ ರೆಸಾರ್ಟ್
- ಸೆರಾಯಿ ಕಬಿನಿ ರೆಸಾರ್ಟ್
- ಡಿಸ್ಕವರಿ ವಿಲೇಜ್
- ಎಲಿಫೆಂಟ್ ರಿವರ್ ರಾಂಚ್
- ವಾಟರ್ ವುಡ್ ಲಾಡ್ಜ್
- ದಿ ಕಾವ್ ಸಫಾರಿ ಲಾಡ್ಜ್
- ರೆಡ್ ಅರ್ಥ್ ಕಬಿನಿ
- ಟ್ರೋಗನ್ ರೆಸಾರ್ಟ್
- ಫೈರ್ ಫ್ಲೈಸ್ ರೆಸಾರ್ಟ್
- ಲಿಂಕ್ಸ್ ವೈಲ್ಡ್ ಲೈಫ್ ರೆಸಾರ್ಟ್
- ದಿ ಬೈಸನ್ ವೈಲ್ಡ್ ಲೈಫ್ ರೆಸಾರ್ಟ್
- ಕಬಿನಿ ಲೇಕ್ ವೀವ್ ರೆಸಾರ್ಟ್

> ಸೇವ್ ಕಬಿನಿ ಅಭಿಯಾನದ ಮೂಲಕ ನಾವು ಈ ಅಕ್ರಮ ರೆಸಾರ್ಟ್‌ಗಳ ವಿರುದ್ಧ ಹೋರಾಡುತ್ತಿದ್ದೇವೆ. ಇಲ್ಲಿ ಪ್ರಭಾವಿ ರಾಜಕಾರಣಿಗಳ ಮತ್ತು ಅವರ ಬೆಂಬಲಿಗರ ರೆಸಾರ್ಟ್‌ಗಳಿವೆ. ಅರಣ್ಯ ಭೂಮಿ ಒತ್ತುವರಿಯಾಗಿದೆ, ನೀರಾವರಿ ಮತ್ತು ಅರಣ್ಯ ಇಲಾಖೆಯಿಂದ ಯಾವುದೇ ಅನುಮತಿ ಪಡೆದಿಲ್ಲ. ಮುಖ್ಯಮಂತ್ರಿಗಳು ಅಕ್ರಮ ರೆಸಾರ್ಟ್‌ಗಳ ಮೇಲೆ ಕ್ರಮ ಕೈಗೊಳ್ಳುವುದಾಗಿ ಹೇಳಿರುವುದನ್ನು ನಾವು ಸ್ವಾಗತಿಸುತ್ತೇವೆ. ಆದರೆ, ಕೇವಲ ಹೇಳಿಕೆ ನೀಡಿದರೆ ಸಾಲದು, ಕೂಡಲೇ ತೆರವು ಕಾರ್ಯಾಚರಣೆ ಆರಂಭವಾಗಬೇಕು.
>
> -ರವಿಕುಮಾರ್ , ವಕೀಲ

ಅರಣ್ಯ ಇಲಾಖೆ ಅಧಿಕಾರಿಗಳು ರೈತರ ಕರೆಗಳನ್ನೇ ಸ್ವೀಕರಿಸುವುದಿಲ್ಲ. ಸರ್ಕಾರ ಕೂಡಲೇ ತಪ್ಪಿತಸ್ಥ ಅಧಿಕಾರಿಗಳನ್ನು ಅಮಾನತುಗೊಳಿಸಿ, ಎಲ್ಲಾ ರೆಸಾರ್ಟ್‌ಗಳು ಮತ್ತು ಸಫಾರಿಗಳನ್ನು ಬಂದ್ ಮಾಡಿಸಬೇಕು, ಎಂದು ಹೊನ್ನೂರು ಪ್ರಕಾಶ್ ಆಗ್ರಹಿಸಿದರು.

**ಪ್ರತಿಭಟನಾಕಾರರ ಬೇಡಿಕೆಗಳೇನು?:** ಕಾಡು ಪ್ರಾಣಿಗಳ ದಾಳಿಯಿಂದ ಸಾವನ್ನಪ್ಪಿದ ರೈತರಿಗೆ ಕನಿಷ್ಠ ಒಂದು ಕೋಟಿ ರೂಪಾಯಿ ಪರಿಹಾರ ನೀಡಬೇಕು. ಕಾಡಿನಿಂದ ಪ್ರಾಣಿಗಳು ಹೊರಬಂದ ತಕ್ಷಣ ರೈತರಿಗೆ ಮಾಹಿತಿ ರವಾನಿಸುವ ವ್ಯವಸ್ಥೆ ಜಾರಿಯಾಗಬೇಕು. ರೆಸಾರ್ಟ್‌ಗಳಿಗೆ ನೀಡಿರುವ ಎಲ್ಲಾ ಪರವಾನಗಿಗಳನ್ನು ತಕ್ಷಣವೇ ರದ್ದುಗೊಳಿಸಬೇಕು ಎಂದು ಆಗ್ರಹಿಸಿದೆ.

## ನಡೆಯದ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ : ಸಾರ್ವಜನಿಕರ ಅಸಮಧಾನ

• **ಉದಯವಾಹಿನಿ, ಗುಂಡ್ಲುಪೇಟೆ**

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳ ಅನುಷ್ಠಾನ, ವಿವಿಧ ಅಭಿವೃದ್ಧಿ ಕಾಮಗಾರಿಗಳ ಗುಣಾತ್ಮಕತೆ ಮತ್ತು ಅಧಿಕಾರಿಗಳ ಕಾರ್ಯಪ್ರವೃತ್ತಿ ಮೌಲ್ಯಮಾಪನ ಇನ್ನಿತರ ಉದ್ದೇಶಗಳನ್ನೊಳಗೊಂಡಂತೆ ಮೂರು ತಿಂಗಳಿಗೊಮ್ಮೆ ನಡೆಯಬೇಕಿದ್ದ ತ್ರೈಮಾಸಿಕ ಸಭೆ ವಿಳಂಭವಾಗಿರುವುದಕ್ಕೆ ಸಾರ್ವಜನಿಕರ ವಲಯದಲ್ಲಿ ಬೇಸರ ವ್ಯಕ್ತವಾಗುತ್ತಿದೆ.

ಪ್ರಗತಿ ಪರಿಶೀಲನಾ ಸಭೆ ಕ್ಷೇತ್ರದ ಅಭಿವೃದ್ಧಿ ವಿಚಾರದಲ್ಲಿ ಬಹುಮುಖ್ಯ ಮಹತ್ವಪಡೆದಿದೆ ಆದರೆ ಕೆಡಿಪಿ ಸಭೆ ನಡೆಯದಿರುವುದು ಬೇಸರದ ಸಂಗತಿಯಾಗಿದೆ. ತಾಲ್ಲೂಕಿನಲ್ಲಿ ಈಗಾಗಲೇ ವಿವಿಧ ಇಲಾಖೆಗಳ ವಿರುದ್ಧ ರೈತ ಸಂಘದವರು ಪ್ರತಿಭಟನೆ ನಡೆಸುತ್ತಿದ್ದಾರೆ, ಮಾನವ ವನ್ಯಜೀವಿ ಸಂಘರ್ಷ, ಸಾಗುವಳಿ, ನಿರಾಪೇಕ್ಷಣ ಪತ್ರ , ಕೆರೆಗಳಿಗೆ ನೀರು ತುಂಬಿಸುವ ವಿಚಾರವಾಗಿ ಕಳೆದ 20 ದಿನಗಳಿಂದ ತಹಶೀಲ್ದಾರ್ ಕಚೇರಿ ಮುಂಭಾಗ ಅಹೋರಾತ್ರಿ ಧರಣಿ ನಡೆಸಲಾಗುತ್ತಿದೆ. ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ನಡೆಯಬೇಕಿದ್ದ ಸಭೆಗೆ ಇನ್ನೂ ಸಹ ಕಾಲಕೂಡಿಬಂದಿಲ್ಲ, ಗ್ರಾಮಾಂತರ ಪ್ರದೇಶಗಳಲ್ಲಿನ ಅನೇಕ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಲಾಗಿದೆಯಾದರೂ ಕಾಮಗಾರಿ ಪ್ರಗತಿ ಮಾಹಿತಿ ಪಡೆಯಲು ಸಹ ಕೆಡಿಪಿ ಸಭೆ ಪ್ರಮುಖ ಪಾತ್ರವಹಿಸುತ್ತದೆ.

ರಾಜ್ಯ ಸರ್ಕಾರ ಅನೇಕ ಯೋಜನೆಗಳನ್ನ ಜಾರಿಗೆ ತಂದಿದ್ದು ಕ್ಷೇತ್ರದಲ್ಲಿ ಎಷ್ಟರ ಮಟ್ಟಿಗೆ ಅನುಷ್ಠಾನಗೊಂಡಿದೆ ಎಂಬುದನ್ನ ಪ್ರಗತಿ ಪರಿಶೀಲನೆ ಮಾಡುವ ಮೂಲಕ ಜ್ವಲಂತ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಸಲುವಾಗಿ ಮೂರು ತಿಂಗಳಿಗೊಮ್ಮೆ ಪ್ರಗತಿ ಪರಿಶೀಲನೆ ನಡೆಸಬೇಕೆನ್ನುವ ಸ್ಪಷ್ಟ ನಿರ್ದೇಶನವಿದೆಯಾದರು ಪಾಲನೆಯಾಗಿಲ್ಲ ಎಂಬ ಆರೋಪವಿದೆ. ಕೆಡಿಪಿ ಸಭೆ ಕರೆಯದಿರುವುದರಿಂದ ಇಲಾಖಾವಾರು ಜನರ ಸಮಸ್ಯೆಗೆ ಪರಿಹಾರ ದೊರೆಯುತ್ತಿಲ್ಲ ಎಂಬ ಆರೋಪ ಸಾರ್ವಜನಿಕ ವಲಯದಿಂದ ಕೇಳಿ ಬರುತ್ತಿವೆ. ನಾಲ್ಕೈದು ದಿನಗಳಲ್ಲಿ ಸಭೆ ದಿನಾಂಕ ನಿಗದಿ ಕಾರಣಾಂತರಗಳಿಂದ ಪ್ರಗತಿ ಪರಿಶೀಲನಾ ಸಭೆ ಕರೆಯಲು ವಿಳಂಭವಾಗಿದೆ, ಕಳೆದ ಬಾರಿ ಕೆಡಿಪಿ ಸಭೆ ಕರೆಯಲು ಇಓ ಅವರಿಗೆ ಸೂಚಿಸಲಾಗಿತ್ತಾದರು ಕಾರ್ಯಕ್ರಮಗಳ ಒತ್ತಡದ ಹಿನ್ನೆಲೆ ಮುಂದೂಡಲಾಗಿತ್ತು ಶೀಘ್ರದಲ್ಲೇ ಕೆಡಿಪಿ ಸಭೆ ದಿನಾಂಕವನ್ನ ನಿಗದಿ ಮಾಡಿ ಸಂಕ್ಷಿಪ್ತವಾಗಿ ಯೋಜನೆಗಳ ಅನುಷ್ಠಾನದ ಮಾಹಿತಿ ಪಡೆದುಕೊಳ್ಳಲಾಗುವುದು ಎಂದು ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಮಾಹಿತಿ ನೀಡಿದ್ದಾರೆ.

ಉದಯವಾಹಿನಿ ಚಿತ್ರ




> ಚುನಾವಣಾ ಮುಗಿದು ಎರಡೂವರೆ ವರ್ಷಗಳೇ ಕಳೆದಿದೆ ಆದರೆ ಇಲ್ಲಿಯವರೆಗೆ ಪ್ರಗತಿ ಪರಿಶೀಲನೆ ಸಭೆಯಾಗಿಲ್ಲ, ಈ ಅವಧಿಯಲ್ಲಿ ಸಾಕಷ್ಟು ಬಾರಿ ಚಳುವಳಿ ನಡೆಸಿ ಶಾಸಕರಿಗೆ ಮನವಿ ಸಲ್ಲಿಸಿದ್ದೇವೆ, ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಕೆಡಿಪಿ ಸಭೆ ನಡೆಸುವುದು ಉತ್ತಮ, ಶಾಸಕರು ಅಧಿಕಾರಿಗಳಿಂದ ಅಭಿವೃದ್ಧಿ ಕುರಿತಂತೆ ವರದಿ ಪಡೆಯುವ ನಿರೀಕ್ಷೆ ಹೊಂದಿದ್ದೇವೆ.
>
> -ಸಂಪತ್ತು, ಕುಂದಕೆರೆ ರೈತ ಸಂಘ ಜಿಲ್ಲಾ ಪ್ರದಾನ ಕಾರ್ಯದರ್ಶಿ

## ಸಿ ಆ್ಯಂಡ್ ಡಿ ಭೂಮಿ ಸಮಸ್ಯೆ ಬಗೆಹರಿಸಿ ಮಾನವ ಸರಪಳಿ ರಚಿಸಿ ಒತ್ತಾಯ

• **ಉದಯವಾಹಿನಿ, ಸೋಮವಾರಪೇಟೆ**

ಸಿ ಆ್ಯಂಡ್ ಡಿ ಭೂಮಿ ಸಮಸ್ಯೆ ಬಗೆಹರಿಸುವಂತೆ ಆಗ್ರಹಿಸಿ ರೈತ ಹೋರಾಟ ಸಮಿತಿ, ಕರ್ನಾಟಕ ರಾಜ್ಯ ರೈತ ಸಂಘ, ಕಾಫಿ ಬೆಳೆಗಾರರ ಸಂಘದ ಸದಸ್ಯರು ಪಟ್ಟಣದ ಪುಟ್ಟಪ್ಪ ವೃತ್ತದಲ್ಲಿ ಮಾನವ ಸರಪಳಿ ರಚಿಸಿ ಒತ್ತಾಯಿಸಿದರು. ಜೇಸಿ ವೇದಿಕೆಯಲ್ಲಿ ರೈತ ಜಾಗೃತಿ ಸಮಾವೇಶ ನಡೆಸಿ ಕೃಷಿಭೂಮಿಯನ್ನು ಅರಣ್ಯ ಇಲಾಖೆ ಕಸಿದುಕೊಳ್ಳಲು ಪ್ರಯತ್ನಿಸಿದರೆ ಉಗ್ರಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ರೈತ ಸಂಘದ ಜಿಲ್ಲಾ ಪ್ರತಿನಿಧಿ ಮಂಜುಕಿರಣ್ ಮಾತನಾಡಿ, ಬೆಂಗಳೂರಿನ ದೇವನಹಳ್ಳಿಯಲ್ಲಿ 1,771 ಎಕರೆ ಜಾಗವನ್ನು ಸರ್ಕಾರ ವಶಕ್ಕೆ ಪಡೆಯಲ್ಲಿ ತಂತ್ರ ಮಾಡಿತು, ಮೂರು ವರ್ಷಗಳ ಹೋರಾಟದ ಫಲವಾಗಿ ರೈತರ ಭೂಮಿ ರೈತರಿಗೆ ಸಿಕ್ಕಿತು. ಕೊಡಗಿನಲ್ಲಿಯೂ ಸಿ ಆ್ಯಂಡ್ ಡಿ ಭೂಮಿಯನ್ನು ರೈತರ ಪಡೆಯುವ ಹೋರಾಟ ಸ್ವಾಭಿಮಾನದ ಹೋರಾಟವಾಗಬೇಕು ಎಂದರು. 2019ರಲ್ಲಿ ದೆಹಲಿಯಲ್ಲಿ ರೈತರ ಮರಣಶಾಸನ ಎಂದು ಕರೆಸಿಕೊಂಡಿದ್ದ ಮೂರು ಕಾಯ್ದೆಗಳನ್ನು ವಿರೋಧಿಸಿ ವರ್ಷಗಳ ಕಾಲ ರೈತರು ಹೋರಾಟ ಮಾಡಿದರು. ಅಂದಿನ ಕೇಂದ್ರ ಸರ್ಕಾರ ಅನೇಕ ರೀತಿಯಲ್ಲಿ ರೈತರಿಗೆ ಹಿಂಸೆ ನೀಡಿತು. 700 ಮಂದಿ ರೈತ ಹೋರಾಟಗಾರರು ಪ್ರಾಣ ತ್ಯಾಗ ಮಾಡಿದರು. ಮೂರು ವರ್ಷಗಳ ನಂತರ ಕಾಯ್ದೆಗಳನ್ನು ಸರ್ಕಾರ ವಾಪಾಸ್ಸು ಪಡೆಯಿತು. ಇದೇ ಮಾದರಿಯ ಒಗ್ಗಟ್ಟು ಅಗತ್ಯ ಎಂದರು. ರೈತ ಸಂಘದ ಮುಖಂಡ ಹೊನ್ನೂರು ಪ್ರಕಾಶ್ ಮಾತನಾಡಿ, ಭೂಮಿ ರೈತರ ತಾಯಿ ಇದ್ದ ಹಾಗೆ, ಅದನ್ನು ಪ್ರಾಣ ಕೊಟ್ಟಾದರೂ ಉಳಿಸಿಕೊಳ್ಳಬೇಕು. ರೈತದ್ರೋಹಿಗಳನ್ನು ರೈತರು ಯಾವತ್ತೂ ಕ್ಷಮಿಸಬಾರದು. ರೈತರು ತಮ್ಮ ಹಕ್ಕನ್ನು ಪ್ರತಿಪಾದಿಸದಿದ್ದರೆ ಎಲ್ಲವನ್ನೂ ಕಳೆದುಕೊಳ್ಳಬೇಕಾಗುತ್ತದೆ ಎಂದರು.


ಉದಯವಾಹಿನಿ ಚಿತ್ರ



> ರೈತರ ಕೃಷಿ ಭೂಮಿ ಕಿತ್ತುಕೊಳ್ಳಲು ಪ್ರಯತ್ನಿಸಿದರೆ ಸರ್ಕಾರ ಹಾಗೂ ಅದರ ಅಂಗ ಸಂಸ್ಥೆಗಳೇ ನಾಶವಾಗುತ್ತವೆ.
>
> -ಹೊನ್ನೂರು ಪ್ರಕಾಶ್ ರೈತ ಮುಖಂಡ

## ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಶಂಕುಸ್ಥಾಪನೆ

ಉದಯವಾಹಿನಿ ಚಿತ್ರ



• **ಉದಯವಾಹಿನಿ, ಗುಂಡ್ಲುಪೇಟೆ**

ತಾಲ್ಲೂಕಿನ ಬೆಳಚಲವಾಡಿ, ಹೊನ್ನೇಗೌಡನಹಳ್ಳಿ, ವೀರನಪುರ ಗ್ರಾಮಗಳ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಸಿಸಿರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಶಾಸಕ ಎಚ್. ಎಂ.ಗಣೇಶ್ ಪ್ರಸಾದ್ ಶಂಕುಸ್ಥಾಪನೆ ನೆರವೇರಿಸಿದರು. ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು ಹಿಂದುಳಿದ ವರ್ಗದ ಜನರಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ, ಈಗಾಗಲೇ ಸರ್ಕಾರದಿಂದ ಮೂರು ಕೋಟಿ ಹಣ ಮಂಜೂರಾಗಿದ್ದು ಒಟ್ಟು 12 ಗ್ರಾಮಗಳ ಪರಿಶಿಷ್ಟ ಜಾತಿ ಕಾಲೋನಿಗಳಿಗೆ ತಲಾ 25 ಲಕ್ಷ ವೆಚ್ಚದಲ್ಲಿ ಗುಣಮಟ್ಟದ ಸಿಸಿರಸ್ತೆ. ಚರಂಡಿ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಾಗಿದೆ.

**ಮೂರು ಕೋಟಿ ಹಣ ಮಂಜೂರು**

ಮುಂದಿನ ದಿನಗಳಲ್ಲಿ ಹಂತಹಂತವಾಗಿ ಅಭಿವೃದ್ಧಿ ಕೆಲಸಗಳನ್ನ ಸಾಕಾರಗೊಳಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು. ಕ್ಷೇತ್ರದಲ್ಲಿ ಅರ್ಧಕ್ಕೆ ನಿಂತಿರುವ ಸಮುದಾಯ ಭವನಗಳ ಕಾಮಗಾರಿಗಳನ್ನ ವಿಶೇಷ ಅನುದಾನ ತರುವ ಮೂಲಕ ಮರುಪ್ರಾರಂಭ ಮಾಡಲಾಗುವುದು ಎಂದು ತಿಳಿಸಿದರು. ಈ ವೇಳೆ ಗ್ರಾಮಪಂಚಾಯತಿ ಸದಸ್ಯ ಗುರುಪ್ರಸಾದ್ ವೀರನಪುರ , ಶಿವಮಲ್ಲಪ್ಪ, ಮಹದೇವಪ್ಪ, ಮಂಜುನಾಥ್, ವಿ.ಬಿ. ಗುಂಡಪ್ಪ, ಚಂದ್ರಶೇಖರ್, ಚಿದಾನಂದಸ್ವಾಮಿ, ಎಪಿಎಂಸಿ ಅದ್ಯಕ್ಷ ನಾಗರಾಜು, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಬೊಮ್ಮಯ್ಯ, ಪುಟ್ಟವೀರಯ್ಯ, ಪ್ರಕಾಶ್, ಗೋಪಾಲ್, ಮಹೇಶ್, ಮೂರ್ತಿ ಸೇರಿದಂತೆ ಗ್ರಾಮದ ಮುಖಂಡರು ಹಾಜರಿದ್ದರು.

## ಕೊಳ್ಳೇಗಾಲದಿಂದ ಜಿಲ್ಲಾಕೇಂದ್ರಕ್ಕಿಲ್ಲ ಸಮರ್ಪಕ ಬಸ್ ಸೌಲಭ್ಯ

• **ಉದಯವಾಹಿನಿ, ಕೊಳ್ಳೇಗಾಲ**

ಪ್ರತಿನಿತ್ಯ ಚಾಮರಾಜನಗರದಿಂದ ಕೊಳ್ಳೇಗಾಲಕ್ಕೆ ಹಾಗೂ ಕೊಳ್ಳೇಗಾಲದಿಂದ ಚಾಮರಾಜನಗರಕ್ಕೆ ಸಂಚರಿಸುವ ಪ್ರಯಾಣಿಕರಿಗೆ ಬೆಳಿಗ್ಗೆ, ಸಂಜೆಯ ಹೊತ್ತು ಸಮರ್ಪಕ ಕೆಎಸ್‌ಆರ್‌ಟಿಸಿ ಬಸ್‌ಗಳ ಸೌಲಭ್ಯವಿಲ್ಲದೆ ಸಮಸ್ಯೆ ಅನುಭವಿಸುತ್ತಿದ್ದಾರೆ.

ಪ್ರತಿನಿತ್ಯ ಶಾಲಾ ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು, ಶಿಕ್ಷಕರು, ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಿಗೆ ತೆರಳುವ ನೌಕರರು ನಿತ್ಯದ ಕೆಲಸ ಕಾರ್ಯಗಳಿಗೆ ಚಾಮರಾಜನಗರ ಕೊಳ್ಳೇಗಾಲ ನಡುವೆ ಓಡಾಡುವ ಪ್ರಯಾಣಿಕರು ಬೆಳಿಗ್ಗೆ ಹಾಗೂ ಸಂಜೆ ಹೆಚ್ಚು ತೊಂದರೆಗೆ ಅನುಭವಿಸುತ್ತಿದ್ದಾರೆ.

ಬೆಳಿಗ್ಗೆ ಹಾಗೂ ಸಂಜೆ ಸೀಮಿತ ಸಂಖ್ಯೆಯ ಬಸ್‌ಗಳು ಓಡಾಡುವುದರಿಂದ ಸಮಯಕ್ಕೆ ಸರಿಯಾಗಿ ಶಾಲಾ ಕಾಲೇಜುಗಳಿಗೆ ತೆರಳಾಗದೆ, ಕಚೇರಿಗಳನ್ನು ತಲುಪಲಾಗದೆ ಕಿರಿಕಿರಿ ಅನುಭವಿಸುತ್ತಿದ್ದಾರೆ. ಕೊಳ್ಳೇಗಾಲ ತಾಲ್ಲೂಕು ಕೇಂದ್ರದಿಂದ ಮೈಸೂರು, ಬೆಂಗಳೂರು ಸೇರಿದಂತೆ ಇತರೆ ಸ್ಥಳಗಳಲ್ಲಿ ತೆರಳಲು ಬಸ್‌ಗಳ ವ್ಯವಸ್ಥೆ ಉತ್ತಮವಾಗಿದೆ. ಆದರೆ ಜಿಲ್ಲಾ ಕೇಂದ್ರವಾದ ಚಾಮರಾಜನಗರಕ್ಕೆ ಬಸ್‌ಗಳ ಕೊರತೆ ಹೆಚ್ಚಾಗಿದೆ. ಪರಿಣಾಮ ಪ್ರತಿನಿತ್ಯ ಪ್ರಯಾಣಿಕರು ತೊಂದರೆಗೆ ಸಿಲುಕುತ್ತಿದ್ದಾರೆ.

ಉದಯವಾಹಿನಿ ಚಿತ್ರ



ಮೈಸೂರು-ಬೆಂಗಳೂರು ಹಾಗೂ ಮಲೆ ಮಹದೇಶ್ವರ ಬೆಟ್ಟಕ್ಕೆ ನಿಯಮಿತವಾಗಿ ಬಸ್‌ಗಳನ್ನು ಓಡಿಸುತ್ತಿರುವ ಸಾರಿಗೆ ಸಂಸ್ಥೆ ಚಾಮರಾಜನಗರಕ್ಕೆ ಮಾತ್ರ ಬೆರಳೆಣಿಕೆ ಬಸ್‌ಗಳನ್ನು ಓಡಿಸುತ್ತಿರುವುದು ಪ್ರಯಾಣಿಕರ ಆಕ್ರೋಶಕ್ಕೆ ಕಾಣರವಾಗಿದೆ. ಸಂಜೆಯ ಹೊತ್ತು ಕೊಳ್ಳೇಗಾಲದಿಂದ ಚಾಮರಾಜನಗರಕ್ಕೆ ತೆರಳುವ ನೂರಾರು ಮಂದಿ ನಿಲ್ದಾಣದಲ್ಲಿ ಬಸ್‌ಗಾಗಿ ಕಾದು ನಿಲ್ಲುವ ದೃಶ್ಯಗಳು ಸಾಮಾನ್ಯವಾಗಿ ಕಾಣಸಿಗುತ್ತವೆ. ಕೊಳ್ಳೇಗಾಲದಿಂದ ಚಾಮರಾಜನಗರಕ್ಕೆ, ಚಾಮರಾಜನಗರದಿಂದ ಕೊಳ್ಳೇಗಾಲಕ್ಕೆ ಸಮರ್ಪಕ ಕೆಎಸ್‌ಆರ್‌ಟಿಸಿ ಬಸ್ ಓಡಿಸುವಂತೆ ವಿದ್ಯಾರ್ಥಿಗಳು ಹಾಗೂ ಸರ್ಕಾರಿ ನೌಕರರು ಹಲವು ಬಾರಿ ಮನವಿ ಮಾಡಿದರೂ ಅಧಿಕಾರಿಗಳು ಗಮನ ಹರಿಸುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸುತ್ತಾರೆ ಚಾಮರಾಜನಗರದ ಶಿಕ್ಷಕಿ ಸರಸ್ವತಿ.

> ಬೆಳಿಗ್ಗೆ ಚಾಮರಾಜನಗರಕ್ಕೆ ಕೊಳ್ಳೇಗಾಲದಿಂದ ಸರ್ಕಾರಿ ನೌಕರರು ಹಾಗೂ ವಿದ್ಯಾರ್ಥಿಗಳು ಒಂದೇ ಸಮಯಕ್ಕೆ ಹೋಗುವುದರಿಂದ ದಟ್ಟಣೆ ಹೆಚ್ಚಾಗುತ್ತದೆ. ಬಸ್‌ನಲ್ಲಿ ನೂಕು ನುಗ್ಗಲು ಹೆಚ್ಚಾಗಿ ನಿಂತು ಪ್ರಯಾಣಿಸಬೇಕಾಗುತ್ತದೆ. ಜಿಲ್ಲಾಧಿಕಾರಿಗಳು ವಿದ್ಯಾರ್ಥಿಗಳ ಸಮಸ್ಯೆಗೆ ಸ್ಪಂದಿಸಿ ಹೆಚ್ಚು ಬಸ್‌ಗಳನ್ನು ಓಡಿಸಲು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಆದೇಶ ನೀಡಬೇಕು.
>
> -ಅಪೇಕ್ಷಾ ವಿದ್ಯಾರ್ಥಿನಿ

**ಜಿಲ್ಲಾಧಿಕಾರಿಗಳೇ ಗಮನಹರಿಸಿ:** ಕೊಳ್ಳೇಗಾಲದಿಂದ ಚಾಮರಾಜನಗರಕ್ಕೆ ಪ್ರತಿದಿನ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿವಿಧ ಕಾಲೇಜುಗಳಿಗೆ ತೆರಳುತ್ತಾರೆ. ವೃತ್ತಿಪರ ಕೋರ್ಸ್ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯೂ ಹೆಚ್ಚಾಗಿದೆ.

ಸಮಯಕ್ಕೆ ಸರಿಯಾಗಿ ಬಸ್‌ಗಳು ಬಾರದೆ ತರಗತಿಗಳಿಗೆ ಹಾಜರಾಗಲು ಸಾಧ್ಯವಾಗುತ್ತಿಲ್ಲ, ಹಾಜರಾತಿ ಕೊರತೆ ಎದುರಾಗುವುದರ ಜೊತೆಗೆ ವಿದ್ಯಾಭ್ಯಾಸಕ್ಕೂ ತೀರಾ ತೊಂದರೆ ಉಂಟಾಗುತ್ತಿದೆ.

## ಮತದಾರರ ಪಟ್ಟಿ ಸೇರ್ಪಡೆ ನಿಧಾನ; ನೋಂದಣಿಗೆ ಪದವೀಧರರು ನಿರಾಸಕ್ತಿ

• **ಉದಯವಾಹಿನಿ, ತುಮಕೂರು**

ಆಗ್ನೇಯ ಪದವೀಧರರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ಪದವೀಧರರು ಹಾಗೂ ಯುವ ಸಮೂಹ ನಿರಾಸಕ್ತಿ ತೋರುತ್ತಿದ್ದು, ನೋಂದಣಿಗೆ ಸಾಕಷ್ಟು ಮಂದಿ ಮುಂದಾಗುತ್ತಿಲ್ಲ. 2022ರ ನವೆಂಬರ್ ಪೂರ್ವದಲ್ಲಿ ಪದವಿ ಪೂರ್ಣಗೊಳಿಸಿದವರು ಮತದಾನ ಮಾಡಲು ಅರ್ಹರು. ಪಟ್ಟಿಗೆ ಹೆಸರು ನೋಂದಾಯಿಸಿಕೊಳ್ಳಲು ನ. 6ರ ಕೊನೆಯ ದಿನವಾಗಿದೆ. ಎಲ್ಲಾ ತಾಲ್ಲೂಕು ಕಚೇರಿ, ಮಹಾನಗರ ಪಾಲಿಕೆ ಕಚೇರಿಯಲ್ಲಿ ಅರ್ಜಿ ಸಲ್ಲಿಸಲು ಅನುವು ಮಾಡಿಕೊಡಲಾಗಿದೆ. ನಿರೀಕ್ಷಿತ ಮಟ್ಟದಲ್ಲಿ ನೋಂದಣಿ ಆಗುತ್ತಿಲ್ಲ. ಅ. 31ರ ವರೆಗೆ 11,162 ಮಂದಿ ಮಾತ್ರ ಫಾರ್ಮ್ 18 ಸಲ್ಲಿಸಿ, ನೋಂದಣಿ ಮಾಡಿಸಿಕೊಂಡಿದ್ದಾರೆ.




ಇದೇ ವೇಗದಲ್ಲಿ ನಡೆದರೆ 20 ಸಾವಿರ ದಾಟುವುದೂ ಕಷ್ಟಕರ ಎಂದು ಹೇಳಲಾಗುತ್ತಿದೆ. ಈ ಹಿಂದಿನ ಚುನಾವಣೆಯಲ್ಲಿ ಮತದಾನ ಮಾಡಿದವರು ಸಹ ಮತ್ತೊಮ್ಮೆ ನೋಂದಣಿ ಮಾಡಿಕೊಳ್ಳಬೇಕು. ಪದವೀಧರರ ಕ್ಷೇತ್ರ, ಶಿಕ್ಷಕರ ಕ್ಷೇತ್ರಕ್ಕೆ ಚುನಾವಣೆ ನಡೆದ ಪ್ರತಿ ಸಲವೂ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯ. ಹೊಸದಾಗಿ ನೋಂದಾಯಿಸಿ ಕೊಂಡವರಿಗಷ್ಟೇ ಮತದಾನಕ್ಕೆ ಅವಕಾಶ ಸಿಗಲಿದೆ. ಈಗ ಅಗತ್ಯ ದಾಖಲೆ ಸಲ್ಲಿಸಿ ನೋಂದಣಿ ಮಾಡಿಕೊಂಡರೆ ಮಾತ್ರ ಚುನಾವಣೆಯಲ್ಲಿ ಮತದಾನ ಮಾಡಲು ಅವಕಾಶ ಕಲ್ಪಿಸಲಾಗುತ್ತದೆ. ಇದಕ್ಕೆ ಜಿಲ್ಲೆಯಾದ್ಯಂತ ನೀರಸ ಸ್ಪಂದನೆ ವ್ಯಕ್ತವಾಗುತ್ತಿದೆ. 2020ರಲ್ಲಿ ಆಗ್ನೇಯ ಪದವೀಧರರ ಕ್ಷೇತ್ರಕ್ಕೆ ಚುನಾವಣೆ ನಡೆದಿತ್ತು. ಆಗ ಜಿಲ್ಲೆಯಲ್ಲಿ 29,415 ಮಂದಿ ಮತದಾರರು ನೋಂದಣಿಯಾಗಿದ್ದರು. ಮೊದಲ ಹಂತದಲ್ಲಿಯೇ 21,991 ಜನ ಅರ್ಜಿ ಹಾಕಿದ್ದರು. ಈಗ ಇಷ್ಟು ಮತದಾರರನ್ನು ತಲುಪಲು ಅಧಿಕಾರಿಗಳು ಹರಸಾಹಸ ಪಡುತ್ತಿದ್ದಾರೆ.

**ಶಿರಾ ಅಧಿಕ:** ಈವರೆಗೆ ನೋಂದಣಿಯಾದವರ ಪೈಕಿ ಶಿರಾ ತಾಲ್ಲೂಕಿನ ಪದವೀಧರರು ಹೆಚ್ಚಿದ್ದು, 1,777 ಮಂದಿ ಅರ್ಜಿ ಸಲ್ಲಿಸಿದ್ದಾರೆ. ಕಳೆದ ಬಾರಿ ಚುನಾವಣೆ ಸಮಯದಲ್ಲಿ ಅತಿ ಹೆಚ್ಚು 6,990 ಮತದಾರರನ್ನು ಹೊಂದಿದ್ದ ನಗರ ವಿಧಾನಸಭಾ ಕ್ಷೇತ್ರದಲ್ಲಿ ಇಲ್ಲಿಯ ತನಕ 1,416 ಪದವೀದರರು ಮಾತ್ರ ಹೆಸರು ನೋಂದಣಿ ಮಾಡಿಸಿಕೊಂಡಿದ್ದಾರೆ. ಪದವೀಧರರು ಆಯಾ ತಾಲ್ಲೂಕು ಕಚೇರಿಗೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಬಹುದು.

ವಿಧಾನಸಭೆ, ಲೋಕಸಭೆ ಚುನಾವಣೆ ಸಮಯದಲ್ಲಿ ಮತಗಟ್ಟೆ ಅಧಿಕಾರಿಗಳು ಜನರ ಬಳಿಗೆ ತೆರಳಿ ಅಗತ್ಯ ದಾಖಲೆ ಪಡೆಯುತ್ತಾರೆ. ಇಲ್ಲಿ ಮತದಾರರೇ ಕಚೇರಿಗೆ ಹೋಗಬೇಕಿದೆ. ನೋಂದಣಿ ಕುಸಿತಕ್ಕೆ ಇದೂ ಒಂದು ಕಾರಣವಾಗಿದೆ. ಆನ್‌ಲೈನ್ ಮುಖಾಂತರ ಹೆಸರು ಸೇರ್ಪಡೆಗೆ ಅವಕಾಶ ಕಲ್ಪಿಸಿದರೆ ಅನುಕೂಲವಾಗುತ್ತದೆ' ಎಂಬ ಅಭಿಪ್ರಾಯವನ್ನು ಪದವೀಧರರು ವ್ಯಕ್ತಪಡಿಸುತ್ತಿದ್ದಾರೆ.

## ಮಿನಿ ನ್ಯೂಸ್

### ಜ್ಞಾನ ಕ್ಷೇತ್ರದಲ್ಲಿ ರಾಜ್ಯ ಮುಂಚೂಣಿ ಮಾಗಡಿ ಡಿಪೋ ವ್ಯವಸ್ಥಾಪಕ

• **ಉದಯವಾಹಿನಿ, ಮಾಗಡಿ**

ಕರ್ನಾಟಕ ತನ್ನದೇ ಇತಿಹಾಸ ಹೊಂದಿದೆ. ಎಲ್ಲಾ ಕ್ಷೇತ್ರಗಳಲ್ಲೂ ಮೊದಲನೆ ಸ್ಥಾನದಲ್ಲಿ ಕರ್ನಾಟಕ ನಿಲ್ಲಲಿದೆ. ಇದು ಎಲ್ಲರಿಗೂ ಹೆಮ್ಮೆಯ ವಿಷಯ ಎಂದು ಮಾಗಡಿ ಕೆಎಸ್‌ಆರ್‌ಟಿಸಿ ಬಸ್ ಡಿಪೋ ವ್ಯವಸ್ಥಾಪಕ ಮಂಜುನಾಥ್ ಅಭಿಪ್ರಾಯಪಟ್ಟರು. ಪಟ್ಟಣದ ಕಲ್ಯಾಗೇಟ್ ವೃತ್ತದಲ್ಲಿ ಪ್ರಯಾಣಿಕರು ಏರ್ಪಡಿಸಿದ್ದ 70ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಜ್ಞಾನ ಕ್ಷೇತ್ರದಲ್ಲಿ ಕರ್ನಾಟಕ ಶಕ್ತಿ ಅಮೋಘ. ಮಾಹಿತಿ, ಜೈವಿಕ ತಂತ್ರಜ್ಞಾನದಲ್ಲಿ ವಿಶ್ವದಲ್ಲಿಯೇ ಮುಂಚೂಣಿಯಲ್ಲಿದೆ. ಗೋದಾವರಿಗೂ ಕರ್ನಾಟಕ ಬೆಳೆದಿತ್ತು. ಇಮ್ಮಡಿ ಪುಲಿಕೇಶಿ ರಾಜ್ಯವನ್ನು ವಿಸ್ತರಿಸಿದರು. ಸ್ವಾತಂತ್ರ್ಯಕ್ಕಾಗಿ ಮೊದಲು ಹೋರಾಟಗಾರ್ತಿ ಕಿತ್ತೂರು ರಾಣಿ ಚೆನ್ನಮ್ಮ, ಸಂಗೊಳ್ಳಿ ರಾಯಣ್ಣನ ಹೋರಾಟ ಎಲ್ಲರಿಗೂ ಮಾದರಿ. ಜಾತಿಭೇದವಿಲ್ಲ, ಎಲ್ಲರೂ ಒಂದೇ. ಪಂಪ, ರನ್ನ, ಕುವೆಂಪು, ದಾ.ರಾ.ಬೇಂದ್ರೆ, ಬಸವಣ್ಣ ಎಲ್ಲರೂ ಇದನ್ನೇ ಸಾರಿದ್ದಾರೆ ಎಂದರು.

ಟಿ.ಸಿ.ವೆಂಕಟೇಶ್ ಮಾತನಾಡಿ, ಸಾಹಿತಿ ದೇ.ಜವರೇಗೌಡ, ಲಿಂಗೈಕ್ಯ ಸಿದ್ದಗಂಗೆ ಡಾ.ಶಿವಕುಮಾರಸ್ವಾಮೀಜಿ, ಪದ್ಮಶ್ರೀ ವಿಜೇತೆ ಸಾಲು ಮರದ ತಿಮ್ಮಕ್ಕ ಮಾಗಡಿ ತಾಲ್ಲೂಕಿನಲ್ಲಿ ಜನಿಸಿದ ಮಹನೀಯರು. ಕರ್ನಾಟಕವಲ್ಲ, ಇಡೀ ವಿಶ್ವವೇ ಮೆಚ್ಚುವ ನಾಯಕ ಮಾಗಡಿ ಕೆಂಪೇಗೌಡ ಎಂದು ಅಭಿಪ್ರಾಯಪಟ್ಟರು. ನಿರ್ವಾಹಕ ಮಾರುತಿ ಮಾತನಾಡಿ, ಕನ್ನಡಿಗರ ಕನಸು ಈಡೇರಬೇಕಾದರೆ ಭಾಷಾವಾರು ಪ್ರಾಂತ್ಯ ಸಂದರ್ಭದಲ್ಲಿ ಬಿಟ್ಟು ಹೋಗಿರುವ ಊರುಗಳು ನಾಡಿಗೆ ಸೇರ್ಪಡೆಯಾಗಬೇಕಿದೆ ಎಂದು ತಿಳಿಸಿದರು.

### ಕೆ-ಸೆಟ್ ಪರೀಕ್ಷೆ: ವಿದ್ಯಾರ್ಥಿನಿಯರ ಓಲೆ, ಮೂಗುತಿ ತೆಗೆಸಿದಕ್ಕೆ ಖಂಡನೆ

• **ಉದಯವಾಹಿನಿ, ಕನಕಪುರ**

ಬಳ್ಳಾರಿಯಲ್ಲಿ ನಡೆದ ಕೆ-ಸೆಟ್ ಪರೀಕ್ಷಾ ಕೇಂದ್ರದಲ್ಲಿ ಹಿಂದೂ ವಿದ್ಯಾರ್ಥಿನಿಯರ ಕಿವಿಯೋಲೆ ಮತ್ತು ಮೂಗುತಿಯನ್ನು ತೆಗೆಸಿದ ಘಟನೆಯನ್ನು ಶ್ರೀರಾಮ ಸೇನೆ ದಕ್ಷಿಣ ಪ್ರಾಂತ ಪ್ರಧಾನ ಕಾರ್ಯದರ್ಶಿ ನಾಗಾರ್ಜುನಗೌಡ ಖಂಡಿಸಿದ್ದಾರೆ. ಹಿಂದೂ ಧಾರ್ಮಿಕ ಪರಂಪರೆ ಮತ್ತು ನಂಬಿಕೆ ಮೇಲಿನ ಹಲ್ಲೆ ಎಂದು ಆರೋಪಿಸಿದ ಅವರು, ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಈ ಘಟನೆ ರಾಜ್ಯದಲ್ಲಿನ ಹಿಂದೂ ವಿರೋಧಿ ಮನೋಭಾವ ಸೂಚಕ ಎಂದು ದೂರಿದರು. ರಾಜ್ಯದ ವಿರುದ್ಧ ಕೇಂದ್ರ ಸರ್ಕಾರ ಕ್ರಮಕೈಗೊಳ್ಳಬೇಕೆಂದು ಎಂದು ಸಂಸ್ಥೆ ಒತ್ತಾಯಿಸಿದೆ.

### ಶಿಲ್ಪಿಗಳು ಸಂಸ್ಕೃತಿಯ ರಾಯಭಾರಿಗಳು ಪಿ. ಸುಜ್ಞಾನಮೂರ್ತಿ ಅಭಿಪ್ರಾಯ

• **ಉದಯವಾಹಿನಿ, ಬಿಡದಿ**

ಶಿಲ್ಪಿಗಳು ನಮ್ಮ ಸಂಸ್ಕೃತಿಯ ನಿಜವಾದ ರಾಯಭಾರಿಗಳು, ಅವರ ಕೈಗಳಲ್ಲಿ ಕಲ್ಲುಗಳು ಸಹ ಜೀವ ಪಡೆಯುತ್ತವೆ. ಮರಗಳು ಮಾತಾಡುತ್ತವೆ. ಈ ದೇಶ ಮತ್ತು ನಾಡು ಕಂಡಿರುವ ಮಹಾನ್ ಶಿಲ್ಪಿಗಳ ಕೆತ್ತನೆಗಳು ವಿಶ್ವದ ಗಮನ ಸೆಳೆದಿವೆ ಎಂದು ಕರ್ನಾಟಕ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಪಿ. ಸುಜ್ಞಾನಮೂರ್ತಿ ಅಭಿಪ್ರಾಯಪಟ್ಟರು. ಪಟ್ಟಣದ ಕೈಗಾರಿಕಾ ಪ್ರದೇಶವಾದ ಜೋಗರದೊಡ್ಡಿಯಲ್ಲಿರುವ ಕೆನರಾ ಬ್ಯಾಂಕ್ ಕೆ.ಪಿ.ಜೆ. ಪ್ರಭು ಕರಕುಶಲ ತರಬೇತಿ ಸಂಸ್ಥೆಯಲ್ಲಿ ನಡೆದ ಸಂವಾದ ಕಾರ್ಯಕ್ರಮದಲ್ಲಿ ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಕೆನರಾ ಬ್ಯಾಂಕ್ ಜಾಗತಿಕ ಮಟ್ಟದಲ್ಲಿ ಬೃಹತ್ತಾಗಿ ಬೆಳೆದಿದ್ದರೂ, ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆಯತ್ತ ಗಮನ ನೀಡಿ ಸಮಾಜಕ್ಕೆ ತನ್ನದೇ ಆದ ಕೊಡುಗೆ ನೀಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ವಿಶೇಷವಾಗಿ ಗ್ರಾಮೀಣ ಭಾಗದ ಯುವಜನರಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸಲು ಸ್ವ-ಉದ್ಯೋಗ ತರಬೇತಿ ಸಂಸ್ಥೆಗಳನ್ನು ಬ್ಯಾಂಕ್ ಹಲವೆಡೆ ಸ್ಥಾಪಿಸಿದೆ. ಕರಕುಶಲ ಕ್ಷೇತ್ರವನ್ನು ಪುನಶ್ಚೇತನಗೊಳಿಸಲು ಕರಕುಶಲ ತರಬೇತಿ ಸಂಸ್ಥೆಯನ್ನು ಪ್ರಾರಂಭಿಸಿದೆ. ಇಲ್ಲಿಂದ ಇದುವರೆಗೆ ನೂರಾರು ಮಂದಿ ಕರಕುಶಲ ಕೆಲಸಗಾರರಾಗಿ ಮತ್ತು ಉದ್ಯಮಿಗಳಾಗಿ ಬೆಳೆದಿದ್ದಾರೆ ಎಂದರು.

### ಬಸ್ ಹತ್ತಿಸಿ, ಇಳಿಸುವುದು ಅಭಿವೃದ್ಧಿಯಲ್ಲ ಸಂಸದ ಡಾ.ಸಿ.ಎನ್.ಮಂಜುನಾಥ್

• **ಉದಯವಾಹಿನಿ, ಕುಣಿಗಲ್**

ಬಸ್ ಹತ್ತಿಸಿ, ಇಳಿಸುವುದು ಅಭಿವೃದ್ಧಿಯಲ್ಲ. ಶಾಶ್ವತ ಯೋಜನೆಗಳ ಮೂಲಕ ಕೆರೆ ನಿರ್ಮಾಣ, ಜನತೆಗೆ ಶುದ್ಧ ಕುಡಿಯುವ ನೀರು, ಆರೋಗ್ಯ, ಗುಣಮಟ್ಟದ ಶಿಕ್ಷಣ, ರೈತರಿಗೆ ಅಗತ್ಯ ಸೌಲಭ್ಯ ನೀಡುವುದು ಅಭಿವೃದ್ಧಿಯ ಸಂಕೇತ ಎಂದು ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್. ಮಂಜುನಾಥ್ ಹೇಳಿದರು.

ತಾಲ್ಲೂಕಿನ ಯಾಚಘಟ್ಟ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟಿಸಿ ಮಾತನಾಡಿದರು. ಶೇ. 50 ಆರೋಗ್ಯ ಸಮಸ್ಯೆಗಳು ಕಲುಷಿತ ನೀರಿನಿಂದ ಬರುತ್ತಿದ್ದು, ತಾಲ್ಲೂಕಿನ ಹತ್ತು ಗ್ರಾಮಗಳಲ್ಲಿ ಸತ್ವ ಗ್ರೂಪ್‌ನ ಸಿಎಸ್‌ಆರ್ ನಿಧಿಯಿಂದ 1 ಕೋಟಿ ವೆಚ್ಚದಲ್ಲಿ ನಿರ್ಮಿಸಿ ಸಾರ್ವಜನಿಕರಿಗೆ ಸಮರ್ಪಣೆ ಮಾಡಲಾಗುತ್ತಿದೆ. ತಾಲ್ಲೂಕಿನ ಹತ್ತು ಕಡೆ ಪ್ರಯಾಣಿಕರ ತಂಗುದಾಣ ನಿರ್ಮಾಣವಾಗುತ್ತಿದ್ದು, ಶೀಘ್ರದಲ್ಲಿ ಉದ್ಘಾಟಿಸಲಾಗುವುದು ಎಂದರು.

## ಭಾರೀ ಕುತೂಹಲಕ್ಕೆ ಕಾರಣವಾಗಿರುವ ನವೆಂಬರ್ ಕ್ರಾಂತಿಯ ಸುದ್ದಿ

### ● ಸಿದ್ದು – ಡಿಕೆಶಿ ನಡುವೆ 'ಜಂಟಲ್‌ಮ್ಯಾನ್' ಅಗ್ರೀಮೆಂಟ್ ನಡೆದಿದೆ : ಸಂಸದರೊಬ್ಬರಿಂದ ಸ್ಫೋಟಕ ಮಾಹಿತಿ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಸದ್ಯ ಕರ್ನಾಟಕ ಕಾಂಗ್ರೆಸ್ಸಿನಲ್ಲಿ ನವೆಂಬರ್ ಕ್ರಾಂತಿ, ಸಿಎಂ ಬದಲಾವಣೆಯ ವಿಚಾರವೇ ಬಹುದೊಡ್ಡ ಚರ್ಚೆಯ ವಿಷಯವಾಗಿದೆ. ಕೆಲವರಂತೂ, ಮುಂದಿನ ಮುಖ್ಯಮಂತ್ರಿ ಇದೇ ದಿನಾಂಕದಂದು ಪದಗ್ರಹಣ ನಡೆಸಲಿದ್ದಾರೆ ಎನ್ನುವ ಮಾತನ್ನೂ ಆಫ್ ದಿ ರೆಕಾರ್ಡ್ ಹೇಳುತ್ತಿದ್ದಾರೆ. ಹಿಂದೆ ಕಾಂಗ್ರೆಸ್ಸಿನಲ್ಲಿದ್ದ ಮತ್ತು ಈಗಲೂ ಸಿದ್ದರಾಮಯ್ಯನವರ ಆಪ್ತರೂ ಆಗಿರುವ ಚಿಕ್ಕಬಳ್ಳಾಪುರದ ಹಾಲೀ ಬಿಜೆಪಿ ಸಂಸದ ಡಾ.ಕೆ.ಸುಧಾಕರ್, ಪವರ್ ಶೇರಿಂಗ್ ವಿಚಾರಕ್ಕೆ ಸಂಬಂಧಿಸಿದಂತೆ, ಸ್ಫೋಟಕ ಹೇಳಿಕೆಯೊಂದನ್ನು ನೀಡಿದ್ದಾರೆ. ಅವರ ಪ್ರಕಾರ, ನವೆಂಬರ್ ಕ್ರಾಂತಿ ನಡೆಯುವುದು ನಿಶ್ಚಿತ. ಮೇ 2023ರವೇಳೆ ಹಾಲೀ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ನಡುವೆ ಪವರ್ ಶೇರಿಂಗ್ ಮಾತುಕತೆ ನಡೆದಿದೆ, ಇದು ನನಗಿರುವ ಮಾಹಿತಿ ಎಂದು ಡಾ. ಸುಧಾಕರ್ ಹೇಳಿದ್ದಾರೆ.

ಎಚ್.ಡಿ.ಕುಮಾರಸ್ವಾಮಿ ನೇತೃತ್ವದ ಸಮ್ಮಿಶ್ರ ಸರ್ಕಾರದ ವೇಳೆ, ಡಾ.ಸುಧಾಕರ್ ಆದಿಯಾಗಿ ಹಲವು ಕಾಂಗ್ರೆಸ್, ಜೆಡಿಎಸ್ ನಾಯಕರು, ಬಿಜೆಪಿಯನ್ನು ಸೇರಿದ್ದರು.

ರಾಜಧಾನಿಯಲ್ಲಿರುವ ಬಿಹಾರ ಸಮುದಾಯದವರು ಡಿಕೆ ಶಿವಕುಮಾರ್ ಅವರೇ ಮುಂದಿನ ಸಿಎಂ ಆಗಲಿ ಎನ್ನುವ ಹೇಳಿಕೆಗೆ ಸಿಎಂ ಸಿದ್ದರಾಮಯ್ಯ ಖಾರವಾಗಿ ಪ್ರತಿಕ್ರಿಯಿಸಿದ್ದರು. ಅವರಿವರು ಹೇಳುವುದಲ್ಲ, ಹೈಕಮಾಂಡ್ ಹೇಳಿದ್ದೇ ಅಂತಿಮ ಎಂದು ಸಿಎಂ ಗರಂ ಆಗಿದ್ದರು.



> ಒಂದು ವಿಚಾರವನ್ನು ಅತ್ಯಂತ ಸ್ಪಷ್ಟವಾಗಿ ಹೇಳುತ್ತೇನೆ. ಇವತ್ತು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಅನೇಕ ಕಾರಣಗಳಿವೆ. ನಾವು ಎಲ್ಲಿ ಎಡವಿದ್ದೆವು ಅದು ಬೇರೆ ವಿಚಾರ. ನಮ್ಮ ತಪ್ಪೂ ಇದೆ, ಇಲ್ಲವೆನ್ನುತ್ತಿಲ್ಲ. ಆದರೆ, ಕಾಂಗ್ರೆಸ್ ಪಾರ್ಟಿಗೆ ಪಾಸಿಟೀವ್ ಆಗಿ ಹೇಳಬೇಕೆಂದರೆ, ಅವರು ಅಧಿಕಾರಕ್ಕೆ ಬರಲು ಐವತ್ತು ಪರ್ಸೆಂಟ್ ಸಿದ್ದರಾಮಯ್ಯ ಕಾರಣ, ಇನ್ನು ಐವತ್ತು ಪರ್ಸೆಂಟ್ ಡಿಕೆ ಶಿವಕುಮಾರ್ ಕಾರಣ.
>
> - ಡಾ. ಕೆ. ಸುಧಾಕರ್, ಬಿಜೆಪಿ ಸಂಸದ



**ಏನು ಮಾತುಕತೆ ನಡೆದಿರುತ್ತೋ ಅದರಂತೆಯೇ ನಡೆದುಕೊಳ್ಳಬೇಕು**

ಗ್ರಾಮ ಪಂಚಾಯತಿ ಲೆವೆಲ್‌ನಲ್ಲಿ ಅವಧಿ ಮುಗಿಯಲು ಇನ್ನು ಒಂದು ತಿಂಗಳು ಇರಬೇಕಾದಾಗಲೇ, ರಾಜೀನಾಮೆ ಪತ್ರವನ್ನು ನೀಡಿ, ಮುಂದಿನವರನ್ನು ಆಯ್ಕೆ ಮಾಡಲು ದಾರಿ ಮಾಡಿಕೊಡುತ್ತಾರೆ. ಹಾಗಾಗಿ, ಉನ್ನತ ಸ್ಥಾನದಲ್ಲಿ ಇರುವವರು ಜಂಟಲ್‌ಮ್ಯಾನ್ ಅಗ್ರೀಮೆಂಟ್ ಮಹತ್ವವನ್ನು ಅರಿತುಕೊಳ್ಳಬೇಕು, ಅವರ ಪಾರ್ಟಿಗೆ ಒಳ್ಳೆದಾಗಬೇಕು ಎಂದರೆ, ಏನು ಮಾತುಕತೆ ನಡೆದಿರುತ್ತೋ ಅದರಂತೆಯೇ ನಡೆದುಕೊಳ್ಳಬೇಕಾಗುತ್ತದೆ. ಇಲ್ಲ, ಇಬ್ಬರ ನಡುವೆ ಒಮ್ಮತ ಮೂಡದೇ ಸರ್ಕಾರ ಬಿದ್ದು ಹೋದರೆ, ರಾಜ್ಯಕ್ಕೆ ಇನ್ನಷ್ಟು ಒಳ್ಳೆಯದು ಎಂದು ಡಾ.ಸುಧಾಕರ್ ಹೇಳಿದ್ದಾರೆ. ಸಿದ್ದರಾಮಯ್ಯ ಕೆಳಗಿಳಿದರೂ, ಡಿಕೆ ಶಿವಕುಮಾರ್ ಅವರು ಸಿಎಂ ಆದರೂ, ನನಗೇನು ಲಾಭನಷ್ಟವಿಲ್ಲ. ಈ ಸರ್ಕಾರ ಇದೇ ರೀತಿ ಆಡಳಿತ ನಡೆಸುತ್ತಾ ಬಂದರೆ, ನಾವು ಏನೂ ಮಾಡಬೇಕಾಗಿಲ್ಲ, ನಿರಾಯಾಸವಾಗಿ ಜನರೇ ನಮ್ಮನ್ನು ಮುಂದಿನ ಬಾರಿ ಅಧಿಕಾರದಲ್ಲಿ ಕೂರಿಸುತ್ತಾರೆ.

ನನಗಿರುವ ಸ್ಪಷ್ಟವಾದ ಮಾಹಿತಿಯಂತೆ, ಅವರಿಬ್ಬರ ನಡುವೆ ಮಾತುಕತೆಯಾಗಿದೆ, ಎರಡೂವರೆ ವರ್ಷ ಅಧಿಕಾರ ಹಂಚಿಕೆಯ ಚರ್ಚೆಯಾಗಿದೆ. ಅದು ದೆಹಲಿಯಲ್ಲಿ ನಡೆದ ಮಾತುಕತೆಯಾಗಿದೆ. ಜಂಟಲ್‌ಮ್ಯಾನ್ ಅಗ್ರೀಮೆಂಟ್ ಎನ್ನುವುದು ನಮ್ಮ ಗ್ರಾಮ ಪಂಚಾಯತಿ ಲೆವೆಲ್‌ನಲ್ಲೂ ನಡೆಯುತ್ತದೆ. ಎರಡೂವರೆ ವರ್ಷಕ್ಕೆ ಬದಲಾವಣೆಯಾಗುತ್ತದೆ ಎಂದು ಡಾ. ಸುಧಾಕರ್ ಹೇಳಿದ್ದಾರೆ.

ವನ್ಯಜೀವಿ ಸಂರಕ್ಷಣೆ ಕಾಯ್ದೆ 1972 ಸೆಕ್ಷನ್ 29ರ ಅನ್ವಯ ಅಭಯಾರಣ್ಯಗಳನ್ನು ಅರಣ್ಯೇತರ ಉದ್ದೇಶಕ್ಕೆ ಬಳಸುವಂತಿಲ್ಲ

# ಶರಾವತಿ ಪಂಪ್ ಸ್ಟೋರೇಜ್: ಸುಳ್ಳು ಮಾಹಿತಿ, ಜನರ ದಿಕ್ಕು ತಪ್ಪಿಸುವ ಪ್ರಯತ್ನ

• ಉದಯವಾಹಿನಿ ಶಿವಮೊಗ್ಗ

ವನ್ಯಜೀವಿ ಸಂರಕ್ಷಣೆ ಕಾಯ್ದೆ 1972 ಸೆಕ್ಷನ್ 29ರ ಅನ್ವಯ ಅಭಯಾರಣ್ಯಗಳನ್ನು ಅರಣೇತರ ಉದ್ದೇಶಕ್ಕೆ ಬಳಸುವಂತಿಲ್ಲ. ಆದರೆ, ಶರಾವತಿ ಪಂಪ್ ಸ್ಟೋರೇಜ್ ಯೋಜನೆಗೆ ನಾಶ



ಆಗುತ್ತಿರುವ 54 ಹೆಕ್ಟೇರ್ ಅರಣ್ಯ ಪ್ರದೇಶ ಸಿಂಗಳೀಕ ಅಭಯಾರಣ್ಯದ ಕೇಂದ್ರ ಭಾಗದಲ್ಲಿ ಬರುತ್ತದೆ. ಅದನ್ನು ಮುಚ್ಚಿಟ್ಟು ಯೋಜನೆಯ ವಿಚಾರದಲ್ಲಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ (ಕೆಪಿಸಿಎಲ್) ಸಾರ್ವಜನಿಕರಿಗೆ ಸುಳ್ಳು ಹೇಳುತ್ತಿದೆ. ಅದಕ್ಕೆ ಮಾಧ್ಯಮಗಳನ್ನು ಬಳಸಿಕೊಳ್ಳುತ್ತಿದೆ' ಎಂದು ಪರಿಸರ ಹೋರಾಟಗಾರ ಅಖಿಲೇಶ್ ಚಿಪ್ಪಳಿ ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕ ವಿದ್ಯುತ್ ನಿಗಮ ನಿಯಮಿತ ಈಚೆಗೆ ಮಾಧ್ಯಮ ಸಂವಾದದಲ್ಲಿ ನೀಡಿದ್ದ ಮಾಹಿತಿ ಸುಳ್ಳು ಎಂದು ಹೇಳಿದ ಚಿಪ್ಪಳಿ, ಅದಕ್ಕೆ ಪೂರಕವಾಗಿ ಇಲ್ಲಿ ಸುದ್ದಿಗೋಷ್ಠಿಯಲ್ಲಿ ಕೆಲವು ದಾಖಲೆಗಳನ್ನು ಬಿಡುಗಡೆ ಮಾಡಿ ಮಾತನಾಡಿದರು. 'ಹಾಲಿ ನಡೆಯುತ್ತಿರುವ ಮಾನವ ಪ್ರಾಣಿ ಸಂಘರ್ಷಕ್ಕೆ ಅರಣ್ಯ ಇಲಾಖೆಯ ಧೋರಣೆಯೇ ಕಾರಣ. ಶರಾವತಿ ಪಂಪ್ ಸ್ಟೋರೇಜ್ ಅಡಿ ಅರಣ್ಯೇತರ ಉದ್ದೇಶಗಳಿಗೆ ಅರಣ್ಯ ಪ್ರದೇಶ ಬಳಸಲು ಅನುಮತಿ ಕೋರಿ ರಾಜ್ಯ ಸರ್ಕಾರ ಕೇಂದ್ರಕ್ಕೆ ಪತ್ರ ಬರೆದು ವಿನಂತಿಸಿದೆ. ಆದರೆ,


☛ ಉದಯವಾಹಿನಿ ಚಿತ್ರ

**ಪರಿಸರ ಹೋರಾಟಗಾರ ಅಖಿಲೇಶ್ ಚಿಪ್ಪಳಿ ಆಕ್ರೋಶ**

ಈ ವಿಚಾರವನ್ನು ಮುಚ್ಚಿಟ್ಟಿದೆ ಎಂದರು. ಯೋಜನೆ ಅನುಷ್ಠಾನಕ್ಕೆ ಕೇಂದ್ರದ ಪರಿಸರ ಸಚಿವಾಲಯ ಸೇರಿ 13 ವಿವಿಧ ಇಲಾಖೆಗಳ ಅನುಮತಿ ಪಡೆಯಲಾಗಿದೆ ಎಂದು ಕೆಪಿಸಿಎಲ್ ಅಧಿಕಾರಿಗಳು ಹೇಳುತ್ತಾರೆ. ವಾಸ್ತವವಾಗಿ ಆ ಅನುಮತಿ ವಿಸ್ತ್ರತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಲು ಮಾತ್ರವೇ ಹೊರತು ಯೋಜನೆಯ ಅನುಷ್ಠಾನಕ್ಕೆ ಅಲ್ಲ' ಎಂದು ಹೇಳಿದರು.

ಪಂಪ್ ಸ್ಟೋರೇಜ್ ಯೋಜನೆಗೆ ಯಾವುದೇ ಕೃಷಿ ಭೂಮಿ ಬಳಸಿಕೊಳ್ಳುವುದಿಲ್ಲ ಎಂದು ಕೆಪಿಸಿಎಲ್ ಅಧಿಕಾರಿಗಳು ಹೇಳುತ್ತಾರೆ. ಆದರೆ ಹೊನ್ನಾವರ ಭಾಗದಲ್ಲಿ ತಹಶೀಲ್ದಾರ್ ಮೂಲಕ 46 ರೈತರಿಗೆ ನೋಟಿಸ್ ನೀಡಿ ಭೂಸ್ವಾಧೀನದ ವಿಚಾರ ಪ್ರಸ್ತಾಪಿಸಿದ್ದಾರೆ. ಇದು ಕೆಪಿಸಿಎಲ್‌ನ ಇಬ್ಬಂದಿತನಕ್ಕೆ ಸಾಕ್ಷಿ ಎಂದು ದೂರಿದರು. 'ಶರಾವತಿ ಪಂಪ್ಸ್ ಸ್ಟೋರೇಜ್‌ಗೆ ಭೂಮಿಯಡಿ 10 ಮೀಟರ್ ವ್ಯಾಸದ ಸುರಂಗ ನಿರ್ಮಾಣಕ್ಕೆ 18,000 ಟನ್ ಸ್ಫೋಟಕ ಬಳಸಲಾಗುತ್ತಿದೆ ಎಂದು ಪ್ರಸ್ತಾವಿತ ಯೋಜನಾ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಆದರೆ, ಮಾಧ್ಯಮ ಸಂವಾದದ ವೇಳೆ ಕೇವಲ 1,008 ಟನ್ ಬಳಕೆ ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ಸುಳ್ಳು ಮಾಹಿತಿ ನೀಡಿದ್ದಾರೆ' ಎಂದು ಹರಿಹಾಯ್ದರು. ಸುರಂಗ ನಿರ್ಮಾಣದ ವೇಳೆ ಬಳಸುವ ಸ್ಫೋಟಕದಿಂದ ಉಂಟಾಗುವ 12 ದಶಲಕ್ಷ ಟನ್ ವಿಷಕಾರಿ ಪದಾರ್ಥವನ್ನು ನದಿಯ ಪಕ್ಕ ಶೇಖರಿಸಲಾಗುತ್ತದೆ. ಕ್ರಮೇಣ ಇದು ನದಿ ಮೂಲಕ ಸಮುದ್ರ ಸೇರುತ್ತದೆ. ಇದರಿಂದ ಉಂಟಾಗುವ ಮಾನವ ಹಾಗೂ ಪರಿಸರ ಹಾನಿಯ ಬಗ್ಗೆ ಅಧಿಕಾರಿಗಳು ಚಕಾರ ಎತ್ತಿಲ್ಲ' ಎಂದು ತರಾಟೆಗೆ ತೆಗೆದುಕೊಂಡರು.

ಪಶ್ಚಿಮಘಟ್ಟದ ಸೂಕ್ಷ್ಮ ಪರಿಸರಕ್ಕೆ ಧಕ್ಕೆ ತರುವ ಶರಾವತಿ ಪಂಪ್ ಸ್ಟೋರೇಜ್ ಯೋಜನೆಯನ್ನು ಯಾವುದೇ ಕಾರಣಕ್ಕೂ ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಯೋಜನೆಯನ್ನು ತಕ್ಷಣ ಹಿಂಪಡೆಯದಿದ್ದರೆ ಶಿವಮೊಗ್ಗ ಮತ್ತು ಉತ್ತರ ಕನ್ನಡದ ಜನರು ಉಗ್ರ ಹೋರಾಟ ಮಾಡಬೇಕಾಗುತ್ತದೆ' ಎಂದು ಎಚ್ಚರಿಕೆ ನೀಡಿದರು.

ಅಜಯ್‌ಕುಮಾರ್ ಶರ್ಮಾ ಮಾತನಾಡಿ, ಯೋಜನಾ ಪ್ರದೇಶದಲ್ಲಿ ಇತಿಹಾಸ ಪ್ರಸಿದ್ಧ ಚನ್ನಭೈರಾದೇವಿಯ ರಾಜಧಾನಿ ಪ್ರದೇಶವಿದೆ. ಅನೇಕ ಸ್ಮಾರಕಗಳು ಭಾರತೀಯ ಪುರಾತತ್ವ ಸರ್ವೇಕ್ಷಣಾಲಯದ (ಎಎಸ್‌ಐ) ಸಂರಕ್ಷಿತ ಸ್ಮಾರಕಗಳ ಪಟ್ಟಿಯಲ್ಲಿವೆ. ಈ ಸಂರಕ್ಷಿತ ಪ್ರದೇಶದೊಳಗೆ ಕೆಪಿಸಿಎಲ್ ಅಧಿಕಾರಿಗಳು ಯೋಜನೆಯ ಅನುಷ್ಠಾನಕ್ಕೆ ಗುರುತು ಮಾಡಿದರೂ ಎಎಸ್‌ಐ ಅಧಿಕಾರಿಗಳು ಅದನ್ನು ತಡೆಯದೇ ನಿದ್ದೆ ಹೊಡೆಯುತ್ತಿದ್ದಾರೆ' ಎಂದು ಕುಟುಕಿದರು.

### ಟೀ-ಕೆನಾಪಿ ವಿಚಾರವೇ ಅವೈಜ್ಞಾನಿಕ: ಶ್ರೀಪತಿ

ಶ್ರೀಪತಿ ಮಾತನಾಡಿ 'ಅಭಯಾರಣ್ಯದಲ್ಲಿ ಕಾಡು ಕಡಿದು ರಸ್ತೆ ಮಾಡುವ ಸ್ಥಳದಲ್ಲಿ ಸಿಂಗಳೀಕಗಳ ಮುಕ್ತ ಸಂಚಾರಕ್ಕೆ ಟೀ-ಕೆನಾಪಿ ನಿರ್ಮಿಸುವುದಾಗಿ ಕೆಪಿಸಿಎಲ್ ಅಧಿಕಾರಿಗಳು ಮಾಧ್ಯಮ ಸಂವಾದದಲ್ಲಿ ಹೇಳಿದ್ದಾರೆ. ಆದರೆ ಯಾವ ಪ್ರಾಣಿಗಳು ಈ ಟೀ- ಕೆನಾಪಿಯಲ್ಲಿ ಸಂಚರಿಸುತ್ತವೆ ಎಂಬುದನ್ನು ಕೆಪಿಸಿಎಲ್ ಅಧ್ಯಯನ ನಡೆಸಿದೆಯೇ ಎಂದು ಪ್ರಶ್ನಿಸಿದರು. ಜಗತ್ತಿನ ಯಾವುದೇ ಸ್ಥಳದಲ್ಲಿ ಅಂತಹ ಟೀ ಕೆನಾಪಿ ಇಲ್ಲ. ಇದು ಜನರನ್ನು ತಪ್ಪು ದಾರಿಗೆ ಎಳೆಯುವ ಪ್ರಯತ್ನ' ಎಂದು ಬೇಸರ ವ್ಯಕ್ತಪಡಿಸಿದರು. ಈಗ ಇರುವ ವಿದ್ಯುತ್ ಪ್ರಸರಣ ಮಾರ್ಗದಲ್ಲಿಯೇ ಆಧುನಿಕ ತಂತ್ರಜ್ಞಾನ ಬಳಸಿ ಪಂಪ್ಸ್ ಸ್ಟೋರೇಜ್‌ನ ವಿದ್ಯುತ್ ಕೊಂಡೊಯ್ಯಲಾಗುವುದು ಎಂದು ಕೆಪಿಟಿಸಿಎಲ್ ಹೇಳುತ್ತಿದೆ. ಅದು ಕೂಡ ಸುಳ್ಳಿನ ಕಂತೆ. ವಾಸ್ತವವಾಗಿ ಈಗಿರುವ ಮಾರ್ಗದಲ್ಲಿಯೇ ಹೆಚ್ಚುವರಿ ವಿದ್ಯುತ್ ಸಾಗಿಸಬೇಕೆಂದರೆ ಸುರಕ್ಷಾ ದೃಷ್ಟಿಯಿಂದ ಸಾಗಾಣಿಕೆ ಕಾರಿಡಾರನ್ನು ವಿಸ್ತರಿಸಲೇಬೇಕು. ಆದರೆ ಅದನ್ನು ಅಧಿಕಾರಿಗಳು ಮುಚ್ಚಿಡುತ್ತಿದ್ದಾರೆ ಎಂದರು.

## ಶಿಕ್ಷಣ, ಸಂಸ್ಕಾರದಿಂದ ಸಮಾಜದ ಅಭಿವೃದ್ಧಿ: ಶ್ರೀರಾಮುಲು

• ಉದಯವಾಹಿನಿ ಲಕ್ಷ್ಮೇಶ್ವರ

ಶಿಕ್ಷಣ ಹಾಗೂ ಉತ್ತಮ ಸಂಸ್ಕಾರದಿಂದ ಮಾತ್ರ ಸಮಾಜದ ಅಭಿವೃದ್ಧಿ. ವಾಲ್ಮೀಕಿ ಸಮುದಾಯದವರು ತಮ್ಮ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಬೇಕು' ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಹೇಳಿದರು.

ಪಟ್ಟಣದ ತೇರಿನ ಮನೆ ಆವರಣದಲ್ಲಿ ತಾಲ್ಲೂಕು ಮಹರ್ಷಿ ವಾಲ್ಮೀಕಿ ನಾಯಕ ವಿವಿದೋದ್ದೇಶಗಳ ಸಂಘ ವತಿಯಿಂದ ಜರುಗಿದ ಮಹರ್ಷಿ ವಾಲ್ಮೀಕಿ ಹಾಗೂ ವೀರ ಮದಕರಿ ನಾಯಕ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದ ಅವರು, 'ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅವರ ಸಂವಿಧಾನ ಭಾರತೀಯರ ಬದುಕಿನಲ್ಲಿ ದೊಡ್ಡ ಕ್ರಾಂತಿಯನ್ನೇ ಮಾಡಿವೆ' ಎಂದರು.

ಯಡಿಯೂರಪ್ಪನವರು ತಮ್ಮ ಅಧಿಕಾರವಧಿಯಲ್ಲಿ ಸರ್ಕಾರ ಮಟ್ಟದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಗೆ ಚಾಲನೆ ನೀಡಿದ್ದರು. ನಾನು ಸಚಿವನಾದ ವೇಳೆ ಎಸ್‌ಟಿ ಸಮುದಾಯ ಮೀಸಲಾತಿಯನ್ನು ಶೇ.7ಕ್ಕೆ ಹೆಚ್ಚಿಸಿದ್ದೇನೆ. ಇದಕ್ಕೆ


☛ ಉದಯವಾಹಿನಿ ಚಿತ್ರ

ರಾಜನಹಳ್ಳಿ ವಾಲ್ಮೀಕಿ ಪೀಠದ ಪ್ರಸನ್ನಾನಂದಪುರಿ ಸ್ವಾಮೀಜಿ ಅವರ ಬೆಂಬಲವಿತ್ತು. ರಾಜ್ಯ ಸರ್ಕಾರ ವಾಲ್ಮೀಕಿ ನಿಗಮದ ರೂ.187 ಕೋಟಿ ಹಣದಲ್ಲಿ ಭ್ರಷ್ಟಾಚಾರ ನಡೆಸಿದೆ ಎಂದು ಆರೋಪಿಸಿದರು. ವಿಧಾನಪರಿಷತ್ ಸದಸ್ಯೆ ಹೇಮಲತಾ ನಾಯಕ ಮಾತನಾಡಿ, ಸಮಾಜದಲ್ಲಿ ಇನ್ನೂ ಬಾಲ್ಯ ವಿವಾಹ ನಡೆಯುತ್ತಿದ್ದು, ಇದಕ್ಕೆ ಶಿಕ್ಷಣದ ಕೊರತೆಯೇ ಪ್ರಮುಖ ಕಾರಣ. ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಸಮಾಜಕ್ಕೆ ಉಪಯೋಗ ಆಗುತ್ತಿಲ್ಲ. ರಾಜ್ಯ ಸರ್ಕಾರ ಸತೀಶ ಜಾರಕಿಹೊಳಿ ಅವರನ್ನು ಮುಖ್ಯಮಂತ್ರಿ ಮಾಡಿದರೆ ನಮ್ಮ ಸಮಾಜಕ್ಕೆ ಖುಷಿ ಆಗುತ್ತದೆ' ಎಂದು ತಿಳಿಸಿದರು.

## ಪ್ಲಾಸ್ಟಿಕ್ ಮುಕ್ತ ಸಮಾಜಕ್ಕಾಗಿ 'ಸಾಗರಮಿತ್ರ'

• ಉದಯವಾಹಿನಿ ದಾವಣಗೆರೆ

ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬ ಗಾದೆಯಂತೆ ವಿದ್ಯಾರ್ಥಿಗಳಿಗೆ ಆರಂಭದಲ್ಲೇ ಪ್ಲಾಸ್ಟಿಕ್ ಬಗ್ಗೆ ಜಾಗೃತಿ ಮೂಡಿಸಲು ಜಿಲ್ಲಾಡಳಿತ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಮುಂದಾಗಿದೆ.

ಪ್ಲಾಸ್ಟಿಕ್ ಬಳಸದಂತೆ ಜಾಗೃತಿ ಮೂಡಿಸುವ ಜೊತೆಗೆ ಬಳಸಿದ ಪ್ಲಾಸ್ಟಿಕ್ ಅನ್ನು ಸೂಕ್ತವಾದ ರೀತಿಯಲ್ಲಿ ವಿಲೇವಾರಿ ಮಾಡುವ ಬಗ್ಗೆ ಜಿಲ್ಲೆಯ ಎಲ್ಲಾ ಪ್ರೌಢಶಾಲೆಗಳಲ್ಲಿ ಸಾಗರಮಿತ್ರ' ಪ್ಲಾಸ್ಟಿಕ್ ಮುಕ್ತ ಅಭಿಯಾನವನ್ನು ಕೈಗೊಳ್ಳಲಾಗಿದೆ.

ಪ್ಲಾಸ್ಟಿಕ್ ಮುಕ್ತ ಸಮಾಜ ನಿರ್ಮಾಣದ ಆಶಯದೊಂದಿಗೆ ಆರಂಭವಾಗಿರುವ ಈ ಅಭಿಯಾನದಡಿ ಜಿಲ್ಲೆಯ ಪ್ರೌಢಶಾಲೆಗಳಿಂದ ಇದುವರೆಗೂ 3 ಟನ್ ಗೂ ಅಧಿಕ ಪ್ಲಾಸ್ಟಿಕ್ ಅನ್ನು ಸಂಗ್ರಹಿಸಲಾಗಿದೆ. 8, 9 ಹಾಗೂ 10ನೇ ತರಗತಿ ವಿದ್ಯಾರ್ಥಿಗಳು ತಮ್ಮ ಮನೆಗಳಲ್ಲಿನ ಪ್ಲಾಸ್ಟಿಕ್ ಅನ್ನು ಶಾಲೆಗೆ ತಂದು ನೀಡುತ್ತಿದ್ದಾರೆ.

ಆಗಸ್ಟ್ 11ರಿಂದ ಜಿಲ್ಲೆಯ ಎಲ್ಲಾ (512)


☛ ಉದಯವಾಹಿನಿ ಚಿತ್ರ

ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರೌಢಶಾಲೆಗಳಲ್ಲಿ ಈ ಅಭಿಯಾನವನ್ನು ಆರಂಭಿಸಲಾಗಿದೆ. ಒಟ್ಟು 75,000 ವಿದ್ಯಾರ್ಥಿಗಳು ಈ ಅಭಿಯಾನದ ಭಾಗವಾಗಿದ್ದಾರೆ. ಕೆಲ ಶಾಲೆಗಳಲ್ಲಿ ವಾರದಲ್ಲಿ ಎರಡು ದಿನ, ಇನ್ನೂ ಕೆಲವು ಶಾಲೆಗಳಲ್ಲಿ ವಾರದಲ್ಲಿ 1 ದಿನ ವಿದ್ಯಾರ್ಥಿಗಳು ಮನೆಯಲ್ಲಿನ ಸಾಬೂನಿನ ಕವರ್, ಚಾಕ್ಲೇಟ್ ಕವರ್, ತರಕಾರಿ ತರುವ ಕವರ್, ಬಾಟಲಿ ಸೇರಿದಂತೆ ಇನ್ನಿತರ ಪ್ಲಾಸ್ಟಿಕ್ ಅನ್ನು ಶಾಲೆಗೆ ತಂದು ನೀಡುವುದು

**ಪ್ಲಾಸ್ಟಿಕ್ ಮುಕ್ತ ಅಭಿಯಾನ**

ಈ ಅಭಿಯಾನದ ಭಾಗವಾಗಿದೆ. ಶಾಲೆಗಳಲ್ಲಿ ಸಂಗ್ರಹವಾದ ಪ್ಲಾಸ್ಟಿಕ್ ಅನ್ನು ಮಹಾನಗರ ಪಾಲಿಕೆಯ ಸ್ವಚ್ಛತಾ ಸಿಬ್ಬಂದಿ, ಗ್ರಾಮೀಣ ಭಾಗಗಳಲ್ಲಿ ಪಂಚಾಯಿತಿ ಸ್ವಚ್ಛತಾ ಕಾರ್ಮಿಕರು ಕಸದ ಗಾಡಿಗಳ ಮೂಲಕ ಸಂಗ್ರಹಿಸಿ, ವಿಲೇವಾರಿ ಮಾಡುತ್ತಾರೆ.

**ಪ್ರೇರಣೆ:** ಮಹಾರಾಷ್ಟ್ರದ ಪುಣೆಯಲ್ಲಿನ ಸಾಗರಮಿತ್ರ ಸಂಸ್ಥೆಯು ಪ್ಲಾಸ್ಟಿಕ್ ನಿರ್ಮೂಲನೆಯಲ್ಲಿ ಬಹುದೊಡ್ಡ ಯಶಸ್ಸು ಕಂಡಿದೆ.

2011ರಿಂದಲೇ ಪ್ಲಾಸ್ಟಿಕ್ ಮುಕ್ತ ಅಭಿಯಾನ ಆರಂಭಿಸಿರುವ ಸಂಸ್ಥೆಯು ಇದುವರೆಗೂ 1,000 ಟನ್‌ಗೂ ಅಧಿಕ ಪ್ಲಾಸ್ಟಿಕ್ ಅನ್ನು 300ಕ್ಕೂ ಅಧಿಕ ಶಾಲೆಗಳ ವಿದ್ಯಾರ್ಥಿಗಳಿಂದ ಸಂಗ್ರಹಿಸಿದೆ. ಇದರಿಂದ ಪ್ರೇರಿತರಾಗಿರುವ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅವರು ಜಿಲ್ಲೆಯಲ್ಲೂ ಈ ಅಭಿಯಾನವನ್ನು ಆರಂಭಿಸಿದ್ದಾರೆ.

## ಕೆರೆ ಏರಿ ರಸ್ತೆ ಗುಂಡಿಮಯ: ಜ.ಕರ್ನಾಟಕ ಸಂಘಟನೆಯಿಂದ ರಸ್ತೆ ತಡೆ


☛ ಉದಯವಾಹಿನಿ ಚಿತ್ರ

• ಉದಯವಾಹಿನಿ ಬೇಲೂರು

ತಾಲ್ಲೂಕಿನ ಗೆಂಡೇಹಳ್ಳಿ ಭಾಗದ ವಿವಿಧ ಗ್ರಾಮಗಳಿಗೆ ತೆರಳುವ ಪಟ್ಟಣ ಸಮೀಪದ ಕಳಸಿನ ಕೆರೆ ಏರಿ ರಸ್ತೆ ಗುಂಡಿ ಬಿದ್ದು ವಾಹನಗಳು ಓಡಾಡಲು ಪರದಾಡುವಂತಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ರಸ್ತೆ ದುರಸ್ತಿ ಮಾಡುವಂತೆ ಒತ್ತಾಯಿಸಿ ತಾಲ್ಲೂಕು ಜಯ ಕರ್ನಾಟಕ ಸಂಘಟನೆ ಪದಾಧಿಕಾರಿಗಳು ಕಳಸಿನ ಕೆರೆ ಏರಿ ಮೇಲೆ ರಸ್ತೆ ತಡೆದು ಪ್ರತಿಭಟಿಸಿದರು.

ಜಯ ಕರ್ನಾಟಕ ಸಂಘಟನೆ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಕೆ. ಆರ್. ಸೋಮೇಶ್ ಮಾತನಾಡಿ, ಪ್ರವಾಸಿ ತಾಣ ಬೇಲೂರು ದೇಗುಲ ನೋಡಿದವರು, ಕಳಸ, ಹೊರನಾಡು, ಶೃಂಗೇರಿ ಹಾಗೂ ಇತರೆ ಭಾಗಗಳಿಗೆ ಪಟ್ಟಣದಿಂದ ಅಂಬೇಡ್ಕರ್ ವೃತ್ತದ ಮೂಲಕ ಕಳಸಿನ ಕೆರೆ ಏರಿ ಮೇಲೆಯೇ ತೆರಳಬೇಕು. ಆದರೆ ಕೆರೆ ಏರಿ ರಸ್ತೆ ಸಂಪೂರ್ಣ ಗುಂಡಿ ಬಿದ್ದು ಹಾಳಾಗಿದ್ದು, ಏಕೆ ಅಧಿಕಾರಿಗಳು ಕ್ರಮ ಕೈಗೊಳ್ಳುತ್ತಿಲ್ಲ ಎಂದು ಪ್ರಶ್ನಿಸಿದರು.


ಜಯ ಕರ್ನಾಟಕ ಸಂಘಟನೆ ತಾಲ್ಲೂಕು ಅಧ್ಯಕ್ಷ ಎಸ್.ಎಂ. ರಾಜು ಮಾತನಾಡಿ, ಮೂಡಿಗೆರೆ-ಗೆಂಡೇಹಳ್ಳಿಗೆ ತೆರಳುವ ಕಳಸಿನ ಕೆರೆ ಏರಿ ಮೇಲಿನ ರಸ್ತೆ ಹೆಜ್ಜೆ ಹೆಜ್ಜೆಗೂ ಗುಂಡಿ ಬಿದ್ದಿದೆ. ಇದರಿಂದ ವಾಹನಗಳು ಓಡಾಡದಂತಾಗಿದೆ. ಈ ರಸ್ತೆಯಲ್ಲಿ ಬೈಕ್ ಸವಾರರು ಬಿದ್ದು, ಗಾಯಗೊಂಡಿರುವ ಘಟನೆಗಳು ಸಾಕಷ್ಟು ನಡೆದಿವೆ. ಈ ರಸ್ತೆ ಅಭಿವೃದ್ಧಿಗೆ ಈಗಾಗಲೇ ಶಾಸಕರು ಅನುದಾನ ತಂದು ಟೆಂಡರ್ ಪ್ರಕ್ರಿಯೆ ಮುಗಿಸಿದ್ದರೂ, ಅಧಿಕಾರಿಗಳ ಮತ್ತು ಗುತ್ತಿಗೆದಾರನ ನಿರ್ಲಕ್ಷ್ಯದಿಂದ ಕೆಲಸವಾಗುತ್ತಿಲ್ಲ. ತಕ್ಷಣವೇ ರಸ್ತೆ ನಿರ್ಮಿಸಲು ಅಧಿಕಾರಿಗಳು, ಗುತ್ತಿಗೆದಾರರು ಮುಂದಾಗಬೇಕು. ಇಲ್ಲದಿದ್ದಲ್ಲಿ ಸಂಘಟನೆಯಿಂದ ಕಚೇರಿಗೆ ಮುತ್ತಿಗೆ ಹಾಕಬೇಕಾಗುತ್ತದೆ ಎಂದು ಎಚ್ಚರಿಸಿದರು.

## ನಶಿಸುತ್ತಿದೆ ಪ್ರೀತಿ, ಬಾಂಧವ್ಯ: ಮಾದಾರ ಚನ್ನಯ್ಯ ಸ್ವಾಮೀಜಿ

• ಉದಯವಾಹಿನಿ ಹೊನ್ನಾಳಿ

ಆಧುನಿಕ ಜಗತ್ತಿನಲ್ಲಿ ಸುಖಭೋಗಗಳಿಗೆ ಆದ್ಯತೆ ಹೆಚ್ಚಿದ್ದರಿಂದ ಪ್ರೀತಿ, ಬಾಂಧವ್ಯ, ಸಾಮರಸ್ಯಗಳು ನಶಿಸಿ ಹೋಗುತ್ತಿವೆ' ಎಂದು ಚಿತ್ರದುರ್ಗದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಬೇಸರ ವ್ಯಕ್ತಪಡಿಸಿದರು. ಎಚ್. ಕಡದಕಟ್ಟೆಯಲ್ಲಿ ಜೀರ್ಣೋದ್ಧಾರಗೊಂಡ ಶ್ರೀ ಧರಿಲಿಂಗೇಶ್ವರ ದೇವಾಲಯ ಪ್ರವೇಶೋತ್ಸವ, ಶಿಲಾಮೂರ್ತಿ ಪ್ರತಿಷ್ಠಾಪನೆ, ಕಳಸಾರೋಹಣ ಅಂಗವಾಗಿ ನಡೆದ ಧರ್ಮಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ನಮ್ಮ ಧರ್ಮ ಭದ್ರಪಡಿಸಿಕೊಂಡು ಇತರೆ ಧರ್ಮಗಳನ್ನು ಗೌರವಿಸಬೇಕು. ಬಸವಣ್ಣ ಹೇಳಿದಂತೆ ನಾವು ಮೊದಲು ಕಾಯಕ ಪ್ರಧಾನ ಸಮಾಜ. ಸಮಾನತೆಯ ಹಾಗೂ ಸ್ವಾಸ್ಥ್ಯ ಸಮಾಜವನ್ನು ನಿರ್ಮಿಸಿಕೊಂಡು ಬಾಳಬೇಕು' ಎಂದು ಹೇಳಿದರು.

ಹೆಗಲ ಮೇಲೆ ಹೊತ್ತುಕೊಂಡು ಹೋಗಿ ಶಾಲೆಗೆ ಬಿಟ್ಟು ಬಂದಿದ್ದ ಮಕ್ಕಳೂ ದೇಶದೊಳಗೆ ಈಗ ಉದ್ಯೋಗ ಪಡೆದು ತಂದೆ-ತಾಯಿಗಳನ್ನು ಸಾಕುತ್ತಿದ್ದಾರೆ. ರೆಸಿಡೆನ್ಸಿ ಸ್ಕೂಲ್‌ಗಳಲ್ಲಿ ಬಿಟ್ಟು ಓದಿಸಿದ ಮಕ್ಕಳು, ವಿದೇಶದಲ್ಲಿ ಉದ್ಯೋಗ ಪಡೆದು ತಂದೆ ತಾಯಿಯನ್ನು ವೃದ್ಧಾಶ್ರಮಕ್ಕೆ ಬಿಟ್ಟು ಫೋನ್ ಪೇ ಮಾಡುವ ಮೂಲಕ ದೂರ ಉಳಿಯುತ್ತಿದ್ದಾರೆ' ಎಂದು


☛ ಉದಯವಾಹಿನಿ ಚಿತ್ರ

**ಗ್ರಾಮೀಣ ಜನತೆ ದೇವಾಲಯ, ಮಠಗಳನ್ನು ನಂಬಿಕೊಂಡು ಪ್ರಾಚೀನ ಜೀವನಶೈಲಿಯನ್ನು ಅಳವಡಿಸಿಕೊಂಡಿರುವುದರಿಂದ ಅವರಲ್ಲಿ ಧಾರ್ಮಿಕ ಶ್ರೀಮಂತಿಕೆ ಇದೆ. -ಶಾಂತರಾಜ್ ಪಾಟೀಲ್**

ವಾಸ್ತವವನ್ನು ತಿಳಿಸಿ ಹೇಳಿದರು.

ಶಾಸಕ ಡಿ.ಜಿ.ಶಾಂತನಗೌಡ ಮಾತನಾಡಿ, ಎಚ್. ಕಡದಕಟ್ಟೆ ಗ್ರಾಮ ಹೊನ್ನಾಳಿಗೆ ಹೊಂದಿಕೊಂಡಿದ್ದು ನಗರಸಭೆಯಾಗಿ ಮೇಲ್ದರ್ಜೆಗೇರುವ ಹೊನ್ನಾಳಿಗೆ ಸೇರ್ಪಡೆಯಾಗುವ ದಿನಗಳು ದೂರವಿಲ್ಲ. ದೇವಸ್ಥಾನ ಮತ್ತು ಸಮುದಾಯ ಭವನಗಳಿಗೆ ಅಂದಾಜು ರೂ. 10 ಕೋಟಿಯಷ್ಟು ಅನುದಾನ ನೀಡಿದ್ದೇನೆ ಎಂದು ಹೇಳಿದರು.

## ಸೌಲಭ್ಯ ಒದಗಿಸದ ಅಧಿಕಾರಿಗಳಿಗೆ ಚಾಟಿ

• ಉದಯವಾಹಿನಿ ಕೊಪ್ಪಳ

ಜಿಲ್ಲಾಕೇಂದ್ರದ ಕೃಷಿ ಉತ್ಪನ್ನ ಮಾರುಕಟ್ಟೆ (ಎಪಿಎಂಸಿ)ಯಲ್ಲಿ ಮೂಲ ಸೌಕರ್ಯಗಳನ್ನು ಒದಗಿಸದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ ಅವರು ನಡೆದ ಸಭೆಯಲ್ಲಿ ಚಾಟಿ ಬೀಸಿದ್ದು, ತ್ವರಿತವಾಗಿ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ತಾಕೀತು ಮಾಡಿದ್ದಾರೆ. ಕೆಲ ದಿನಗಳಲ್ಲಿ ಮತ್ತೊಂದು ಪರಿಶೀಲನಾ ಸಭೆ ನಡೆಸಲಿದ್ದು ಅಷ್ಟರಲ್ಲಿ ಸವಲತ್ತು ಕಲ್ಪಿಸದಿದ್ದರೆ ಕ್ರಮ ವಹಿಸುವುದಾಗಿಯೂ ಎಚ್ಚರಿಕೆ ನೀಡಿದ್ದಾರೆ.

ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಅವರು ಇತ್ತೀಚೆಗೆ ಜಿಲ್ಲೆಗೆ ಭೇಟಿ ನೀಡಿದಾಗ ಇಲ್ಲಿನ ಗಂಜ್ ವೃತ್ತ ಮತ್ತು ಬೆಳವಿನಾಳ ಬಳಿ ಇರುವ ತರಕಾರಿ ಎಪಿಎಂಸಿ ಮಾರುಕಟ್ಟೆಗೆ ಭೇಟಿ ನೀಡಿದಾಗ ರೈತರು ಸೌಲಭ್ಯಗಳ ಕೊರತೆ ಸಮಸ್ಯೆಯನ್ನು ಹಂಚಿಕೊಂಡಿದ್ದರು. ಇದನ್ನು ಗಂಭೀರವಾಗಿ ಪರಿಗಣಿಸುವಂತೆಯೂ ಅವರು ಜಿಲ್ಲಾಧಿಕಾರಿಗೆ ಸೂಚಿಸಿದ್ದರು. ಈ ಎಲ್ಲಾ ಬೆಳವಣಿಗೆಗಳ


☛ ಉದಯವಾಹಿನಿ ಚಿತ್ರ

ಬೆನ್ನಲ್ಲೇ ಮೊದಲು ಎಪಿಎಂಸಿ ಹಾಗೂ ಇತರೆ ಇಲಾಖೆ ಅಧಿಕಾರಿಗಳ ಜೊತೆ ಸಭೆ ನಡೆಸಿ ವಾಹನಗಳ ನಿಲುಗಡೆ, ಬೆಳಕು, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಇತರೆ ಮೂಲ ಸೌಕರ್ಯಗಳನ್ನು ಒದಗಿಸಬೇಕು.

ಎಪಿಎಂಸಿಯಲ್ಲಿ ಸರಿಯಾದ ವ್ಯವಸ್ಥೆ ಇಲ್ಲದಿದ್ದರೆ ಹಳ್ಳಿಯಿಂದ ಬರುವ ರೈತರಿಗೆ ತೊಂದರೆಯಾಗುತ್ತದೆ. ಇಲ್ಲಿಗೆ ಬರುವ ರೈತರಿಗೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಸಂಬಂಧಿಸಿದ ಅಧಿಕಾರಿಗಳ

**ಜಾನುವಾರುಗಳ ಮಾರುಕಟ್ಟೆಯ ಸಮಸ್ಯೆಗಳು ಏನಾದರೂ ಇವೆಯಾ ಎಂದು ಪಶು ಅಧಿಕಾರಿಗಳನ್ನು ಕೇಳಿದಾಗ ಅವರು ಯಾವುದೇ ಸಮಸ್ಯೆಗಳಿಲ್ಲ ಎಂದು ಜಿಲ್ಲಾಧಿಕಾರಿಗೆ ಮಾಹಿತಿ ನೀಡಿದರು. ತ್ಯಾಜ್ಯ ವಿಲೇವಾರಿ ನಿರ್ವಹಣೆ ಸರಿಯಾಗಿಲ್ಲ. ದಾವಣಗೆರೆ ಜಿಲ್ಲೆಯಲ್ಲಿ ಇದರ ನಿರ್ವಹಣೆ ಚೆನ್ನಾಗಿದ್ದು ಅದರಂತೆಯೇ ನಮ್ಮಲ್ಲಿಯೂ ಆಗಬೇಕು -ಡಾ. ಸುರೇಶ ಇಟ್ನಾಳ**

ಮೇಲಿದೆ ಎಂದು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಸಿದ್ದೇಶ್ವರ, ವೀರಭದ್ರಯ್ಯ ಹಿರೇಮಠ, ಸುಧಾ ಗರಗ, ಕೃಷಿ ಉತ್ಪನ್ನ ಮಾರುಕಟ್ಟೆ ಕೊಪ್ಪಳ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ ಹಿರೇಮಠ, ಮಾರುತಿ ಪಾಲ್ಗೊಂಡಿದ್ದರು.

## ಕಾಲುವೆ ನೀರಿಗಾಗಿ ಕಂಪ್ಲಿ ಬಂದ್: ರೈತರ ಪ್ರತಿಭಟನೆ

• ಉದಯವಾಹಿನಿ ಕಂಪ್ಲಿ

ತುಂಗಭದ್ರಾ, ಬಲದಂಡೆ ಕೆಳಮಟ್ಟದ ಕಾಲುವೆಗೆ 2ನೇ ಬೆಳೆ ಬೆಳೆಯಲು ನೀರು ಹರಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳ ನೇತೃತ್ವದಲ್ಲಿ ಪಟ್ಟಣ ಬಂದ್ ನಡೆಯಿತು.

ಸಾಂಗತ್ರಯ ಸಂಸ್ಕೃತ ಪಾಠ ಶಾಲೆಯಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆ ಪ್ರಮುಖ ರಸ್ತೆ ಮೂಲಕ ಅಂಬೇಡ್ಕರ್ ವೃತ್ತದಲ್ಲಿ ಸಮಾವೇಶಗೊಂಡಿತು. ಕೆಲ ಹೊತ್ತು ಸಂಚಾರ ವ್ಯತ್ಯಯವಾಗಿತ್ತು. ಮುಖ್ಯಮಂತ್ರಿಗೆ ಬರೆದ ಮನವಿಯನ್ನು ತಹಶೀಲ್ದಾರ್ ಜೂಗಲ ಮಂಜುನಾಯಕ ಅವರಿಗೆ ರೈತರು ಸಲ್ಲಿಸಿದರು.

ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ವಿ. ಗೌಡ ಮಾತನಾಡಿ, ಜಲಾಶಯದಲ್ಲಿ 80ಟಿಎಂಸಿ ನೀರು ಸಂಗ್ರಹವಿದ್ದು, 2ನೆ ಬೆಳೆಗೆ ಕಾಲುವೆಗಳಿಗೆ ನೀರು ಪೂರೈಸುವ ಕುರಿತಂತೆ ಕೂಡಲೇ ಮುನಿರಾಬಾದಿನಲ್ಲಿ


☛ ಉದಯವಾಹಿನಿ ಚಿತ್ರ

ಐಸಿಸಿ ಸಭೆ ಕರೆಯಬೇಕು ಎಂದು ಆಗ್ರಹಿಸಿದರು.

ಮುಂಗಾರಿನಲ್ಲಿ ಅತಿ ಹೆಚ್ಚು ಮಳೆ ಸುರಿದ ಪರಿಣಾಮ ಭತ್ತಕ್ಕೆ ಹಾನಿಯಾಗಿದೆ. ಇಳುವರಿಯೂ ಕುಸಿದಿದೆ. ಈ ಕಾರಣದಿಂದ 2ನೇ ಬೆಳೆಗೆ ನೀರು ಅಗತ್ಯವಿದೆ. ಇಲ್ಲವಾದಲ್ಲಿ ರೈತ ಕುಟುಂಬಗಳು ವಲಸೆ ಹೋಗಬೇಕಾದ ಅನಿವಾರ್ಯತೆ ತಲೆದೋರುತ್ತದೆ ಎಂದು ಕೆಲ ರೈತರು ಅಳಲು ತೋಡಿಕೊಂಡರು.

ಹೋರಿ ಮಾಲೀಕರು, ರೈತರು, ಅಭಿಮಾನಿಗಳ ಸಭೆ: ಜಿಲ್ಲಾಧಿಕಾರಿ, ಪೊಲೀಸ್ ಎಸ್‌ಪಿ ಭೇಟಿಗೆ ತೀರ್ಮಾನ

# ಹೋರಿ ಹಬ್ಬ: ಸರ್ಕಾರದ ಷರತ್ತಿನ ವಿರುದ್ಧ ಹೋರಾಟದ ಎಚ್ಚರಿಕೆ

• ಉದಯವಾಹಿನಿ ಹಾವೇರಿ

ಜಿಲ್ಲೆಯಲ್ಲಿ ಹೋರಿ ಬೆದರಿಸುವ ಸ್ಪರ್ಧೆ ಆಯೋಜಿಸಲು 18 ಷರತ್ತು ವಿಧಿಸಿರುವುದನ್ನು ಖಂಡಿಸಿರುವ ಹೋರಿ ಮಾಲೀಕರು ಹಾಗೂ ಅಭಿಮಾನಿಗಳು, ಷರತ್ತು ಸಡಿಲಿಸದಿದ್ದರೆ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ನಗರದಲ್ಲಿ ಭಾನುವಾರ ಸಭೆ ನಡೆಸಿದ ಹೋರಿ ಮಾಲೀಕರು ಹಾಗೂ ಅಭಿಮಾನಿಗಳು, ಹೋರಿ ಬೆದರಿಸುವ ಸ್ಪರ್ಧೆ ಆಯೋಜನೆ ಹಾಗೂ ಕಾನೂನಿನ ಸಾಧಕ-ಬಾಧಕಗಳ ಬಗ್ಗೆ ಚರ್ಚಿಸಿದರು.

ದೀಪಾವಳಿ ಸಂದರ್ಭದಲ್ಲಿ ಏರ್ಪಡಿಸಿದ್ದ ಹೋರಿ ಬೆದರಿಸುವ ಆಚರಣೆ ಹಾಗೂ ಹೋರಿ ಮೆರವಣಿಗೆ ವೇಳೆ ಅವಘಡ ಸಂಭವಿಸಿ ನಾಲ್ವರು ಮೃತಪಟ್ಟಿದ್ದಾರೆ. ಇದರಿಂದ ಎಚ್ಚೆತ್ತುಕೊಂಡಿರುವ ಜಿಲ್ಲಾಡಳಿತ, ಹೋರಿ ಬೆದರಿಸುವ ಸ್ಪರ್ಧೆಗೆ 18 ಷರತ್ತುಗಳ ಅನ್ವಯ ಅನುಮತಿ ಕಡ್ಡಾಯಗೊಳಿಸಿದೆ.

ಹಬ್ಬದ ನಂತರ ಹಂತ ಹಂತವಾಗಿ ಹಲವು ಗ್ರಾಮಗಳಲ್ಲಿ ಹೋರಿ ಬೆದರಿಸುವ ಸ್ಪರ್ಧೆ ಆಯೋಜಿಸಲು ಹಲವರು ಸಿದ್ಧತೆ ಮಾಡಿಕೊಂಡಿದ್ದರು. ಜಿಲ್ಲಾಡಳಿತದ ನಿರ್ಧಾರದಿಂದಾಗಿ ಎಲ್ಲಾ ಸ್ಪರ್ಧೆಗಳು ರದ್ದಾಗಿವೆ. ಹೀಗಾಗಿ, ಸ್ಪರ್ಧೆಗಾಗಿ ಹೋರಿ ಸಾಕಿರುವ ಮಾಲೀಕರು ಹಾಗೂ ಅಭಿಮಾನಿಗಳು ಬೇಸರ ವ್ಯಕ್ತಪಡಿಸುತ್ತಿದ್ದಾರೆ. ಸ್ಪರ್ಧೆಗೆ ತಯಾರಿ ಮಾಡಿಕೊಂಡಿದ್ದ ಆಯೋಜಕರು ಸಹ ರಾಜ್ಯ


☛ ಉದಯವಾಹಿನಿ ಚಿತ್ರ

ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕುತ್ತಿದ್ದಾರೆ.

ಷರತ್ತು ಖಂಡಿಸಿ ಅಖಿಲ ಕರ್ನಾಟಕ ರೈತರ ಜನಪದ ಕ್ರೀಡೆ ಹೋರಿ ಹಬ್ಬ ಹೋರಾಟ ಸಮಿತಿ'ಯ ಪದಾಧಿಕಾರಿಗಳ ಸಮ್ಮುಖದಲ್ಲಿ ಹೋರಾಟ ರೂಪಿಸಲು ಸಿದ್ಧತೆ ನಡೆದಿದೆ. ಇದೇ ಕಾರಣಕ್ಕೆ ಭಾನುವಾರ ಸಭೆ ನಡೆಸಿ ಹೋರಿ ಮಾಲೀಕರು, ರೈತರು ಹಾಗೂ ಹೋರಿ ಅಭಿಮಾನಿಗಳ ಅಭಿಪ್ರಾಯ ಸಂಗ್ರಹಿಸಲಾಗಿದೆ.

ಗಣೇಶ ಹಬ್ಬದ ಸಂದರ್ಭದಲ್ಲಿ ಡಿ.ಜೆ. (ಡಿಸ್ಕ್ ಜಾಕಿ) ಬಳಕೆ ಮಾಡಲು ರಾಜ್ಯ ಸರ್ಕಾರ ನಿರ್ಬಂಧ ವಿಧಿಸಿತ್ತು. ಈಗ ದೀಪಾವಳಿ

### ಷರತ್ತು ಸಡಿಲಿಸಲು ಆಗ್ರಹ

**ರೈತರ ಗ್ರಾಮೀಣ ಜಾನಪದ ಕ್ರೀಡೆಯಾಗಿರುವ ಹೋರಿ ಹಬ್ಬವನ್ನು ಪ್ರತಿ ವರ್ಷವೂ ಆಚರಿಸಿಕೊಂಡು ಬರುತ್ತಿದ್ದೇವೆ. ಆದರೆ, ಈ ವರ್ಷ ಹಬ್ಬಕ್ಕೆ ಸರ್ಕಾರ ನಿರ್ಬಂಧ ವಿಧಿಸಿರುವುದು ಸರಿಯಲ್ಲ. ಷರತ್ತುಗಳನ್ನು ಸಡಿಲಿಸಿ ಹಬ್ಬ ಆಚರಣೆಗೆ ಅನುಕೂಲ ಕಲ್ಪಿಸಬೇಕು' ಎಂದು ಮಾಲೀಕರು ಹಾಗೂ ಅಭಿಮಾನಿಗಳು ಸಭೆ ಮೂಲಕ ಆಗ್ರಹಿಸಿದರು.**

**ಸ್ಪರ್ಧೆ ಆಯೋಜಿಸಲು ಹಲವರು ಸಿದ್ಧತೆ**

ಹಬ್ಬದಂದು ಹೋರಿ ಹಬ್ಬಕ್ಕೆ ನಿರ್ಬಂಧ ವಿಧಿಸಿದೆ. ಇದು ಗ್ರಾಮೀಣ ಕ್ರೀಡೆಗಳ ಮೇಲೆ ಸರ್ಕಾರ ಮಾಡುತ್ತಿರುವ ದಬ್ಬಾಳಿಕೆ. ಇದರ ವಿರುದ್ಧ ಸಂಘಟಿತ ಹೋರಾಟ ರೂಪಿಸಲಾಗುವುದು' ಎಂದು ತಿಳಿಸಿದರು.

**ಹೋರಿಗಳ ಸಮೇತ ಪ್ರತಿಭಟನೆ:** ಹೋರಿ ಹಬ್ಬದ ಷರತ್ತುಗಳನ್ನು ಕೈಬಿಡುವಂತೆ ಆಗ್ರಹಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಎಸ್‌ಪಿಗೆ ಸದ್ಯದಲ್ಲೇ ಮನವಿ ಸಲ್ಲಿಸಲಾಗುವುದು' ಎಂದು ಹೋರಿ ಮಾಲೀಕರು ಮಾಹಿತಿ ನೀಡಿದರು. ಹೋರಿ ಹಬ್ಬಕ್ಕೆ ಅನುಮತಿ ನೀಡಿ, ಹಬ್ಬವನ್ನು ಸುಗಮವಾಗಿ ನಡೆಸಿಕೊಂಡು ಹೋಗಲು ಅವಕಾಶ ಕಲ್ಪಿಸುವಂತೆ ಜಿಲ್ಲಾಧಿಕಾರಿಯವರನ್ನು ಕೋರಲಾಗುವುದು. ಅದಕ್ಕೆ ಅವರು ಸ್ಪಂದಿಸದಿದ್ದರೆ, ಹೋರಿಗಳ ಸಮೇತ ಜಿಲ್ಲಾ ಕೇಂದ್ರದಲ್ಲಿ ದೊಡ್ಡಮಟ್ಟದ ಮೆರವಣಿಗೆ ಮಾಡಿ ಪ್ರತಿಭಟನೆ ನಡೆಸಲಿದ್ದೇವೆ. ಜಿಲ್ಲಾಧಿಕಾರಿ ಕಚೇರಿ ಎದುರು ಹೋರಿಗಳನ್ನು ಕಟ್ಟಿ ಹಾಕುತ್ತೇವೆ. ಹೋರಿ ಅಭಿಮಾನಿಗಳು ಸಹ ಹೋರಾಟದಲ್ಲಿ ಭಾಗಿಯಾಗಲಿದ್ದಾರೆ' ಎಂದು ಹೇಳಿದರು.

**ಷರತ್ತು ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಮೊಕದ್ದಮೆ:** 'ಹೋರಿ ಹಬ್ಬವೆಂಬುದು ಹಾವೇರಿ ಜಿಲ್ಲೆಯ ಗ್ರಾಮೀಣ ಜನರ ಜನಪದ ಕ್ರೀಡೆ. ಈ ಹಬ್ಬ ಜನರ ಧಾರ್ಮಿಕ ಭಾವನೆಗೆ ಸಂಬಂಧಪಟ್ಟ ಆಚರಣೆ. ಇಂಥ ಹಬ್ಬದ ಅನುಮತಿಗಾಗಿ 18 ಷರತ್ತು ವಿಧಿಸಲಾಗಿದೆ. ಅಗತ್ಯಬಿದ್ದರೆ ಈ ಷರತ್ತುಗಳನ್ನು ಹೈಕೋರ್ಟ್‌ನಲ್ಲಿ ಪ್ರಶ್ನಿಸಲಾಗುವುದು' ಎಂದು ಹೈಕೋರ್ಟ್ ವಕೀಲ ಸಂದೀಪ ಪಾಟೀಲ ತಿಳಿಸಿದರು.

ಹೋರಿ ಮಾಲೀಕರು ಹಾಗೂ ಅಭಿಮಾನಿಗಳ ಸಭೆ ಬಗ್ಗೆ ಜೊತೆ ಮಾತನಾಡಿದ ಅವರು 18 ಷರತ್ತುಗಳಲ್ಲಿ ಯಾವ ಷರತ್ತು ಪಾಲಿಸಲು ಸಾಧ್ಯ? ಯಾವ ಷರತ್ತು ಪಾಲಿಸಲು ಆಗುವುದಿಲ್ಲ? ಎಂಬುದರ ಬಗ್ಗೆ ಹೊಸ ಪಟ್ಟಿ ಸಿದ್ಧಪಡಿಸಿ ಜಿಲ್ಲಾಧಿಕಾರಿಗೆ ಸಲ್ಲಿಸಲಾಗುವುದು ಎಂದರು.



## ಮಿನಿ ನ್ಯೂಸ್

### ಆರ್ಥಿಕ ಸಹಕಾರ ನೀಡಲು ಮನವಿ

• ಉದಯವಾಹಿನಿ ಕಲಬುರಗಿ

ಬಂಜಾರ ಭೋವಿ ಕೊರಚ ಮತ್ತು ಕೊರಮ ಸಮಾಜಗಳ ಕ್ಷೇಮಾಭಿವೃದ್ಧಿ ಸಂಘಗ ವತಿಯಿಂದ ಬಂಜಾರ ಭೋವಿ ಕೊರಚ ಮತ್ತು ಕೊರಮ ಸಮುದಾಯಗಳಿಗೆ ಒಳ ಮೀಸಲಾತಿಯಲ್ಲಿ 6% ಕ್ಕಿಂತಲೂ ಹೆಚ್ಚಿನ ಮೀಸಲಾತಿ ನೀಡಬೇಕು ಎಂದು ಆಗ್ರಹಿಸಿ ಕಾನೂನು ಹೋರಾಟ ಮಾಡಲಾಗುತ್ತಿದ್ದು, ಸಮುದಾಯದ ಜನರು ನಮ್ಮ ಸಂಘಟನೆಗೆ ಆರ್ಥಿಕವಾಗಿ ಬೆಂಬಲ ಮತ್ತು ಸಹಕಾರ ನೀಡಬೇಕೆಂದು ಸಂಘದ ಮುಖಂಡ ಬೇಮಸಿಂಗ್ ರಾಠೋಡ್ ಮನವಿ ಮಾಡಿದ್ದಾರೆ.

ನಗರದ ಬಂಜಾರಾ ಭವನದಲ್ಲಿ ಮಾತನಾಡಿದ ಅವರು ನಮ್ಮ ಸಂಘಟನೆ ವತಿಯಿಂದ ಅಕ್ಟೋಬರ್ 16 ರಂದು ಕರ್ನಾಟಕ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಲಾಗಿದ್ದು, ನ.3ರಂದು ವಿಚಾರಣೆ ನಡೆಸಿ, ನ.13ಕ್ಕೆ ವಿಚಾರಣೆ ಮುಂದೂಡಲಾಗಿದೆ. ಈ ಹೋರಾಟಕ್ಕೆ ಸಮುದಾಯದ ಎಲ್ಲಾ ಶಾಸಕರು, ಮಾಜಿ ಶಾಸಕರು ಹಾಗೂ ಮುಖಂಡರು ಸಹಕಾರ ನೀಡಬೇಕು. ನಮ್ಮ ಸಮುದಾಯಗಳಿಗೆ ಒಳ ಮೀಸಲಾತಿಯಲ್ಲಿ 5 % ದಿಂದ 6% ಹೆಚ್ಚಿಸಬೇಕು. ಮೀಸಲಾತಿ ದೊರೆಯುವವರೆಗೂ ಸರ್ಕಾರದ ವಿರುದ್ಧ ನಮ್ಮ ಹೋರಾಟ ಮುಂದೆವರೆಯಲಿದೆ. ಎಲ್ಲರೂ ನಮ್ಮಗೆ ಬೆಂಬಲ ನೀಡಬೇಕು ಎಂದು ಮನವಿ ಮಾಡಿದ್ದಾರೆ.

### ಭಾವನೆ ವಿನಿಮಯಕ್ಕೆ ಭಾಷೆ ಅಗತ್ಯ

• ಉದಯವಾಹಿನಿ ಮುಂಡರಗಿ

ಭಾವನೆಗಳ ವಿನಿಮಯ ಹಾಗೂ ಸಂವಹನಕ್ಕೆ ಭಾಷೆ ಅಗತ್ಯವಾಗಿದ್ದು, ಮಾತೃಭಾಷೆಯಲ್ಲಿ ಮಾತ್ರ ಭಾವನೆ ವ್ಯಕ್ತಪಡಿಸಲು ಸಾಧ್ಯ ಎಂದು ಕ್ಷೇತ ಶಿಕ್ಷಣಾಧಿಕಾರಿ ಗಂಗಾಧರ ಅಣ್ಣಿಗೇರಿ ಹೇಳಿದರು.

ಇಲ್ಲಿಯ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ ತಾಲ್ಲೂಕು ಶಾಲಾ ಮತ್ತು ಶಿಕ್ಷಣ ಇಲಾಖೆ ವತಿಯಿಂದ ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ಶುದ್ಧ ಕನ್ನಡದಲ್ಲಿ ಮಾತನಾಡುವ ಸ್ಪರ್ಧೆ ಉದ್ಘಾಟಿಸಿ ಅವರು ಮತನಾಡಿದರು.

ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದ್ದು, ದೈನಂದಿನ ವ್ಯವಹಾರಗಳಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಳಸುವ ಮೂಲಕ ಭಾಷಾ ಪ್ರೇಮ ಮೈಗೂಡಿಸಿಕೊಳ್ಳಬೇಕು. ಇಂತಹ ಸ್ಪರ್ಧೆಗಳು ಮಕ್ಕಳಲ್ಲಿ ಸೃಜನಶೀಲತೆ ಬೆಳೆಸುತ್ತದೆ' ಎಂದರು.

ವಿದ್ಯಾ ಸಮಿತಿಯ ಉಪಾಧ್ಯಕ್ಷ ಎಸ್.ವಿ.ಪಾಟೀಲ ಮಾತನಾಡಿದರು. ವಿದ್ಯಾ ಸಮಿತಿಯ ಗೌರವ ಕಾರ್ಯದರ್ಶಿ ವಿ. ಸೀತಾರಾಮರಾಜು ಕಾರ್ಯಕ್ರಮ ಉದ್ಘಾಟಿಸಿದರು. ಜಿಲ್ಲಾ ಕನ್ನಡ ಜಾಗೃತಿ ಸಮಿತಿಯ ನೂತನ ಸದಸ್ಯ ಮುತ್ತು ಹಾಳಕೇರಿ ಅವರನ್ನು ಸನ್ಮಾನಿಸಲಾಯಿತು. ಮುಖ್ಯ ಶಿಕ್ಷಕ ದೇವರಡ್ಡಿ ಇಮ್ರಾಪೂರ ಸ್ವಾಗತಿಸಿದರು. ಆಡಳಿತಾಧಿಕಾರಿ ಸಿ.ಎಸ್. ಅರಸನಾಳ ಪ್ರಾಸ್ತಾವಿಕ ಮಾತನಾಡಿದರು.

### ಬೈಕ್ ಅಡ್ಡಗಟ್ಟಿ ಚಿನ್ನದ ಸರ ಕಳವು

• ಉದಯವಾಹಿನಿ ಭಟ್ಕಳ

ಮುರುಡೇಶ್ವರದ ರಾಷ್ಟ್ರೀಯ ಹೆದ್ದಾರಿಯಲ್ಲಿ ರಾತ್ರಿ ಬೈಕ್ ಸವಾರರೊಬ್ಬರನ್ನು ಅಡ್ಡಗಟ್ಟಿ ಕುತ್ತಿಗೆಯಲ್ಲಿದ್ದ ಚಿನ್ನದ ಸರ ಕಳವು ಮಾಡಿರುವುದಾಗಿ ಮುರುಡೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮುರುಡೇಶ್ವರ ಗುಮ್ಮನಹಕ್ಕಲ ನಿವಾಸಿ ಅರುಣಕುಮಾರ ಭಾಸ್ಕರ ನಾಯ್ಕ ಸರ ಕಳೆದುಕೊಂಡವರು. ಬೈಕ್‌ಗೆ ಪೆಟ್ರೋಲ್ ತುಂಬಿಸಿಕೊಂಡು ಮನೆಗೆ ಬರುವಾಗ ಹೆದ್ದಾರಿಯಲ್ಲಿ 4 ಮಂದಿ ಅಡ್ಡಗಟ್ಟಿದರು. ಅವರೆಲ್ಲರೂ ಲಿಂಗತ್ವ ಅಲ್ಪಸಂಖ್ಯಾತರಾಗಿದ್ದರು ಎಂದು ಅವರು ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಿದ್ದಾರೆ.

ಹಣ ಕೇಳುವ ನೆಪದಲ್ಲಿ ಅಸಭ್ಯವಾಗಿ ವರ್ತಿಸಿ 15 ಗ್ರಾಂ ತೂಕದ ಚಿನ್ನದ ಸರ ಕಳವು ಮಾಡಲಾಗಿದೆ' ಎಂದು ಪೊಲೀಸರು ತಿಳಿಸಿದ್ದಾರೆ.

### ನೌಕರಿ ಆಮಿಷ: 8.70 ಲಕ್ಷ ವಂಚನೆ

• ಉದಯವಾಹಿನಿ ಯಲ್ಲಾಪುರ

ನೌಕರಿ ಕೊಡಿಸುತ್ತೇನೆ ಎಂದು ನಂಬಿಸಿ ವ್ಯಕ್ತಿಯೊಬ್ಬ ತಾಲ್ಲೂಕಿನ 7 ಜನರಿಗೆ ಮೋಸ ಮಾಡಿ 8.70 ಲಕ್ಷ ವಂಚಿಸಿದ್ದಾನೆ. ಈ ಕುರಿತು ಕಳಚೆಯ ಶ್ರೀನಾಥ ಶ್ರೀಕಾಂತ ಕಳಸ ಠಾಣೆಯಲ್ಲಿ ದೂರು ದಾಖಲಿಸಿದ್ದು, ರಾಯಚೂರು ಜಿಲ್ಲೆಯ ಸಿಂಧನೂರಿನ ಸುಕಾಲಪೇಟೆಯ ನಿವಾಸಿ ಕೆಂಚಪ್ಪ ಗ್ಯಾನಪ್ಪ ಹಂಚಿನಾಳ ಎಂಬಾತ ಜಲಸಂಪನ್ಮೂಲ ಇಲಾಖೆಯಲ್ಲಿ ನೌಕರಿ ಕೊಡಿಸುವುದಾಗಿ ನಂಬಿಸಿ, ಮಾನಮನೆ ಗೋಗದ್ದೆಯ ಗೌರೀಶ ಮೋಹನ ಮರಾಠಾ ಹಾಗೂ ತನ್ನಿಂದ ಒಟ್ಟು 23,85,000 ಕಳಚೆಯ ತಮ್ಮಣ್ಣ ಗೌಡ, ಅರಬೈಲು ಹೆಗ್ಗಾರಗದ್ದೆಯ ಗಜಾನನ ಈಶ್ವರ ಪಟಗಾರ, ಕಳಚೆಯ ಪ್ರಭಾಕರ ಶ್ವೇಶ್ವರ ಗೌಡ, ತಳಕೆಬೈಲಿನ ಶ್ವೇತಾ ಮರಾಠಿ, ವಜ್ರಳ್ಳಿಯ ರಾಮಚಂದ್ರ ರಾಧಾಕೃಷ್ಣ ಕೋಡ್ಕಣಿಕರ ಅವರಿಂದ ರೂ.4,85,000 ಪಡೆದಿದ್ದಾನೆ. ಹೀಗೆ 7 ಜನರಿಂದ ಒಟ್ಟು ರೂ. 8.70ಲಕ್ಷ ಪಡೆದು ಮೋಸ ಮಾಡಿದ್ದಾನೆ. ಆತನ ರುದ್ಧ ಸೂಕ್ತ ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದಾನೆ.

### ಈರುಳ್ಳಿ ದರ ಕುಸಿತ; ದಿಢೀರ್ ಪ್ರತಿಭಟನೆ

• ಉದಯವಾಹಿನಿ ಹುಬ್ಬಳ್ಳಿ

ಇಲ್ಲಿನ ಅಮರಗೋಳದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಸೋಮವಾರ ದಲ್ಲಾಳಿಗಳು ಈರುಳ್ಳಿ ದರವನ್ನು ಏಕಾಏಕಿ ಇಳಿಕೆ ಮಾಡಿದ್ದನ್ನು ಖಂಡಿಸಿ, ವಿವಿಧ ಜಿಲ್ಲೆಗಳಿಂದ ಬಂದ ರೈತರು ದಿಢೀರ್ ಪ್ರತಿಭಟನೆ ನಡೆಸಿದರು. ಸರ್ಕಾರ ಹಾಗೂ ದಲ್ಲಾಳಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಸೂಕ್ತ ದರ ನಿಗದಿಪಡಿಸಿ ಹರಾಜು ಕರೆಯಬೇಕೆಂದು ಒತ್ತಾಯಿಸಿದರು. ಬೆಳಿಗ್ಗೆ 10ರಿಂದ ಈರುಳ್ಳಿ ಹರಾಜು ಪ್ರಕ್ರಿಯೆ ಆರಂಭವಾಯಿತು. ಮಧ್ಯಾಹ್ನ 1ರ ವೇಳೆ ದಲ್ಲಾಳಿಗಳು ಏಕಾಏಕಿ ಕ್ವಿಂಟಲ್‌ಗೆ ರೂ.50 ನಿಗದಿಪಡಿಸಿ ಹರಾಜು ಕರೆಯಲು ಆರಂಭಿಸಿದರು. ಇದರಿಂದ ಆಕ್ರೋಶಗೊಂಡ ಬೆಳಗಾವಿ, ಗದಗ, ಹಾವೇರಿ, ವಿಜಯಪುರ ಜಿಲ್ಲೆಗಳಿಂದ ಬಂದಿದ್ದ ರೈತರು, ಇಷ್ಟು ಕಡಿಮೆ ದರಕ್ಕೆ ವಾಹನದ ಬಾಡಿಗೆ ಸಹ ನೀಡಲು ಸಾಧ್ಯವಿಲ್ಲ. ಮಾರುಕಟ್ಟೆಯಲ್ಲಿ ಒಂದು ಕೆ.ಜಿ. ಉಳ್ಳಾಗಡ್ಡಿಗೆ ರೂ.40 ರಿಂದ ರೂ.50 ಇದೆ. ಇಲ್ಲಿ, ಕ್ವಿಂಟಲ್‌ಗೆ ರೂ.50ಗೆ ಹರಾಜು ಮಾಡುತ್ತಿರುವುದು ಅನ್ಯಾಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಾಲ್ಕು ಐದು ತಿಂಗಳು ಕಷ್ಟಪಟ್ಟು, ಲಕ್ಷಾಂತರ ರೂಪಾಯಿ ಸಾಲ ಮಾಡಿ ಉಳ್ಳಾಗಡ್ಡಿ ಬೆಳೆಯುತ್ತೇವೆ. ಹುಬ್ಬಳ್ಳಿ ಎಪಿಎಂಸಿಯಲ್ಲಿ ಯೋಗ್ಯ ಬೆಲೆ ಸಿಗುತ್ತದೆ ಎಂದು ನೂರು, ಇನ್ನೂರು ಕಿ.ಮೀ ದೂರದಿಂದ ಬಾಡಿಗೆ ವಾಹನದಲ್ಲಿ ತರುತ್ತೇವೆ. ರೈತರಿಗಾಗುತ್ತಿರುವ ಅನ್ಯಾಯ ಸರ್ಕಾರಕ್ಕೆ ಗೊತ್ತಿದ್ದರೂ ಜಾಣಕುರುಡು ಪ್ರದರ್ಶಿಸುತ್ತಿದೆ. ಉತ್ತಮ ಗುಣಮಟ್ಟದ ಉಳ್ಳಾಗಡ್ಡಿ ಕ್ವಿಂಟಲ್‌ಗೆ ಕೇವಲ ರೂ.200ಕ್ಕೆ ಹರಾಜಾಗುತ್ತಿದೆ' ಎಂದು ಲೋಕಾಪುರದ ರೈತ ನಾರಾಯಣಗೌಡ ಪಾಟೀಲ ಅಸಮಾಧಾನ ವ್ಯಕ್ತಪಡಿಸಿದರು.


☛ ಉದಯವಾಹಿನಿ ಚಿತ್ರ

# ನಾವು ಮೊದಲು ಅಣ್ವಸ್ತ್ರ ಪರೀಕ್ಷೆ ನಡೆಸುವುದಿಲ್ಲ?; ಟ್ರಂಪ್ ಆರೋಪಕ್ಕೆ ಪಾಕ್ ಪ್ರತಿಕ್ರಿಯೆ



**ಇಸ್ಲಮಾಬಾದ್:** ಎಲ್ಲಡೆ ಶಸ್ತ್ರಾಸ್ತ್ರ, ಯುದ್ಧಗಳ ಸದ್ದು ಜೋರಾಗೇ ನಡೆಯುತ್ತಿದೆ. ಈ ನಡುವೆ ಅಮೆರಿಕ 30 ವರ್ಷಗಳ ಬಳಿಕ ಮತ್ತೆ ಪರಮಾಣು ಪರೀಕ್ಷೆ ನಡೆಸಲು ಸಿದ್ದವಾಗಿದ್ದು, ಇದರ ಕುರಿತು ಸಮರ್ಥಸಿಕೊಂಡು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಣ್ವಸ್ತ್ರ ಪರೀಕ್ಷೆಯನ್ನು ಈಗಾಗಲೇ ಹಲವು ದೇಶಗಳು ನಡೆಸುತ್ತಿವೆ, ಹಾಗಾಗಿ ನಾವು ಮಾಡುತ್ತಿದ್ದೇವೆ ಎಂದು ಹೇಳುವಾಗ ನಡೆಸುತ್ತಿದೆ ಎಂದು ಸ್ಫೋಟಕ ಹೇಳಿಕೆ ನೀಡಿದ್ದರು.


**ಪರಮಾಣು ಪರೀಕ್ಷೆ ನಡೆಸುವಲ್ಲಿ ನಾವು ಮೊದಲಿಗರಾಗುವುದಿಲ್ಲ**

ಅದಕ್ಕೆ ಈಗ ಪಾಕಿಸ್ತಾನ ಹಿರಿಯ ಅಧಿಕಾರಿ ಉತ್ತರಿಸಿದ್ದು, ಪಾಕಿಸ್ತಾನ ಪರಮಾಣು ಪರೀಕ್ಷೆ ನಡೆಸುವುದಿಲ್ಲ ಎಂದು ಹೇಳಿದ್ದಾರೆ. ಈ ಕುರಿತು ಸಿಬಿಎಸ್ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ ಪ್ರತಿಕ್ರಿಯಿಸಿರುವ ಅವರು ಪಾಕಿಸ್ತಾನ ಪರಮಾಣು ಪರೀಕ್ಷೆಗಳನ್ನು ನಡೆಸಿದ ಮೊದಲಿಗರಲ್ಲ ಮತ್ತು ಪರಮಾಣು ಪರೀಕ್ಷೆಗಳನ್ನು ಪುನರಾರಂಭಿಸುವ ಮೊದಲಿಗರೂ ಆಗುವುದಿಲ್ಲ ಎಂದು ಹೇಳಿದ್ದಾರೆ. ಇನ್ನು, ಸಿಬಿಎಸ್ ನ್ಯೂಸ್ 60 ಮಿನಿಟ್ಸ್‌ಗೆ ನೀಡಿದ ಸಂದರ್ಶನದಲ್ಲಿ ಟ್ರಂಪ್ ಮಾತನಾಡಿ ರಷ್ಯಾ, ಚೀನಾ, ಉತ್ತರ ಕೊರಿಯಾ ಮತ್ತು ಪಾಕಿಸ್ತಾನದಂತಹ ದೇಶಗಳು ಅಣ್ವಸ್ತ್ರ ಪರೀಕ್ಷೆಗಳನ್ನು ನಡೆಸುತ್ತಿವೆ. ಆದರೆ ಅಮೆರಿಕ ಪರಮಾಣು ಪರೀಕ್ಷೆ ನಡೆಸಿದರೆ ಮಾತ್ರ ವಿರೋಧ ವ್ಯಕ್ತವಾಗುತ್ತವೆ, ಎಲ್ಲರೂ ಭೂಗತವಾಗಿ ಪರಮಾಣು ಪರೀಕ್ಷೆ ನಡೆಸುತ್ತಲೇ ಇದ್ದಾರೆ, ಹಾಗಾಗಿ ಪರೀಕ್ಷೆ ನಡೆಸದ ಏಕೈಕ ದೇಶ ನಾನು ಆಗಲು ಬಯಸುವುದಿಲ್ಲ ಎಂದು ಹೇಳಿ ತಮ್ಮ ಅಣ್ವಸ್ತ್ರ ಪರೀಕ್ಷೆ ಯೋಜನೆಯ ಆದೇಶವನ್ನು ಸಮರ್ಥಿಸಿಕೊಂಡಿದ್ದರು.

**ಪ್ರಪಂಚದಲ್ಲಿ ಕೊನೆಯ ಅಣ್ವಸ್ತ್ರ ಪರೀಕ್ಷೆ ನಡೆದಿದ್ಯಾವಾಗ?:** ಉತ್ತರ ಕೊರಿಯಾ ಹೊತರುಪಡಿಸಿ ಪ್ರಪಂಚದಾದ್ಯಂತ ಯಾವ ದೇಶವು 90ರ ದಶಕದ ನಂತರ ಅಣ್ವಸ್ತ್ರ ಪರೀಕ್ಷೆ ನಡೆಸಿಲ್ಲ. 1996 ರಿಂದ ಅಮೆರಿಕ ಸಮಗ್ರ ಪರೀಕ್ಷಾ ನಿಷೇಧ ಒಪ್ಪಂದಕ್ಕೆ ಸಹಿ ಹಾಕಿದೆ, ಇದರ ಮೊದಲು ಕೊನೆ ಬಾರಿಗೆ 1992ರಲ್ಲಿ ಅಮೆರಿಕಾ ತನ್ನ ಕೊನೆಯ ಪರಮಾಣು ಸ್ಫೋಟ ನಡೆಸಿತ್ತು. ರಷ್ಯಾ ಹಾಗೂ ಚೀನಾ ಸಹ 1996ರ ನಂತರ ಯಾವುದೇ ಪರಮಾಣು ಪರೀಕ್ಷೆಗಳನ್ನು ನಡೆಸಿಲ್ಲ. ಇನ್ನು, ಪಾಕಿಸ್ತಾನ ಸಿಟಿಬಿಟಿ ಒಪ್ಪಂದಕ್ಕೆ ಸಹಿ ಹಾಕದಿದ್ದರೂ, 1998ರಲ್ಲಿ ಕೊನೆಯ ಪರಮಾಣು ಪರೀಕ್ಷೆ ನಡೆಸಿ, ನಾವೂ ಒಪ್ಪಂದಕ್ಕೆ ಸಹಿ ಹಾಕದಿದ್ದರೂ ಏಕಪಕ್ಷೀಯ ನಿಷೇಧವನ್ನು ಪಾಲಿಸುತ್ತಿದ್ದೇವೆ ಎಂದು ಸಮರ್ಥಿಸಿಕೊಂಡಿದ್ದಾರೆ. ಆದರೆ ಈಗ ಟ್ರಂಪ್ ನ ಈ ಹೊಸ ಅಣ್ವಸ್ತ್ರ ಪರೀಕ್ಷೆಯ ಯೋಜನೆ ಮತ್ತೆ ದೇಶಗಳು ಪರಮಾಣು ಪರೀಕ್ಷೆ ನಡೆಸುವುದಕ್ಕೆ ದಾರಿಯನ್ನು ಸರಳ ಮಾಡಿಕೊಡುವುದರ ಜೊತೆಗೆ 3ನೇ ಪ್ರಪಂಚ ಮಹಾಯುದ್ಧಕ್ಕೂ ನಾಂದಿ ಹಾಡುವ ಸಂಭವನೀಯತೆ ಇದೆ.

## ಕಿಲ್ಲರ್ ಕೆಮ್ಮು ಸಿರಪ್ ಪ್ರಕರಣದಲ್ಲಿ ಮತ್ತೊಬ್ಬನ ಬಂಧನ

**ಚಿಂದ್ವಾರ:** ಮಧ್ಯಪ್ರದೇಶದಲ್ಲಿ 24 ಮಕ್ಕಳ ಪ್ರಾಣವನ್ನು ಬಲಿ ಪಡೆದ ಕೆಮ್ಮಿನ ಸಿರಪ್ ದುರಂತದ ತನಿಖೆ ನಡೆಸುತ್ತಿರುವ ಎಸ್‌ಐಟಿ ಅಧಿಕಾರಿಗಳು ಪ್ರಕರಣದ ಪ್ರಮುಖ ಆರೋಪಿ ಡಾ. ಪ್ರವೀಣ್ ಸೋನಿ ಅವರ ಪತ್ನಿಯನ್ನು ಬಂಧಿಸಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಹೆಚ್ಚಿನ ಅಸ್ವಸ್ಥ ಮಕ್ಕಳಿಗೆ ಕಲುಷಿತ ಕೆಮ್ಮಿನ ಸಿರಪ್ ಕೋಲ್ಡ್ರಿಫ್ ಅನ್ನು ಶಿಫಾರಸು ಮಾಡಿದ್ದ ಚಿಂದ್ವಾರ ಮೂಲದ ಡಾ. ಸೋನಿ ಅವರನ್ನು ಮೂತ್ರಪಿಂಡ ವೈಫಲ್ಯದಿಂದಾಗಿ ಮಕ್ಕಳ ಸಾವುಗಳಿಗೆ ಸಂಬಂಧಿಸಿದಂತೆ ನಿರ್ಲಕ್ಷ್ಯದ ಆರೋಪದ ಮೇಲೆ ಕಳೆದ ತಿಂಗಳು ಬಂಧಿಸಲಾಗಿತ್ತು.



ಪ್ರಕರಣದ ಮತ್ತೊಬ್ಬ ಆರೋಪಿ ಅವರ ಪತ್ನಿ ಜ್ಯೋತಿ ಸೋನಿ ಅವರನ್ನು ತಡರಾತ್ರಿ ಚಿಂದ್ವಾರ ಜಿಲ್ಲೆಯ ಪರಾಸಿಯಾ ಪಟ್ಟಣದಲ್ಲಿರುವ ಅವರ ನಿವಾಸದಿಂದ ಬಂಧಿಸಲಾಗಿದೆ ಎಂದು ಪೊಲೀಸ್ ಉಪ ವಿಭಾಗೀಯ ಕಚೇರಿ ಮತ್ತು ವಿಶೇಷ ತನಿಖಾ ತಂಡದ ಉಸ್ತುವಾರಿ ಜಿತೇಂದ್ರ ಜಾಟ್ ತಿಳಿಸಿದ್ದಾರೆ. ಅವರು ಹಲವಾರು ಬಲಿಪಶುಗಳಿಗೆ ಕೆಮ್ಮಿನ ಸಿರಪ್ ಮಾರಾಟ ಮಾಡಿದ ವೈದ್ಯಕೀಯ ಅಂಗಡಿಯ ಮಾಲೀಕರಾಗಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಕೆಮ್ಮು ಸಿರಪ್ ದುರಂತಕ್ಕೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಏಳು ಜನರನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದರು. ಮಕ್ಕಳ ಸಾವಿನ ನಂತರ, ತಮಿಳುನಾಡು ಸರ್ಕಾರವು ಕೆಮ್ಮಿನ ಸಿರಪ್ ತಯಾರಿಕಾ ಕಂಪನಿಯಾದ ಸ್ರೇಸನ್ ಫಾರ್ಮಾದ ಪರವಾನಗಿಯನ್ನು ರದ್ದುಗೊಳಿಸಿತು. ಬಂಧಿತರಲ್ಲಿ ಶ್ರೀಸನ್ ಫಾರ್ಮಾದ ಮಾಲೀಕ ಜಿ ರಂಗನಾಥನ್, ವೈದ್ಯಕೀಯ ಪ್ರತಿನಿಧಿ ಸತೀಶ್ ವರ್ಮಾ, ರಸಾಯನಶಾಸ್ತ್ರಜ್ಞ ಕೆ ಮಹೇಶ್ವರಿ, ಸಗಟು ವ್ಯಾಪಾರಿ ರಾಜೇಶ್ ಸೋನಿ ಮತ್ತು ವೈದ್ಯಕೀಯ ಅಂಗಡಿಯ ಔಷಧಿಕಾರ ಸೌರಭ್ ಜೈನ್ ಸೇರಿದ್ದಾರೆ. ಮಧ್ಯಪ್ರದೇಶದ 24 ಮಕ್ಕಳು, ಹೆಚ್ಚಾಗಿ 5 ವರ್ಷಕ್ಕಿಂತ ಕಡಿಮೆ ವಯಸ್ಸಿನವರು, ಕೋಲ್ಡ್ರಿಫ್ ಕೆಮ್ಮಿನ ಸಿರಪ್ ನೀಡಿದ ನಂತರ ಶಂಕಿತ ಮೂತ್ರಪಿಂಡ ವೈಫಲ್ಯದಿಂದ ಸಾವನ್ನಪ್ಪಿದ್ದಾರೆ. ನೆರೆಯ ರಾಜಸ್ಥಾನದಲ್ಲಿ ಕೆಮ್ಮಿನ ಸಿರಪ್ ಸೇವಿಸಿದ ನಂತರ ಕನಿಷ್ಠ ಮೂರು ಮಕ್ಕಳು ಸಾವನ್ನಪ್ಪಿದ್ದಾರೆ. ಈ ದುರಂತವು ವಿಶ್ವ ಆರೋಗ್ಯ ಸಂಸ್ಥೆ ಭಾರತದಲ್ಲಿ ಗುರುತಿಸಲಾದ ಮೂರು ಗುಣಮಟ್ಟದ ಮೌಖಿಕ ಕೆಮ್ಮಿನ ಸಿರಪ್‌ಗಳಾದ ಕೋಲ್ಡ್ರಿಫ್, ರೆಸ್ಪಿಫ್ರೆಶ್ ಟಿಆರ್ ಮತ್ತು ರೀಲೈಫ್ ವಿರುದ್ಧ ಎಚ್ಚರಿಕೆ ನೀಡಲು ಕಾರಣವಾಗಿದೆ.

## ಪಾಕ್ ಪ್ರಧಾನಿಯ ಶರೀಫ್ ಮೇಲೆಯೇ ಮುನಿದ ಸೇನಾ ಮುಖ್ಯಸ್ಥ ಮುನೀರ್
# ಶರೀಫ್ ಸಲಹೆ ಕೇಳದೆ ಆಫ್ಘನ್ ಮೇಲೆ ಸ್ವತಂತ್ರ್ಯ ದಾಳಿ

**ಕರಾಚಿ:** ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಶರೀಫ್ ಹಾಗೂ ಪಾಕಿಸ್ತಾನದ ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಆಸೀಂ ಮುನೀರ್ ಅವರ ನಡುವಿನ ಸಂಬಂಧ ಹಳಸಿದೆಯೇ? ಇಂಥದ್ದೊಂದು ಗುಸುಗುಸು ಈಗ ಪಶ್ಚಿಮ ಏಷ್ಯಾದೆಲ್ಲೆಡೆ ಮನೆ ಮಾಡಿದೆ. ಇತ್ತ, ಭಾರತದ ವಿರುದ್ಧ ತೊಡೆ ತಟ್ಟಿರುವ ಪಾಕಿಸ್ತಾನ, ಅತ್ತ ಅಫ್ಘಾನಿಸ್ತಾನದ ವಿರುದ್ಧವೂ ಮೀಸೆ ತಿರುಗಿಸಿದೆ. ಇಂಥ ಸಂದರ್ಭದಲ್ಲಿ ಅಲ್ಲಿನ ಪ್ರಧಾನಿ ಹಾಗೂ ಸೇನಾಧಿಕಾರಿಯ ನಡುವೆ ಒಗ್ಗಟ್ಟು, ಒಂದೇ ಗುರಿ- ಒಂದೇ ದೃಢಸಂಕಲ್ಪ ಇರುವುದು ಅನಿವಾರ್ಯವಾಗುತ್ತದೆ. ಆದರೆ, ಪಾಕಿಸ್ತಾನದಲ್ಲಿ ಹಾಗಾಗುತ್ತಿಲ್ಲ. ಅವರಿಬ್ಬರ ಸಂಬಂಧ ಹಳಸಿದ್ದು, ಮುನೀರ್ ಅವರು ಪ್ರಧಾನಿ ಶರೀಫ್ ಅವರನ್ನು ಲೆಕ್ಕಿಸದೆಯೇ, ಅವರಿಗೆ ಹೇಳದೆಯೇ ಕೆಲವಾರು ನಿರ್ಧಾರಗಳನ್ನು ಕೈಗೊಳ್ಳುತ್ತಿದ್ದಾರೆ ಎಂದು ಹೇಳಲಾಗುತ್ತಿದೆ.

ಇದಕ್ಕೆ ತಾಜಾ ಉದಾಹರಣೆಯೆಂದರೆ, ಅಫ್ಘಾನಿಸ್ತಾನ ಜೊತೆಗೆ ಪಾಕಿಸ್ತಾನ ಪರವಾಗಿ ಶಾಂತಿ ಮಾತುಕತೆ ಆರಂಭಿಸಿರುವುದು. ಇದನ್ನು ಅಫ್ಘಾನಿಸ್ತಾನದಲ್ಲಿರುವ ತಾಲಿಬಾನ್ ಸರ್ಕಾರದ ಅಧಿಕಾರಿಗಳೇ ಹೇಳಲಾರಂಭಿಸಿದ್ದಾರೆ. ಅವರು ನೀಡಿರುವ ಮಾಹಿತಿಯ ಪ್ರಕಾರ, ಪಾಕಿಸ್ತಾನ ಸೇನಾ ಮುಖ್ಯಸ್ಥರಾದ ಮುನೀರ್, ಪ್ರಧಾನಿ ಶೆಹಬಾಜ್ ಷರೀಫ್ ಅವರನ್ನು ಬದಿಗೊತ್ತಿ, ಅಫ್ಘಾನಿಸ್ತಾನದ ಮೇಲೆ ಸತತವಾಗಿ ದಾಳಿ ನಡೆಸುವಂಥ ನಿರ್ಧಾರಗಳನ್ನು ಕೈಗೊಂಡಿದ್ದಾರೆ.

ಇತ್ತೀಚೆಗೆ, ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದ ನಡುವಿನ ಸಂಬಂಧ ಅತ್ಯಂತ ಬಿಗಡಾಯಿಸಿದೆ. ಈ ತಿಂಗಳ ಆರಂಭದಲ್ಲಿ, ಪಾಕಿಸ್ತಾನವು ತಾಲಿಬಾನ್ ಆಡಳಿತದ ಅಫ್ಘಾನಿಸ್ತಾನದೊಳಗೆ ವೈಮಾನಿಕ ದಾಳಿ ಮತ್ತು ಶೆಲ್ ದಾಳಿಗಳನ್ನು ನಡೆಸಿತು. ಕಾಬೂಲ್‌ನ ಪೂರ್ವ ಹೊರವಲಯ ಮತ್ತು ಪಕ್ಟಿಕಾ ಪ್ರಾಂತ್ಯದ ಕೆಲವು ಭಾಗಗಳಲ್ಲಿ ಈ ದಾಳಿಗಳು ನಡೆದಿದ್ದು, ಮಹಿಳೆಯರು ಮತ್ತು ಮಕ್ಕಳೂ ಸೇರಿದಂತೆ ಹಲವು ನಾಗರಿಕರು ಮೃತಪಟ್ಟಿದ್ದಾರೆ



- ಪಾಕಿಸ್ತಾನ್ ಪ್ರಧಾನಿ ಶೆಹಬಾಜ್ ಶರೀಫ್, ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಆಸೀಂ ಮುನೀರ್ ಅವರ ನಡುವಿನ ಸಂಬಂಧ ಹಳಸಿದಂತಾಗಿದ್ದು, ಇತ್ತೀಚೆಗೆ ಮುನೀರ್ ಅವರು ಶರೀಫ್ ಅವರನ್ನು ವಿಶ್ವಾಸಕ್ಕೆ ಪಡೆಯಲು ಆಫ್ಘಾನಿಸ್ತಾನ ಕುರಿತಂತೆ ನಿರ್ಧಾರ.
- ಇತ್ತೀಚೆಗೆ ಪಾಕಿಸ್ತಾನ್ ಅಫ್ಘಾನಿಸ್ತಾನದ ಮೇಲೆ ವೈಮಾನಿಕ ದಾಳಿ ಮತ್ತು ಶೆಲ್ ದಾಳಿಗಳ ವೇಳೆ ಪಾಕಿಸ್ತಾನದ ಮುನೀರ್ ಸ್ವತಂತ್ರ್ಯ ನಿರ್ಧಾರ
- ಮುನೀರ್ ಹೀಗೆ ಏಕಪಕ್ಷೀಯವಾಗಿ ಆಫ್ಘಾನಿಸ್ತಾನದ ವಿರುದ್ಧ ಯುದ್ಧ ಸಾರಲು ಅಮೆರಿಕದ ಕುಮ್ಮಕ್ಕು ಕಾರಣ.

ಎಂದು ವರದಿಗಳು ತಿಳಿಸಿವೆ. ಸೆಪ್ಟೆಂಬರ್-ಅಕ್ಟೋಬರ್ ಅವಧಿಯಲ್ಲಿ ನಡೆದ ಈ ಸಂಘರ್ಷಗಳಲ್ಲಿ 250ಕ್ಕೂ ಹೆಚ್ಚು ಜನರು ಪ್ರಾಣ ಕಳೆದುಕೊಂಡಿದ್ದಾರೆ. ಈ ಘಟನೆಗಳ ನಂತರ ಗಡಿ ಭಾಗದಲ್ಲಿ ಹಲವು ದಿನಗಳ ಕಾಲ ಗುಂಡಿನ ಚಕಮಕಿ ನಡೆಯಿತು. ಅಂತಿಮವಾಗಿ, ಎರಡೂ ದೇಶಗಳು ಕತಾರ್, ನಂತರ ಟರ್ಕಿಯಲ್ಲಿ ಮಾತುಕತೆ ನಡೆಸಲು ಒಪ್ಪಿಕೊಂಡವು.

**ಶಾಂತಿ ಮಾತುಕತೆಗಳು ಫಲ ನೀಡಿಲ್ಲ**

**ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದ ನಡುವಿನ ಶಾಂತಿ ಮಾತುಕತೆಗಳು ಫಲ ನೀಡಿಲ್ಲ. ಅಮೆರಿಕದ ಡ್ರೋನ್‌ಗಳು ಪಾಕಿಸ್ತಾನದ ವಾಯುಪ್ರದೇಶ ಬಳಸುತ್ತಿವೆ. ಅಫ್ಘನ್ ತಾಲಿಬಾನ್ ಪ್ರಕಾರ, ಪಾಕಿಸ್ತಾನದ ಸೇನೆ ಪ್ರಧಾನಿ ಶೇಹಬಾಜ್ ಷರೀಫ್ ಅವರನ್ನು ಕಡೆಗಣಿಸಿ ಕಾಬೂಲ್ ಜೊತೆ ಸಂಘರ್ಷ ಹೆಚ್ಚಿಸುತ್ತಿದೆ. ಇದು ಪಾಕಿಸ್ತಾನದ ನಾಗರಿಕ ಮತ್ತು ಸೇನಾ ನಾಯಕತ್ವದ ನಡುವಿನ ಭಿನ್ನಾಭಿಪ್ರಾಯವನ್ನು ಎತ್ತಿ ತೋರಿಸುತ್ತದೆ.**


ಆದರೆ, ಅದರಿಂದ ಪ್ರಯೋಜನವೇನೂ ಆಗಿಲ್ಲ.

**ಇದೆಲ್ಲದಕ್ಕೂ ಅಮೆರಿಕದ ಕುಮ್ಮಕ್ಕು?:** ಪಾಕ್ ಸೇನಾಧ್ಯಕ್ಷ ಮುನೀರ್ ಅವರು ಅಫ್ಘನ್ ವಿಚಾರದಲ್ಲಿ ಪಾಕ್ ಪ್ರಧಾನಿಯನ್ನು ಬದಿಗೊತ್ತಲು ಅಮೆರಿಕದ ಕುಮ್ಮಕ್ಕೇ ಕಾರಣ ಎನ್ನಲಾಗುತ್ತಿದೆ. ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್, ಪ್ರಧಾನಿ ಷರೀಫ್ ಅವರ ಜೊತೆಗೆ, ಅಮೆರಿಕದ ಅಧ್ಯಕ್ಷ ಟ್ರಂಪ್ ಅವರೊಂದಿಗೆ ವಾಷಿಂಗ್ಟನ್ ಡಿಸಿಯಲ್ಲಿ ನಡೆದ ಸಭೆಗಳಲ್ಲಿ ಭಾಗವಹಿಸಿದ್ದರು.

ಟ್ರಂಪ್ ಅವರಿಗೆ ಅಫ್ಘಾನಿಸ್ತಾನದಲ್ಲಿ ಅಮೆರಿಕ ಸರ್ಕಾರ ಈ ಹಿಂದೆ ನಿರ್ಮಿಸಿರುವ ಬಾಗ್ರಾಮ್ ವಾಯುನೆಲೆಯನ್ನು ತನಗೆ ಬಿಟ್ಟುಕೊಡಬೇಕು ಎಂದು ಕೇಳಿಕೊಂಡಿದೆ. ಅದಕ್ಕೆ ತಾಲಿಬಾನಿಗಳು ಕ್ಯಾರೇ ಅಂದಿಲ್ಲ. ಅದಕ್ಕೆ ಅಮೆರಿಕ ಈಗ ಪಾಕಿಸ್ತಾನದ ಮುನೀರ್ ಜೊತೆಗೆ ಸೇರಿಕೊಂಡು ನೀನು ಅಫ್ಘಾನಿಸ್ತಾನವನ್ನು ಕೆಣಕು, ನಾನು ನಿನ್ನ ಹಿಂದೆ ಇರುತ್ತೇನೆ ಎಂದು ಆಟವಾಡಿಸುತ್ತಿದೆ ಎಂದು ಅಫ್ಘಾನಿಸ್ತಾನದ ಅಧಿಕಾರಿಗಳು ದೂರಿದ್ದಾರೆ.

## ಬಿಕ್ಕಟ್ಟಿನಿಂದ ಇರುವ ಜಗತ್ತು ಭಾರತವನ್ನು ಭರವಸೆಯಿಂದ ನೋಡುತ್ತಿದೆ

**ಜಬಲ್ಪುರ:** ಇಡೀ ಜಗತ್ತು ಬಿಕ್ಕಟ್ಟಿನಲ್ಲಿದೆ ಮತ್ತು ಅದರ ಹಲವಾರು ಸಮಸ್ಯೆಗಳಿಗೆ ಪರಿಹಾರಗಳನ್ನು ಒದಗಿಸುವ ಭರವಸೆಯೊಂದಿಗೆ ಭಾರತವನ್ನು ನೋಡುತ್ತಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರು ಹೇಳಿದ್ದಾರೆ. ಜಬಲ್ಪುರದಲ್ಲಿ ಪ್ರಸಿದ್ಧ ಧಾರ್ಮಿಕ ಸಂಘಟನೆಯೊಂದು ನಡೆಸಿದ ಜೀವನ ಉತ್ಕರ್ಷ ಮಹೋತ್ಸವ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಧರ್ಮ ಮತ್ತು ಸಂಸ್ಕೃತಿಯ ಮಾರ್ಗವನ್ನು ಅನುಸರಿಸುವುದರಿಂದ ಜಗತ್ತು ಭಾರತದಿಂದ ನಿರೀಕ್ಷೆಗಳನ್ನು ಹೊಂದಿದೆ ಎಂದರು. ಸಾಮಾನ್ಯ ಭಾಷೆಯಲ್ಲಿ, ಸಂಸ್ಕೃತಿ ಎಂದರೆ ನೈತಿಕ, ಸದ್ಗುಣಶೀಲ ನಡವಳಿಕೆ, ಪರಸ್ಪರ ಸದ್ಭಾವನೆಯ ಭಾವನೆ ಮತ್ತು ಆಳವಾದ ಸಂಪರ್ಕ ಇದ್ದಾಗ ಮಾತ್ರ ಜನರು ಸಭ್ಯವಾಗಿ ವರ್ತಿಸುತ್ತಾರೆ ಎಂದು ಭಾಗವತ್ ಹೇಳಿದರು.




ಈ ಉದಾತ್ತ ಗುಣಲಕ್ಷಣಗಳ ಅನುಪಸ್ಥಿತಿಯಲ್ಲಿ, ಪ್ರತಿಕೂಲ ಸಂಬಂಧಗಳು ಬೆಳೆಯುತ್ತವೆ, ಇದು ಸಂಘರ್ಷಗಳಿಗೆ ಕಾರಣವಾಗುತ್ತದೆ ಎಂದು ಎಚ್ಚರಿಸಿದ್ದಾರೆ. ಭಾರತವು ಇಂದಿಗೂ ತನ್ನ ಶ್ರೀಮಂತ ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ಪರಂಪರೆಯನ್ನು ಸಂರಕ್ಷಿಸಿದೆ ಮತ್ತು ಅದು ಕಾಲಕಾಲಕ್ಕೆ ಜಗತ್ತಿಗೆ ಸರಿಯಾದ ಮಾರ್ಗವನ್ನು ತೋರಿಸಲು ಅನುವು ಮಾಡಿಕೊಟ್ಟಿದೆ ಎಂದು ಅವರು ಹೇಳಿದರು. ವಾಸ್ತವದಲ್ಲಿ, ನಾವೆಲ್ಲರೂ ಒಂದೇ. ನಾವೆಲ್ಲರೂ ಸಂಪರ್ಕ ಹೊಂದಿದ್ದೇವೆ. ಭಾರತಕ್ಕೆ ಈ ಸಂಪರ್ಕವಿದೆ, ಆದರೆ ಜಗತ್ತು ಹಾಗೆ ಮಾಡುವುದಿಲ್ಲ.

ಅದಕ್ಕಾಗಿಯೇ ಇಂದು ಜಗತ್ತು ಬಿಕ್ಕಟ್ಟಿನಲ್ಲಿದೆ ಮತ್ತು ಭಾರತದಿಂದ ನಿರೀಕ್ಷೆಗಳನ್ನು ಹೊಂದಿದೆ ಎಂದು ಅವರು ವಿವರಿಸಿದರು. ಆಧ್ಯಾತ್ಮಿಕತೆ ಮತ್ತು ನೀತಿವಂತ ನಡವಳಿಕೆಯೊಂದಿಗೆ ಸಾಮರಸ್ಯದಿಂದ ಜೀವನವನ್ನು ಹೇಗೆ ನಡೆಸಬೇಕೆಂದು ಜಗತ್ತು ಈಗ ಭಾರತದಿಂದ ಕಲಿಯಲು ಬಯಸುತ್ತದೆ. ಸಂತರು ಸಮಾಜಕ್ಕೆ ಸರಿಯಾದ ನಿರ್ದೇಶನ ನೀಡುತ್ತಾರೆ ಮತ್ತು ಅದಕ್ಕಾಗಿಯೇ ಆರ್‌ಎಸ್‌ಎಸ್ ಅಂತಹ ಆಧ್ಯಾತಿಕ ವ್ಯಕ್ತಿಗಳೊಂದಿಗೆ ತೊಡಗಿಸಿಕೊಂಡಿದೆ ಎಂದು ತಿಳಿಸಿದರು. ಬಿಎಪಿಎಸ್ ಸ್ವಾಮಿನಾರಾಯಣ ಸಂಸ್ಥೆಯ ಆಧ್ಯಾತ್ಮಿಕ ನಾಯಕ ಈಶ್ವರಚರಣ್ ಸ್ವಾಮಿ ಕೂಡ ಐದು ದಿನಗಳ ಜೀವನ ಉತ್ಕರ್ಷ ಮಹೋತ್ಸವದ ಉದ್ಘಾಟನಾ ಅಧಿವೇಶನದಲ್ಲಿ ಉಪಸ್ಥಿತರಿದ್ದರು. ಈ ಕಾರ್ಯಕ್ರಮವು ವಿಶ್ವಪ್ರಸಿದ್ಧ ಬಿಎಪಿಎಸ್ ಸ್ವಾಮಿನಾರಾಯಣ ಸಂಸ್ಥೆಯ ಆಧ್ಯಾತ್ಮಿಕ ಮುಖ್ಯಸ್ಥ ಜಬಲ್ಪುರದಲ್ಲಿ ಜನಿಸಿದ ಮಹಾಂತ ಸ್ವಾಮಿ ಮಹಾರಾಜ್ ಅವರ ಜೀವನ, ಬೋಧನೆಗಳು ಮತ್ತು ಸೇವೆಗೆ ಸಮರ್ಪಿತವಾಗಿದೆ. ಈ ಸಂದರ್ಭದಲ್ಲಿ, ಭಾಗವತ್ ಅವರು ಸ್ವಾಮಿ ಭದ್ರೇಶ್‌ದಾಸ್ ಅವರ ಪುಸ್ತಕವನ್ನು ಬಿಡುಗಡೆ ಮಾಡಿದರು.

## ಪೆಹಲ್ಗಾಮ್ ದಾಳಿಯ 6 ತಿಂಗಳ ಬಳಿಕ ಕಾಶ್ಮೀರದಲ್ಲಿ ಚಿತ್ರೀಕರಣ ಆರಂಭ

**ಶ್ರೀನಗರ:** ಪೆಹಲ್ಗಾಮ್ ದಾಳಿ ನಡೆದು ಆರು ತಿಂಗಳ ನಂತರ ಕಾಶ್ಮೀರದ ಕಣಿವೆಗಳಲ್ಲಿ ಚಲನಚಿತ್ರ ಚಿತ್ರೀಕರಣವು ನಡೆಯುತ್ತಿದೆ. ಅನಂತ್‌ನಾಗ್ ಜಿಲ್ಲೆಯಲ್ಲಿರುವ ಪೆಹಲ್ಗಾಮ್‌ನಲ್ಲಿ ಏ.22ರಂದು ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಮೃತಪಟ್ಟಿದ್ದರು. ಅದರ ಬಳಿಕ ಕಾಶ್ಮೀರದಲ್ಲಿ ಚಲನಚಿತ್ರ ಚಿತ್ರೀಕರಣವನ್ನು ನಿಲ್ಲಿಸಲಾಗಿತ್ತು.

ಪೆಹಲ್ಗಾಮ್ ದಾಳಿ ನಡೆದ ಪ್ರವಾಸಿ ರೆಸಾರ್ಟ್‌ನಲ್ಲಿಯೇ ಜೆಸ್ಸಿ ಖ್ಯಾತಿಯ ವಿಮಲ್ ಕೃಷ್ಣ ನಿರ್ದೇಶನದಲ್ಲಿ ಹಾಸ್ಯ ಚಲನಚಿತ್ರವೊಂದರ ಚಿತ್ರೀಕರಣ ಆರಂಭವಾಗಿದೆ. ಈ ಕುರಿತು ಮಾತನಾಡಿರುವ ನಿರ್ದೇಶಕ ವಿಮಲ್ ಕೃಷ್ಣ, ನಾವು ಸಿನಿಮಾದ ಚಿತ್ರೀಕರಣಕ್ಕೆ ಸುಂದರ ಸ್ಥಳವನ್ನು ಹುಡುಕುವಾಗ, ಈ ಸ್ಥಳವನ್ನು ಆಯ್ಕೆ ಮಾಡಿದ್ದೆವು. ಕಾಶ್ಮೀರವು ಪ್ರವಾಸಿಗಳಿಗೆ ಸಂಪೂರ್ಣ ಸುರಕ್ಷಿತವಾಗಿದೆ. ಸಿನಿಮಾ ಚಿತ್ರೀಕರಣಕ್ಕೂ ಯಾವುದೇ ತೊಂದರೆಯಾಗಿಲ್ಲ. ಎಲ್ಲಾ ಕಾಶ್ಮೀರಿಗಳಿಗೆ ಧನ್ಯವಾದಗಳು ಎಂದು ತಿಳಿಸಿದ್ದಾರೆ.




ಪೆಹಲ್ಗಾಮ್ ದಾಳಿ ನಂತರ ಇಲ್ಲಿ ಚಿತ್ರೀಕರಣಕ್ಕೆ ಬಂದವರಲ್ಲಿ ನಾವೇ ಮೊದಲಿಗರು. ಜುಲೈನಲ್ಲಿ ಚಿತ್ರೀಕರಣ ಮಾಡಲು ಸ್ಥಳ ನೋಡಲು ಬಂದಾಗ ಕೂಡ ಯಾವುದೇ ತೊಂದರೆಯಾಗಿರಲಿಲ್ಲ. ಸರ್ಕಾರ, ಸೇನೆ ಕೂಡ ಉತ್ತಮವಾಗಿ ಸ್ಪಂದಿಸಿತ್ತು. ಸ್ಥಳೀಯರು ಕೂಡ ಕುಟುಂಬ ಸದಸ್ಯರಂತೆ ನಮ್ಮನ್ನು ಕಾಣುತ್ತಿದ್ದಾರೆ. ಕಾಶ್ಮೀರವು ಶೇ 100ರಷ್ಟು ಸುರಕ್ಷಿತವಾಗಿದೆ. ಮುಂಬರುವ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯ ಪ್ರವಾಸಿಗರು ಭೇಟಿ ನೀಡುವ ವಿಶ್ವಾಸವಿದೆ ಎಂದು ಹೇಳಿದ್ದಾರೆ. ಚಲನಚಿತ್ರ ಚಿತ್ರೀಕರಣಕ್ಕೆ ಅವಕಾಶ ನೀಡಿರುವುದು ಕಾಶ್ಮೀರದಲ್ಲಿನ ಪ್ರವಾಸೋದ್ಯಮಕ್ಕೂ ಲಾಭವಾಗಲಿದೆ. ಪೆಹಲ್ಗಾಮ್‌ನಲ್ಲಿ ಚಿತ್ರೀಕರಣ ಮುಗಿದ ನಂತರ ಶ್ರೀನಗರದಲ್ಲೂ ಚಿತ್ರೀಕರಣ ಮಾಡಲಾಗುತ್ತದೆ ಎಂದು ಹೇಳಿದ್ದಾರೆ.

## ಮತ್ತೆ 'ಜಂಗಲ್ ರಾಜ್' ಆಡಳಿತ ಬರದಂತೆ ತಡೆಯಲು ಕಮಲದ ಬಟನ್ ಒತ್ತಿ: ಶಾ

**ದರ್ಭಾಂಗ:** ಬಿಹಾರದಲ್ಲಿ ಜಂಗಲ್ ರಾಜ್ ಆಡಳಿತ ಮತ್ತೆ ಬರದಂತೆ ತಡೆಯಲು ಇವಿಎಂನಲ್ಲಿ ಕಮಲದ ಚಿಹ್ನೆಯಿರುವ ಬಟನ್ ಅನ್ನು ಒತ್ತಿ ಎಂದು ಕೇಂದ್ರ ಗೃಹ ಸಚಿವ ಅಮಿತ್‌ಶಾ ಆಗ್ರಹಿಸಿದ್ದಾರೆ. ಇಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡಿದ ಶಾ, ಆರ್‌ಜೆಡಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

15 ವರ್ಷಗಳ ಲಾಲೂ ರಾಬ್ರಿ ಜಂಗಲ್ ರಾಜ್ ಆಳ್ವಿಕೆಯಲ್ಲಿ ಬಿಹಾರವನ್ನು ಸಂಪೂರ್ಣವಾಗಿ ನಾಶಗೊಳಿಸಲಾಯಿತು. ಜಂಗಲ್ ರಾಜ್ ಮತ್ತೆ ಬರದಂತೆ ತಡೆಯಲು ಕಮಲದ ಚಿಹ್ನೆಗೆ ಮತ ಹಾಕಬೇಕಿದೆ ಎಂದು ಅವರು ಹೇಳಿದ್ದಾರೆ. ನವೆಂಬರ್ 6ರ ಮತದಾನ ದಿನದಂದು ನೀವು ಕಮಲದ ಚಿಹ್ನೆಗೆ ಮತ ಹಾಕದೆ ತಪ್ಪು ಮಾಡಿದರೆ, ಮತ್ತೆ ಬಿಹಾರದಲ್ಲಿ ಕೊಲೆ, ಲೂಟಿ, ಅಪಹರಣ, ಸುಲಿಗೆ ಸಾಮಾನ್ಯ ಸಂಗತಿಗಳಾಗುತ್ತವೆ ಎಂದು ಎಚ್ಚರಿಸಿದ್ದಾರೆ. ಮುಂದುವರಿದು, ಜೀವಿಕಾ ದೀದಿ ಯೋಜನೆಯಡಿ ನೀಡಲಾಗುತ್ತಿದ್ದ 10 ಸಾವಿರ ಹಿಂಪಡೆಯುವಂತೆ ಕೋರಿ ಚುನಾವಣಾ ಆಯೋಗಕ್ಕೆ ಆರ್‌ಜೆಡಿ ದೂರು ನೀಡಿದೆ. ಸ್ವಸಹಾಯ ಗುಂಪುಗಳಿಗೆ ವರ್ಗಾಯಿಸಲಾದ ಹಣವನ್ನು ಲಾಲೂ ಅವರ ಮೂರು ತಲೆಮಾರುಗಳು ಕಸಿದುಕೊಳ್ಳಲು ಸಾಧ್ಯವಿಲ್ಲ ಎಂದು ಆರೋಪಿಸಿದ್ದಾರೆ. ಪ್ರಧಾನಿ ಮೋದಿ ಅವರ ತಾಯಿಯನ್ನು ಅವಮಾನಿಸಿದ ಆರ್‌ಜೆಡಿ-ಕಾಂಗ್ರೆಸ್ ಪಕ್ಷಗಳಿಗೆ ಮುಂದಿನ ಚುನಾವಣೆಯಲ್ಲಿ ನಿರ್ಗಮನದ ದ್ವಾರವನ್ನು ತೋರಿಸುವ ಮೂಲಕ ಬಿಹಾರದ ಜನರು ಸೇಡು ತೀರಿಸಿಕೊಳ್ಳಲಿದ್ದಾರೆ ಎಂದಿದ್ದಾರೆ. ಇನ್ನು, ಎನ್‌ಡಿಎ ಅಧಿಕಾರಕ್ಕೆ ಬಂದರೆ ಸುಮಾರು 26 ಕೋಟಿ ವೆಚ್ಚದಲ್ಲಿ ಮಿಥಿಲಾಂಚಲ್ ಪ್ರದೇಶಕ್ಕೆ ನೀರಾವರಿ ಒದಗಿಸಲಾಗುತ್ತದೆ. ಇದಕ್ಕೆ ಕೋಶಿ ನದಿ ನೀರನ್ನು ಬಳಸಿಕೊಳ್ಳಲಾಗುವುದು. ಈ ಭಾಗದಲ್ಲಿ ಪ್ರವಾಹವಾಗುವುದನ್ನು ತಡೆಗಟ್ಟಲಾಗುವುದು. ಕೋಶಿ ಅಲ್ಲದೇ ಗಂಗಾ, ಗಂಡಕ್ ನದಿಗಳ ನೀರನ್ನು ಸೂಕ್ತವಾಗಿ ಬಳಸಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.



ರಾಜ್ಯದಲ್ಲಿ ಎನ್‌ಡಿಎ ಅಧಿಕಾರವನ್ನು ಉಳಿಸಿಕೊಂಡರೆ, ಚಿಕಿತ್ಸೆಗಾಗಿ ಮಿಥಿಲಾ, ಕೋಶಿ ಮತ್ತು ತಿರ್ಹತ್‌ನ ಜನರು ಪಟ್ನಾ ಅಥವಾ ದೆಹಲಿಗೆ ಹೋಗುವ ಅಗತ್ಯವಿಲ್ಲ. ಅವರಿಗೆ ಏಮ್ಸ್-ದರ್ಭಂಗಾದಲ್ಲಿ ಗುಣಮಟ್ಟದ ವೈದ್ಯಕೀಯ ಸೌಲಭ್ಯಗಳು ಒದಗಿಸಲಾಗುತ್ತದೆ ಎಂದು ಭರವಸೆ ನೀಡಿದ್ದಾರೆ. ಅಲ್ಲದೇ, ಪ್ರತಿ ಜಿಲ್ಲೆಗೆ ಒಂದು ಇಂಜಿನಿಯರಿಂಗ್ ಮತ್ತು ಒಂದು ಮೆಡಿಕಲ್ ಕಾಲೇಜು ಸ್ಥಾಪಿಸುವುದಾಗಿ ಹೇಳಿದ್ದಾರೆ.

## ಯುವಜನರಿಗೆ ರೀಲ್ಸ್ ಚಟ ಪ್ರೋತ್ಸಾಹಿಸುತ್ತಿರುವ ಮೋದಿ



**ಔರಂಗಾಬಾದ್:** ದೇಶದ ಯುವಜನತೆ ಸಾಮಾಜಿಕ ಮಾಧ್ಯಮಗಳಲ್ಲಿ ತಲ್ಲೀನರಾಗಲು ಪ್ರಧಾನಿ ನರೇಂದ್ರ ಮೋದಿ ಬಯಸುತ್ತಾರೆ. ಇದರಿಂದ ಯುವಜನತೆ ಹೆಚ್ಚಿನ ಪ್ರಶ್ನೆಗಳನ್ನು ಎತ್ತುವುದಿಲ್ಲ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮಂಗಳವಾರ ಹೇಳಿದ್ದಾರೆ. ಬಿಹಾರದ ಔರಂಗಾಬಾದ್ ಜಿಲ್ಲೆಯಲ್ಲಿ ಚುನಾವಣಾ ಸಮಾವೇಶ ಉದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ನಾಯಕ ರಾಹುಲ್, ಸಾಮಾಜಿಕ ಮಾಧ್ಯಮ ಚಟವನ್ನು ಪ್ರಧಾನಿ ಪ್ರೋತ್ಸಾಹಿಸುತ್ತಿದ್ದಾರೆ.

ಶಿಕ್ಷಣ, ಆರೋಗ್ಯ, ಉದ್ಯೋಗ ಸೇರಿದಂತೆ ಜನರ ಸಮಸ್ಯೆಗಳಿಂದ ವಿಚಲಿತರಾಗಲು ಯುವಜನರು ಸಾಮಾಜಿಕ ಮಾಧ್ಯಮಗಳಲ್ಲಿ ನಿರತರಾಗಲು ಬಯಸುತ್ತಾರೆ ಎಂದು ಆರೋಪಿಸಿದ್ದಾರೆ. ಮೋದಿ ನಿಮ್ಮನ್ನು ರೀಲ್ಸ್, ಇನ್‌ಸ್ಟಾಗ್ರಾಂ, ಫೇಸ್‌ಬುಕ್ ವ್ಯಸನಿಯನ್ನಾಗಿ ಮಾಡಲು ಬಯಸುತ್ತಾರೆ. ಇದು 21ನೇ ಶತಮಾನದ ಚಟವಾಗಿದೆ.

ಯುವಜನರ ಗಮನವನ್ನು ಬೇರೆಡೆಗೆ ಸೆಳೆಯಲು ಬಯಸುತ್ತಾರೆ. ಅಲ್ಲದೆ ಶಿಕ್ಷಣ, ಆರೋಗ್ಯ, ಉದ್ಯೋಗ ಕ್ಷೇತ್ರಗಳ ಸಮಸ್ಯೆಗಳಿಗೆ ತಮ್ಮ ಸರ್ಕಾರವನ್ನು ಹೊಣೆಗಾರರನ್ನಾಗಿ ಮಾಡದಿರಲು ಬಯಸುತ್ತಾರೆ ಎಂದು ಹೇಳಿದ್ದಾರೆ.

**ಬಿಹಾರದಲ್ಲಿ ಮತಕಳ್ಳತನ:** ಬಿಹಾರದಲ್ಲಿ ಪ್ರಧಾನಿ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ ಕಳ್ಳತನದಲ್ಲಿ ಭಾಗಿಯಾಗಿದ್ದಾರೆ. ಇಲ್ಲದಿದ್ದರೆ ಬಿಹಾರದಲ್ಲಿ ಗೆಲ್ಲಲು ಸಾಧ್ಯವಿಲ್ಲ ಎಂಬುದು ಅವರಿಗೆ ತಿಳಿದಿದೆ ಎಂದು ರಾಹುಲ್ ವಾಗ್ದಾಳಿ ನಡೆಸಿದ್ದಾರೆ. ಬಿಹಾರದಲ್ಲಿ ಅಧಿಕಾರಕ್ಕೆ ಬಂದರೆ ಇಂಡಿಯಾ ಮೈತ್ರಿಯು ಹಿಂದುಳಿದ, ದಲಿತರ ಸರ್ಕಾರವಾಗಿ ಕೆಲಸ ಮಾಡಲಿದೆ. ಬಿಹಾರವನ್ನು ಉತ್ಪಾದನಾ ಕೇಂದ್ರವನ್ನಾಗಿ ಮಾಡಲು ಬಯಸುತ್ತೇವೆ. ಮೇಡ್ ಇನ್ ಬಿಹಾರದ ಮೊಬೈಲ್ ಫೋನ್, ಬಟ್ಟೆಬರೆ ನೋಡಿ ಚೀನಾ ಕೂಡಾ ಗಮನಿಸುವಂತೆ ಮಾಡುತ್ತೇವೆ ಎಂದು ಭರವಸೆ ನೀಡಿದ್ದಾರೆ.

ನಳಂದದಲ್ಲಿ ಅತ್ಯಾಧುನಿಕ ವಿಶ್ವವಿದ್ಯಾಲಯ ಸ್ಥಾಪಿಸುವುದಾಗಿ ರಾಹುಲ್ ವಾಗ್ದಾನ ನೀಡಿದ್ದಾರೆ. ರಾಜ್ಯದ ಎನ್‌ಡಿಎ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿರುವ ರಾಹುಲ್, ಮುಖ್ಯಮಂತ್ರಿ ನಿತೀಶ್ ಕುಮಾರ್ ಕೇಂದ್ರದಲ್ಲಿ ಕುಳಿತವರ ನಿರ್ದೇಶನದಂತೆ ಕೆಲಸ ಮಾಡುತ್ತಾರೆ ಎಂದು ಆಪಾದಿಸಿದ್ದಾರೆ.

## ಎಸ್‌ಐಆರ್ ವಿರುದ್ಧ ಬೀದಿಗಿಳಿದ ಮಮತಾ ಬ್ಯಾನರ್ಜಿ: ಕಾಲ್ನಡಿಗೆ ಜಾಥ

**ಕೋಲ್ಕತ್ತ:** ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ವಿರುದ್ಧ ಪಶ್ಚಿಮ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ ಪ್ರತಿಭಟನಾ ರ್‍ಯಾಲಿ ನಡೆಸಿದ್ದಾರೆ.

ಕೋಲ್ಕತ್ತದಲ್ಲಿ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಸಾವಿರಾರು ಮಂದಿ ಭಾಗವಹಿಸಿದ್ದಾರೆ. ಸೋದರಳಿಯ, ಟಿಎಂಸಿಯ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಕೂಡ ಕಾಲ್ನಡಿಗೆಯಲ್ಲಿ ಭಾಗಿಯಾದರು. ರೆಡ್ ರಸ್ತೆಯಲ್ಲಿರುವ ಡಾ. ಬಿ.ಆರ್ ಅಂಬೇಡ್ಕರ್ ಮೂರ್ತಿಯಿಂದ ಪ್ರಾರಂಭವಾದ 3.8 ಕಿ.ಮೀ ನಡಿಗೆ ರವೀಂದ್ರನಾಥ ಠಾಗೋರ್ ಅವರ ಪೂರ್ವಜರ ಮನೆಯಾಗಿರುವ ಜೊರಸಾಂಕೊದಲ್ಲಿ ಕೊನೆಗೊಂಡಿತು. ಜಾಥದಲ್ಲಿ ಭಾಗಿಯಾಗಿದ್ದ ಟಿಎಂಸಿಯ ಸಾವಿರಾರು ಮಂದಿ ಕಾರ್ಯಕರ್ತರು ಬಾವುಟಗಳನ್ನು ಹಾರಿಸುತ್ತಾ, ಘೋಷಣೆಗಳನ್ನು ಕೂಗುತ್ತಾ, ಭಿತ್ತಿ ಪತ್ರಗಳನ್ನು ಹಿಡಿದುಕೊಂಡು ನಡೆದರು.

## ಮಿನಿ ನ್ಯೂಸ್

### ಇಂಡಿ ಒಕ್ಕೂಟ ಅಧಿಕಾರಕ್ಕೆ ಬಂದರೆ ಭತ್ತ, ಗೋಧಿಗೆ ಬೋನಸ್; ತೇಜಸ್ವಿ

**ಪಾಟ್ನಾ:** ಬಿಹಾರದಲ್ಲಿ ಇಂಡಿಯಾ ಒಕ್ಕೂಟ ಅಧಿಕಾರಕ್ಕೆ ಬಂದರೆ, ರೈತರಿಗೆ ಪ್ರತಿ ಕ್ವಿಂಟಾಲ್ ಭತ್ತಕ್ಕೆ ಎಂಎಸ್‌ಪಿ ದರದ ಮೇಲೆ 300 ರೂ. ಮತ್ತು ಗೋಧಿಗೆ 400 ರೂ. ಬೋನಸ್ ನೀಡಲಾಗುವುದು ಎಂದು ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಘೋಷಿಸಿದ್ದಾರೆ. ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ವಿರೋಧ ಪಕ್ಷದ ಮುಖ್ಯಮಂತ್ರಿ ಅಭ್ಯರ್ಥಿ ಯಾದವ್ ಅವರು, ಎಲ್ಲಾ ಪ್ರಾಥಮಿಕ ಕೃಷಿ ಸಾಲ ಸಂಘಗಳು, ಪ್ರಾಥಮಿಕ ಮಾರುಕಟ್ಟೆ ಸಹಕಾರ ಸಂಘಗಳ ಮುಖ್ಯಸ್ಥರಿಗೂ ರಾಜ್ಯದಲ್ಲಿ ಜನಪ್ರತಿನಿಧಿಗಳ ಸ್ಥಾನಮಾನ ನೀಡಲಾಗುವುದು ಎಂದು ಹೇಳಿದರು.

ನ. 6 ರಂದು ರಾಜ್ಯದಲ್ಲಿ ಮೊದಲ ಹಂತದ ಮತದಾನಕ್ಕೆ ಎರಡು ದಿನಗಳ ಮೊದಲು ಈ ಪ್ರಕಟಣೆಗಳು ಬಂದಿವೆ. ಇಂಡಿಯಾ ಒಕ್ಕೂಟ ಅಧಿಕಾರಕ್ಕೆ ಬಂದರೆ, ಎಲ್ಲಾ ರೈತರಿಗೆ ಕನಿಷ್ಠ ಬೆಂಬಲ ಬೆಲೆಗಿಂತ ಬೋನಸ್ ಆಗಿ ಪ್ರತಿ ಕ್ವಿಂಟಾಲ್ ಭತ್ತಕ್ಕೆ 300 ರೂ. ಮತ್ತು ಗೋಧಿಗೆ 400 ರೂ. ನೀಡಲಾಗುವುದು ಎಂದು ಯಾದವ್ ಹೇಳಿದರು. ಇದಲ್ಲದೆ, ನಾವು ಸರ್ಕಾರ ರಚಿಸಿದರೆ, ರಾಜ್ಯದಲ್ಲಿ ನೋಂದಾಯಿತ 8,400 ವ್ಯಾಪಾರ ಮಂಡಲಗಳು, ಪಿಎಸಿಎಸ್‌ಗಳ ವ್ಯವಸ್ಥಾಪಕರಿಗೆ ಗೌರವಧನ ನೀಡಲು ನಾವು ಯೋಜಿಸುತ್ತಿದ್ದೇವೆ ಎಂದು ಅವರು ಹೇಳಿದರು. 243 ಸದಸ್ಯರ ಬಿಹಾರ ವಿಧಾನಸಭೆಗೆ ನವೆಂಬರ್ 6, ನವೆಂಬರ್ 11 ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದ್ದು, ನವೆಂಬರ್ 14 ರಂದು ಫಲಿತಾಂಶಗಳು ಪ್ರಕಟವಾಗಲಿವೆ.

### ರಷ್ಯಾ ದಾಳಿ ಎದುರಿಸಲು ಉಕ್ರೇನ್‌ಗೆ ಬಲಿಷ್ಠ ವಾಯುರಕ್ಷಣಾ ವ್ಯವಸ್ಥೆ

**ಕೀವ್:** ರಷ್ಯಾದಿಂದ ನಿತ್ಯವೂ ನಡೆಯುತ್ತಿರುವ ದಾಳಿಯನ್ನು ಸಮರ್ಥವಾಗಿ ಎದುರಿಸಲು ಅಮೆರಿಕದಿಂದ ಬಲಿಷ್ಠ ವಾಯುರಕ್ಷಣಾ ವ್ಯವಸ್ಥೆಯನ್ನು ಸ್ವೀಕರಿಸಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೋಡಿಮಿರ್ ಝುಲೆನ್ ತಿಳಿಸಿದ್ದಾರೆ. ರಾತ್ರಿ ರಷ್ಯಾ ಡ್ರೋನ್ ದಾಳಿಯಿಂದ ಇಬ್ಬರು ಮಕ್ಕಳು ಸೇರಿದಂತೆ ಐದು ಮಂದಿ ಮೃತಪಟ್ಟ ಬೆನ್ನಲ್ಲೇ ಅವರು ಈ ಹೇಳಿಕೆ ನೀಡಿದ್ದಾರೆ.

ಅಮೆರಿಕ ನಿರ್ಮಿತ ಪೆಟ್ರಿಯಾಟ್‌ವಾಯುರಕ್ಷಣಾ ವ್ಯವಸ್ಥೆಯು ಉಕ್ರೇನ್‌ಗೆ ಸೇರ್ಪಡೆಗೊಂಡಿದೆ. ಈಗ ತನ್ನ ಕಾರ್ಯಾಚರಣೆ ಆರಂಭಿಸಿದೆ. ದೇಶದ ಮೂಲಸೌಕರ್ಯ ರಕ್ಷಿಸಿಕೊಳ್ಳುವ ನಿಟ್ಟಿನಲ್ಲಿ ಇಂತಹ ಇನ್ನಷ್ಟು ವ್ಯವಸ್ಥೆಗಳು ಸೇರ್ಪಡೆಗೊಳಿಸಬೇಕಾದ ಅಗತ್ಯವಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.

### ಭ್ರಷ್ಟಾಚಾರ ಆರೋಪ ಸಾಬೀತಾದರೆ ಅದಾನಿ ಜತೆಗಿನ ವಿದ್ಯುತ್ ಒಪ್ಪಂದ ರದ್ದು

**ಢಾಕಾ:** ಯಾವುದೇ ರೀತಿಯ ಅಕ್ರಮ. ಭ್ರಷ್ಟಾಚಾರ ಸಾಬೀತಾದರೆ ಭಾರತದ ಅದಾನಿ ಸಮೂಹದೊಂದಿಗಿನ ವಿದ್ಯುತ್ ಒಪ್ಪಂದವನ್ನು ರದ್ದುಗೊಳಿಸುವುದಾಗಿ ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ಹೇಳಿದೆ. ಒಪ್ಪಂದದಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ ಎಂದು ಹೇಳಲಾಗುತ್ತಿದೆ. ಆದರೆ ಭಷ್ಟಾಚಾರ ನಡೆದಿರುವುದು ಸಾಬೀತಾದರೆ ಒಪ್ಪಂದವೇ ರದ್ದುಗೊಳ್ಳುವ ಸಾಧ್ಯತೆಗಳಿವೆ ಎಂದು ಬಾಂಗ್ಲಾದ ಇಂಧನ ವ್ಯವಹಾರಗಳ ಸಲಹೆಗಾರ ಮೊಹಮ್ಮದ್ ಫೌಝುಲ್ ಕಬೀರ್ ಸ್ಥಳೀಯ ಮಾಧ್ಯಮಗಳಿಗೆ ತಿಳಿಸಿದ್ದಾರೆ. ಹಸೀನಾ ಆಡಳಿತದಲ್ಲಿ ನಡೆದಿರುವ ವಿದ್ಯುತ್ ಒಪ್ಪಂದಗಳ ಬಗ್ಗೆ ಪರಿಶೀಲನೆ ನಡೆಸಿರುವ ರಾಷ್ಟ್ರೀಯ ಪರಿಶೀಲನಾ ಸಮಿತಿಯು ಸಲ್ಲಿಸಿರುವ ಮಧ್ಯಂತರ ವರದಿಯ ಬಗ್ಗೆ ಕಬೀರ್ ಪ್ರತಿಕ್ರಿಯಿಸಿದರು.

2017ರಲ್ಲಿ ಅದಾನಿ ಸಮೂಹ ಮತ್ತು ಬಾಂಗ್ಲಾದೇಶದ ನಡುವೆ ಆಗಿದ್ದ ಒಪ್ಪಂದದ ಕುರಿತು, ಮಾಜಿ ಪ್ರಧಾನಿ ಶೇಖ್ ಹಸೀನಾ ಸರ್ಕಾರ ಪತನಗೊಂಡ ಬಳಿಕ ಪರಿಶೀಲನೆ ನಡೆಸಲಾಗುತ್ತಿದೆ. ಹಸೀನಾ ಆಡಳಿತಾವಧಿಯಲ್ಲಿ ಇಂಧನ ವಲಯದಲ್ಲಿ ಸರ್ಕಾರದ ವೈಫಲ್ಯ ಮತ್ತು ದೊಡ್ಡ ಮಟ್ಟದಲ್ಲಿ ಭ್ರಷ್ಟಾಚಾರ ನಡೆದಿರುವುದು ತನಿಖೆಯಲ್ಲಿ ಪತ್ತೆಯಾಗಿದೆ ಎಂದು ಸಮಿತಿಯ ಮುಖ್ಯಸ್ಥರು ತಿಳಿಸಿದ್ದಾರೆ. ಸಮಿತಿಯು ಅಂತಿಮ ವರದಿಯನ್ನು 2026ರ ಜನವರಿಯಲ್ಲಿ ನೀಡುವ ಸಾಧ್ಯತೆಯಿದೆ. ಅದಾನಿ ಸಮೂಹದ ಜೊತೆಗಿನ ವಿದ್ಯುತ್ ಖರೀದಿ ಒಪ್ಪಂದದ ಬಗ್ಗೆ ಪ್ರತ್ಯೇಕ ವರದಿ ತಯಾರಿಸಿರುವುದಾಗಿ ಸಮಿತಿ ತಿಳಿಸಿದೆ.

### ಬಿಹಾರದಲ್ಲಿ ಹೆಣ್ಣು ಮಕ್ಕಳು ಸುರಕ್ಷಿತರಲ್ಲ ಎನ್‌ಡಿಎ ವಿರುದ್ಧ ಖರ್ಗೆ ವಾಗ್ದಾಳಿ

**ನವದೆಹಲಿ:** ಬಿಹಾರದಲ್ಲಿ ಎನ್‌ಡಿಎ ಸರ್ಕಾರದ ಅಡಿಯಲ್ಲಿ ಮಹಿಳೆಯರ ಭದ್ರತೆಗೆ ಸಂಬಂಧಿಸಿದಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಅಲ್ಲದೆ ಬಿಹಾರ ಚುನಾವಣೆಯಲ್ಲಿ ಮಹಾಘಟಬಂಧನ ಮೈತ್ರಿಯು ಅಧಿಕಾರಕ್ಕೆ ಬಂದರೆ ಮಹಿಳೆಯರ ಸಬಲೀಕರಣ, ಆರ್ಥಿಕ ಏಳಿಗೆಗಾಗಿ ಸಂಪೂರ್ಣ ಬದ್ಧರಾಗಿದ್ದೇವೆ ಎಂದು ಭರವಸೆ ನೀಡಿದ್ದಾರೆ.

ನಾವು ಚುನಾವಣೆಯಲ್ಲಿ ಮತ ಗಳಿಸಲು ಭರವಸೆ ನೀಡುತ್ತಿಲ್ಲ, ಕಾಂಗ್ರೆಸ್ ಪಕ್ಷವು ಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸಲಿದೆ ಎಂದು ಅವರು ಹೇಳಿದ್ದಾರೆ. ಬಿಹಾರದಲ್ಲಿ ಬಿಜೆಪಿ-ಜೆಡಿಯು 20 ವರ್ಷಗಳಿಂದ ಅಧಿಕಾರದಲ್ಲಿದೆ. ಆದರೆ ಇಂದಿಗೂ ಮೋದಿಯ ಬಿಹಾರದಲ್ಲಿ ಹೆಣ್ಣುಮಕ್ಕಳು ಸುರಕ್ಷಿತರಲ್ಲ ಎಂದು ಸಾಮಾಜಿಕ ಮಾಧ್ಯಮ 'ಎಕ್ಸ್'ನಲ್ಲಿ ಖರ್ಗೆ ಪೋಸ್ಟ್ ಮಾಡಿದ್ದಾರೆ. ರಾಜ್ಯದಲ್ಲಿ ಮಹಿಳೆಯರು, ಮಕ್ಕಳ ಪರಿಸ್ಥಿತಿ ತೀವ್ರ ಕಳವಳಕಾರಿಯಾಗಿದೆ. ಶೇ. 70ರಷ್ಟು ಮಕ್ಕಳು ರಕ್ತಹೀನತೆಯಿಂದ ಬಳಲುತ್ತಿದ್ದಾರೆ. ಶೇ 40ರಷ್ಟು ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ ಎಂದು ಎನ್‌ಎಫ್‌ಎಚ್‌ಎಸ್ ಅಂಕಿ ಉಲ್ಲೇಖಿಸಿ ಖರ್ಗೆ ಹೇಳಿದ್ದಾರೆ.

# ಬಿಹಾರ ವಿಧಾನಸಭಾ ಚುನಾವಣೆಗೆ ಕ್ಷಣಗಣನೆ ಶುರು

## ಯುವಕರು ಉದ್ಯೋಗಗಳ ಕೊರತೆಯ ಬಗ್ಗೆ ದೂರು ನೀಡುತ್ತಾರೆ, ಸುಧಾರಿತ ಕಾನೂನು, ಸುವ್ಯವಸ್ಥೆ, ಉತ್ತಮ ರಸ್ತೆಗಳಿಗಾಗಿ ನಿತೀಶ್‌ಗೆ ಕ್ರೆಡಿಟ್

**ಪಾಟ್ನಾ:** ಬಿಹಾರ ವಿಧಾನಸಭಾ ಚುನಾವಣೆಗೆ ಕ್ಷಣಗಣನೆ ಶುರುವಾಗಿದೆ. ಪ್ರಚಾರ ಕಾರ್ಯ ಜೋರಾಗಿದೆ. ಆಡಳಿತ ಪಕ್ಷದ ಜಂಗಲ್ ರಾಜ್ ವಿರುದ್ಧದ ಆಕ್ರಮಣಕಾರಿ ಪ್ರಚಾರವು ಈ ಬಾರಿಯೂ ಜನರನ್ನು ತಲುಪುತ್ತಿದೆ. ಇಲ್ಲಿನ ಗ್ರೌಂಡ್ ರಿಪೋರ್ಟ್ ಹೇಗಿದೆ ಎಂದು ನೋಡುವುದಾದರೆ, ಪಶ್ಚಿಮ ಚಂಪಾರನ್‌ನಲ್ಲಿ, ವಿಶೇಷವಾಗಿ ಮಹಿಳೆಯರು, ಸುಧಾರಿತ ಕಾನೂನು ಮತ್ತು ಸುವ್ಯವಸ್ಥೆ, ಉತ್ತಮ ರಸ್ತೆಗಳಿಗಾಗಿ ನಿತೀಶ್‌ಗೆ ಕ್ರೆಡಿಟ್ ನೀಡುತ್ತಿದ್ದಾರೆ. ಅವರು ಬಿಹಾರಕ್ಕಾಗಿ ಅವರು ಏನು ಮಾಡಿದ್ದಾರೆಂದು ಮೆಚ್ಚಬೇಕು ಎಂದು ಹೇಳುತ್ತಿದ್ದಾರೆ.


**ನಿರುದ್ಯೋಗ ಸಮಸ್ಯೆ:** ಹಲವಾರು ಸ್ಥಳೀಯ ಯುವಕರು ಉದ್ಯೋಗಗಳ ಕೊರತೆಯ ಬಗ್ಗೆ ದೂರು ನೀಡುತ್ತಾರೆ. ಅವರಲ್ಲಿ ಕೆಲವರು ಪ್ರಶಾಂತ್ ಕಿಶೋರ್ ಅವರ ಜನ ಸೂರಜ್ ಮೇಲೆ ಭರವಸೆ ಇಟ್ಟಿದ್ದಾರೆ. ಇದು ಜಾತಿ-ಆಧಾರಿತ ರಾಜ್ಯ ರಾಜಕೀಯದಲ್ಲಿ ವಿಭಿನ್ನ ಭಾಷೆಯನ್ನು ಬಳಸುತ್ತಿದೆ ಎಂದು ಹೇಳುತ್ತಾರೆ. ಸುಮಾರು ಎರಡು ದಶಕಗಳಿಂದ ಅಧಿಕಾರದಿಂದ ದೂರವಿದ್ದ ಆರ್‌ಜೆಡಿ-ನೇತೃತ್ವದ ಮಹಾಘಟಬಂಧನ್, ಯುವ ಮತದಾರರನ್ನು ಸೆಳೆಯಲು ಪ್ರಯತ್ನಿಸುತ್ತಿದೆ. ತಮ್ಮ 35 ವರ್ಷದ ಸಿಎಂ ಅಭ್ಯರ್ಥಿ ತೇಜಸ್ವಿ ಯಾದವ್‌ಗೆ ಬಿಹಾರದಲ್ಲಿ ಬದಲಾವಣೆ ತರಲು ಬೆಂಬಲ ಕೇಳುತ್ತಿದೆ. ಆರ್‌ಜೆಡಿಯ ಮುಸ್ಲಿಂ ಅವರು, ಯಾದವರು ಮತದಾರರ ಸಮೂಹವು ವಿರೋಧ ಪಕ್ಷದ ಮೈತ್ರಿಕೂಟದ ಯುವಕರನ್ನು ತಲುಪಲು ಸಹಾಯ ಮಾಡುತ್ತಿದೆ. ಯಾರೂ ನಿತೀಶ್‌ಗೆ ವಿರೋಧವಾಗಿಲ್ಲ. ಆದರೆ ಬದಲಾವಣೆಯ ಸಮಯ ಬಂದಿದೆ. ಈ ಸರ್ಕಾರವು ಯುವಕರಿಗೆ ಉತ್ತಮ ಭವಿಷ್ಯದ ಭರವಸೆ ನೀಡಲು ವಿಫಲವಾಗಿದೆ. ಈ ಬಾರಿ ಕಠಿಣ ಸ್ಪರ್ಧೆ ಇದೆ ಎಂದು ಮೋತಿಹಾರಿಯ ರಿಕ್ಷಾ ಚಾಲಕ ರಾಜೇಶ್ ಕುಮಾರ್ ಹೇಳುತ್ತಾರೆ. ನಿತೀಶ್ ಸರ್ಕಾರವು ವಲಸೆಯನ್ನು ತಡೆಯಲು ಅದರ ಬಹು-ಪ್ರಚಾರಿತ ಉಪಕ್ರಮಗಳಲ್ಲಿ ಒಂದಾದ ಚಂಪಾಟಿಯಾ ಬ್ಲಾಕ್‌ನಲ್ಲಿನ ಸ್ಟಾರ್ಟ್- ಅಪ್ ವಲಯವನ್ನು ಇತರ ಪ್ರದೇಶಗಳಲ್ಲಿ ಪುನರಾವರ್ತಿಸುವ ಭರವಸೆಯನ್ನು ಈಡೇರಿಸಲು ಹೆಣಗಾಡುತ್ತಿದೆ. ನಾವು ಹೆಚ್ಚು ಇಂತಹ ಸ್ಟಾರ್ಟ್-ಅಪ್‌ಗಳನ್ನು ರಚಿಸಲು ಸಾಧ್ಯವಾಗಿಲ್ಲ ಎಂಬುದು ನಿಜ. ಚಂಪಾಟಿಯಾದೂ ಹಲವಾರು ಸಮಸ್ಯೆಗಳನ್ನು ಎದುರಿಸಿದೆ, ಎಂದು ನಾಲ್ಕು ಬಾರಿ ಪಶ್ಚಿಮ ಚಂಪಾರನ್ ಸಂಸದ ಮತ್ತು ಮಾಜಿ ರಾಜ್ಯ ಬಿಜೆಪಿ ಅಧ್ಯಕ್ಷ ಸಂಜಯ್ ಜೈಸ್ವಾಲ್ ಹೇಳುತ್ತಾರೆ.




**ಎರಡು ಕೈಗಾರಿಕಾ ಉದ್ಯಾನವನಗಳಿಗೆ ಪ್ರಸ್ತಾವನೆ**

ಈ ವೈಫಲ್ಯಕ್ಕೆ, ಆಗಸ್ಟ್ 2022 ರಿಂದ ಜನವರಿ 2024 ರವರೆಗಿನ 18 ತಿಂಗಳ ಮಹಾಘಟ ಬಂಧನ್ ಸರ್ಕಾರವನ್ನು ಜೈಸ್ವಾಲ್ ದೂರುತ್ತಾರೆ. ಆ ಸಮಯದಲ್ಲಿ ನಿತೀಶ್ ಬಿಜೆಪಿಯೊಂದಿಗೆ ಸಂಬಂಧ ಕಡಿದುಕೊಂಡು ಆರ್‌ಜೆಡಿಯೊಂದಿಗೆ ಸರ್ಕಾರ ರಚಿಸಿದ್ದರು. ತೇಜಸ್ವಿ ಸರ್ಕಾರವನ್ನು ನಿಯಂತ್ರಿಸುತ್ತಿದ್ದರು ಮತ್ತು ಬಹಳಷ್ಟು ಹಾನಿ ಮಾಡಿದರು. ಅವರು ಎನ್‌ಡಿಎ ಸರ್ಕಾರ ತೆಗೆದುಕೊಂಡ ಅನೇಕ ಉಪಕ್ರಮಗಳನ್ನು ಮುಚ್ಚಿಹಾಕಿದರು. ಆದರೆ ಈಗ ಕೇಂದ್ರ ಸರ್ಕಾರವು ಪಶ್ಚಿಮ ಚಂಪಾರನ್‌ನ ಕುಮಾರ್‌ಬಾಗ್ ಕೈಗಾರಿಕಾ ಪ್ರದೇಶದಲ್ಲಿ ಬಹು-ವಲಯದ ಎಸ್‌ಇಝಡ್‌ಗಾಗಿ ಘೋಷಿಸಿದೆ ಮತ್ತು ಕೆಲಸ ಪ್ರಾರಂಭಿಸಿದೆ. ಎರಡು ಕೈಗಾರಿಕಾ ಉದ್ಯಾನವನಗಳಿಗೆ ಪ್ರಸ್ತಾವನೆಗಳಿವೆ, ಪ್ರಕ್ರಿಯೆ ಪ್ರಾರಂಭವಾಗಿದೆ. ಬಿಜೆಪಿ-ಜೆಡಿಯು ಸರ್ಕಾರ ಅಧಿಕಾರಕ್ಕೆ ಮರಳಿದಾಗ, ಅದು ವೇಗವನ್ನು ಪಡೆಯುತ್ತದೆ.

ಬಿಜೆಪಿಯ ಅಲ್ಪಸಂಖ್ಯಾತ ಮೋರ್ಚಾದ ರಾಷ್ಟ್ರೀಯ ಕಾರ್ಯಕಾರಿ ಸಮಿತಿಯ ಸದಸ್ಯರಾದ ಶರ್ಮಾ, ಶಿಕ್ಷಣ ವ್ಯವಸ್ಥೆ, ಮನಸ್ಥಿತಿಯಲ್ಲಿ ಕೇವಲ ಕ್ರಾಂತಿಕಾರಿ ಬದಲಾವಣೆಗಳು ರಾಜ್ಯದ ಅಭಿವೃದ್ಧಿಯನ್ನು ಉತ್ತೇಜಿಸಬಹುದು ಎಂದು ಒಪ್ಪಿಕೊಳ್ಳುತ್ತಾರೆ. ಜನರು ಹೆಚ್ಚು ತಂತ್ರಜ್ಞಾನ-ಆಧಾರಿತರಾಗಬೇಕು. ವಲಸೆ ಕಡಿಮೆಯಾಗಿದೆ. ಅಭಿವೃದ್ಧಿ ಪ್ರಕ್ರಿಯೆಯಲ್ಲಿ ಸಹಾಯ ಮಾಡಬಹುದಾದ ಪ್ರತಿಭೆಗಳು ಕಾಣೆಯಾಗಿವೆ. ಬಿಹಾರವು ಮಾನವ ಸಂಪನ್ಮೂಲದ ಮೇಲೆ ಹೆಚ್ಚು ಖರ್ಚು ಮಾಡಬೇಕು. - ಶರ್ಮಾ



# ಯಜಮಾನ

## 25 ವರ್ಷಗಳ ನಂತರ ರಿ-ರಿಲೀಸ್

**ಚಿತ್ರಕ್ಕೆ ಆಧುನಿಕ ತಂತ್ರಜ್ಞಾನ ಸ್ಪರ್ಶ**

ಸರಿಯಾಗಿ 25 ವರ್ಷಗಳ ಹಿಂದೆ 2000 ನೇ ಇಸವಿಯಲ್ಲಿ ತೆರೆಕಂಡ ಕರ್ನಾಟಕ ರತ್ನ ವಿಷ್ಣುವರ್ಧಅಭಿನಯದ, ಮೆಹರುನ್ನಿಸಾ ರೆಹಮಾನ್ ನಿರ್ಮಾಣದ ಹಾಗೂ ಆರ್.ಶೇಷಾದ್ರಿ, ರಾಧಾ ಭಾರತಿ ನಿರ್ದೇಶನದ ಯಜಮಾನ ಚಿತ್ರ ರಾಜ್ಯಾದ್ಯಂತ ಅದ್ದೂರಿಯಾಗಿ ಮರು ಬಿಡುಗಡೆಯಾಗಲು ರೆಡಿ ಆಗಿದೆ. ಜನಮೆಚ್ಚಿದ ಈ ಚಿತ್ರ ಆಧುನಿಕ ತಂತ್ರಜ್ಞಾನದಿಂದ ಸಿಂಗಾರಗೊಂಡಿದೆ. ಮುನಿಸ್ವಾಮಿ ಎಸ್.ಡಿ ಈ ಚಿತ್ರವನ್ನು ಮರು ಬಿಡುಗಡೆ ಮಾಡುತ್ತಿದ್ದಾರೆ. ಚಿತ್ರದ ರಜತೋತ್ಸವವನ್ನು ಸಂಭ್ರಮಿಸಲು ಕಲಾವಿದರ ಸಂಘದಲ್ಲಿ ಅದ್ದೂರಿ ಸಮಾರಂಭ ಆಯೋಜಿಸಲಾಗಿತ್ತು. ಚಿತ್ರದ ನಿರ್ಮಾಪಕರು, ಕಲಾವಿದರು ಹಾಗೂ ತಂತ್ರಜ್ಞರು ಸಮಾರಂಭದಲ್ಲಿ ಭಾಗಿಯಾಗಿದ್ದರು. ಯಜಮಾನ ಚಿತ್ರದ ಕುರಿತು ನೆನಪಿನ ಬುತ್ತಿ ಬಿಚ್ಚಿಟ್ಟರು. ಚಿತ್ರದ ಕುರಿತು ಮಾತನಾಡಿದ ನಿರ್ಮಾಪಕ ರೆಹಮಾನ್, ಈ ಚಿತ್ರ ಆಗಲು ಪ್ರಮುಖ ಕಾರಣ ಗುರು ಸಮಾನರಾದ ವಿಷ್ಣುವರ್ಧನ್ ಹಾಗೂ ಕೆ.ವಿ.ನಾಗೇಶ್ ಕುಮಾರ್ ಅವರು. 130ಕ್ಕೂ ಹೆಚ್ಚು ಕಡೆ ಶತದಿನೋತ್ಸವ, 40ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಇಪ್ಪತ್ತೈದು ವಾರ ಹಾಗೂ 4 ಕಡೆಗಳಲ್ಲಿ 1 ವರ್ಷ ಈ ಸಿನಿಮಾ ಓಡಿದೆ. 25 ವರ್ಷಗಳ ಹಿಂದೆಯೇ 35 ಕೋಟಿ ಕಲೆಕ್ಷನ್ ಮಾಡಿ ದಾಖಲೆ ಬರೆದ ಚಿತ್ರವಿದು. ವಿಷ್ಣುವರ್ಧನ್, ಪ್ರೇಮ, ಶಶಿಕುಮಾರ್, ಅಭಿಜಿತ್, ರಮೇಶ್ ಭಟ್, ಟೆನ್ನಿಸ್ ಕೃಷ್ಣ ಹೀಗೆ ಅನೇಕ ಕಲಾವಿದರ ಅದ್ದೂರಿ ತಾರಾಬಳಗವಿರುವ ಈ ಚಿತ್ರವನ್ನು ಈಗ ಮುನಿಸ್ವಾಮಿ ಅವರು ಮರು ಬಿಡುಗಡೆ ಮಾಡುತ್ತಿದ್ದಾರೆ.

ಹಿಂದೆ ನೀವು ನೀಡಿದ ಗೆಲುವಿಗಿಂತ ದೊಡ್ಡ ಗೆಲುವನ್ನು ಈಗ ನೀಡಿ ಎಂದರು. 'ಯಜಮಾನ' ಚಿತ್ರವನ್ನು ಡಿಐ ಬಳಸಿ 4ಕೆಡಿಜಿಟಲ್ ಪ್ರೊಜೆಕ್ಷನ್‌ಗೆ ತಯಾರು ಮಾಡಲಾಗಿದೆ. ಇಂದಿನ ಆಧುನಿಕ ತಂತ್ರಜ್ಞಾನಗಳನ್ನು ಒಳಗೊಂಡಿರುವ ಚಿತ್ರಮಂದಿರಗಳಲ್ಲಿ ವೀಕ್ಷಿಸಬಹುದು.



# ನಿರ್ಮಾಪಕ, ನಿರ್ದೇಶಕ ಸೇರಿದಾಗ ಮಾತ್ರ ಸ್ಟಾರನ್ನ ಹುಟ್ಟುಹಾಕಬಹುದು

**ದರ್ಶನ್ ಹೆಸರೇಳದೇ ಉಮಾಪತಿ ಟಾಂಗ್**

ಒಬ್ರು ಹೇಳಿದ್ರೂ ನಿರ್ಮಾಪಕರು ಇದ್ರೆ ಸ್ಟಾರ್ ಆಗಲ್ಲ ಸಿನಿಮಾ ಆಗುತ್ತೆ ಅಂತ. ನಿರ್ಮಾಪಕರು, ನಿರ್ದೇಶಕರು ಸೇರಿದಾಗ ಮಾತ್ರ ಸ್ಟಾರ್‌ನ್ನ ಹುಟ್ಟುಹಾಕಬಹುದು ಎಂದು ನಿರ್ಮಾಪಕ ಉಮಾಪತಿ ಮತ್ತೊಮ್ಮೆ ನಟ ದರ್ಶನ್ ವಿರುದ್ಧ ಪರೋಕ್ಷವಾಗಿ ಹರಿಹಾಯ್ದರು.



ನಿನ್ನೆ ಮೈಸೂರಲ್ಲಿ ನಡೆದ ರಾಜ್ಯ ಚಲನಚಿತ್ರ ಪ್ರಶಸ್ತಿ ಸಮಾರಂಭದ ವೇಳೆ ಮಾಧ್ಯಮಗಳ ಜೊತೆ ಮಾತನಾಡಿದ ನಿರ್ಮಾಪಕ ಡಿ. ಉಮಾಪತಿ ಪ್ರತಿ ಪದದಲೂ ದರ್ಶನ್‌ಗೆ ಟಾಂಗ್ ಕೊಟ್ಟರು. ಸ್ಟಾರ್‌ಗಳನ್ನ ಮಾಡುವುದು ನಿರ್ಮಾಪಕರು, ನಿರ್ದೇಶಕರು ಹಾಗೂ ಜನರು. ಒಂದು ಸಿನಿಮಾಗೆ ದೊಡ್ಡ ಸ್ಟಾರ್ ಅಂದ್ರೆ, ಅದು ನಿರ್ಮಾಪಕರು ಹಾಗೂ ನಿರ್ದೇಶಕ ಮಾತ್ರ ಎಂದು ನಟ ದರ್ಶನ್ ಹೆಸರು ಹೇಳದೇ ಟಾಂಗ್ ಕೊಟ್ಟರು. ಒಬ್ಬರು ಹೇಳಿದ್ರು, ನಿರ್ಮಾಪಕರು ಇದ್ರೆ ಸ್ಟಾರ್ ಆಗಲ್ಲ ಸಿನಿಮಾ ಆಗುತ್ತೆ ಅಂತ, ನಿರ್ಮಾಪಕರು ನಿರ್ದೇಶಕರು ಸೇರಿದಾಗ ಮಾತ್ರ ಸ್ಟಾರನ್ನ ಹುಟ್ಟುಹಾಕಬಹುದು ಎಂದರು. ಸಿನಿಮಾ ಸ್ಟಾರ್ ಆದ ಮೇಲೆ ಅನ್ನದಾತರು ಬೇಕಾದಷ್ಟು ಜನರು ಆಗಿಬಿಡುತ್ತಾರೆ. ಆಮೇಲೆ ನಿರ್ಮಾಪಕರನ್ನ ಬಿಟ್ಟು ಫ್ಯಾನ್ ಕ್ಲಬ್ ಗಳನ್ನು ಕಟ್ಟಿಕೊಳ್ಳುತ್ತಾರೆ. ಒಂದಷ್ಟು ಕ್ಯಾಂಪೇನ್‌ಗಳಿಗೆ ಕರೆದುಕೊಂಡು ಹೋಗಿ ಅನ್ನ ಹಾಕಿದ್ರೆ ಅವರನ್ನು ಅನ್ನದಾತರು ಅಂತಾರೇ. ಪ್ರತಿ ನಿತ್ಯ ಅನ್ನ ಕೊಡುವವರು ಅನ್ನದಾತರು. ವರ್ಷಕ್ಕೆ ಒಂದು ಬಾರಿ ಅನ್ನ ಹಾಕುವವರು ಯಾವತ್ತು ಅನ್ನದಾತರು ಆಗಲು ಸಾಧ್ಯವಿಲ್ಲ ಎಂದು ಕುಟುಕಿದರು. ದಿನದ ಕೂಳನ್ನ ನಂಬಿಕೊಂಡು ವರ್ಷದ ಕೂಳನ್ನ ಕಳೆದುಕೊಂಡ್ರು ಎಂಬ ನಿದರ್ಶನ ನಿಮ್ಮ ಮುಂದೆ ಇದೆ ಎಂದು ದರ್ಶನ್ ಚುನಾವಣಾ ಕ್ಯಾಂಪೇನ್‌ಗಳ ಬಗ್ಗೆ ವ್ಯಂಗ್ಯವಾಡಿದರು. ನಾನು ಯಾರ ಬಳಿಯಾದ್ರೂ ಸಹಾಯ ತೆಗೆದುಕೊಂಡ್ರೆ ಹತ್ತು ಜನದ ಮುಂದೆ ಹೇಳುತ್ತೇನೆ. ಸಹಾಯ ಮಾಡಿದವರನ್ನ ಸಾಯುವವರೆಗೆ ನೆನಪು ಮಾಡಿಕೊಳ್ಳುತ್ತೇನೆ. ಸಹಾಯ ತೆಗೆದುಕೊಂಡು ಮೇಲೆ ನಾವು ಮರೆಯಬಾರದು.



# ದಳಪತಿಗೆ ಪ್ರಭಾಸ್ ಎದುರಾಳಿ

ತೆರೆಮೇಲೆ ಬಿಗ್‌ಸ್ಟಾರ್ ಚಿತ್ರಗಳು ಪೈಪೋಟಿಗೆ ಇಳಿದ್ರೆ, ಅಲ್ಲಿ ಲಾಭಕ್ಕಿಂತ ನಷ್ಟವೇ ಹೆಚ್ಚು. ಆದರೆ ಇಂಥದ್ದೇ ಒಂದು ತೆರೆಮೇಲೆ ಕಾದಾಟ ನಡೆಯುವ ಸೂಚನೆ ಈಗ ಸಿಕ್ಕಿದೆ. ಯಾಕಂದ್ರೆ, ಮುಂಬರುವ ಸಂಕ್ರಾಂತಿ ಹಬ್ಬವನ್ನ ಟಾರ್ಗೆಟ್ ಮಾಡಿಕೊಂಡ ಎರಡು ಬಿಗ್ ಚಿತ್ರಗಳು ಇದೀಗ ತೆರೆಯ ಮೇಲೆ ಭರ್ಜರಿ ಕಾದಾಟಕ್ಕೆ ಸಿದ್ಧವಾಗಿದೆ. ಆ ಮೂಲಕ ಇಬ್ಬರು ಸ್ಟಾರ್‌ಗಳು ಎದುರಾಳಿಯಾಗಿ ನಿಲ್ಲಲು ಹೊರಟಿದ್ದಾರೆ. ಅವರೇ ದಳಪತಿ ವಿಜಯ್ ಹಾಗೂ ಡಾರ್ಲಿಂಗ್ ಪ್ರಭಾಸ್ . ದಕ್ಷಿಣ ಭಾರತದ ಈ ಸೂಪರ್‌ಸ್ಟಾರ್‌ಗಳು ಇದೀಗ ಸ್ಕ್ರೀನ್‌ವಾರ್‌ಗೆ ಕಹಳೆ ಮೊಳಗಿಸಿದ್ದಾರೆ. ಈಗಾಗಲೇ ದಳಪತಿ ವಿಜಯ್ ಕೊನೆಯ ಚಿತ್ರ ಎನ್ನಲಾಗುತ್ತಿರುವ 'ಜನನಾಯಕನ್' ಸಿನಿಮಾ 2026ರ ಜನವರಿ 9ಕ್ಕೆ ರಿಲೀಸ್ ಆಗಲು ಘೋಷಣೆಯಾಗಿದೆ. ಅದರ ತಯಾರಿಯೂ ನಡೆದಿದೆ.


ಇದೀಗ ಜನನಾಯಕನ್ ಚಿತ್ರಕ್ಕೆ ಎದುರಾಳಿಯಾಗಿ ಅಖಾಡಕ್ಕಿಳಿಯಲು ಪ್ರಭಾಸ್ ನಟನೆಯ ಚಿತ್ರ ಸಿದ್ಧವಾಗಿದೆ. ಆಶ್ಚರ್ಯಕರ ರೀತಿಯಲ್ಲಿ ಜನವರಿ 9ನ್ನೇ ಆಯ್ಕೆ ಮಾಡಿಕೊಂಡಿದೆ. ಆ ಚಿತ್ರವೇ ರಾಜಾಸಾಬ್. ಜನನಾಯಕನ್ ಹಾಗೂ ರಾಜಾಸಾಬ್ ಇವೆರೆಡೂ ಪ್ಯಾನ್ ಇಂಡಿಯಾ ಚಿತ್ರಗಳು. ಜೊತೆಗೆ ಬಿಗ್‌ಸ್ಟಾರ್ ಚಿತ್ರಗಳು. ಆದರೆ ಮೂಲ ಬೇರೆ ಬೇರೆ ಭಾಷೆಯದ್ದಾದ್ರೂ, ಬಿಗ್‌ಸ್ಟಾರ್‌ವಾರ್ ಫಿಕ್ಸ್. ಒಂದು ಬಿಗ್ ಚಿತ್ರಕ್ಕೆ ಇನ್ನೊಂದು ಬಿಗ್‌ಸ್ಟಾರ್ ಚಿತ್ರ ಎದುರಾಳಿಯಾಗಿ ನಿಂತರೆ ಒಂದಕ್ಕೆ ಸೋಲು ಇನ್ನೊಂದಕ್ಕೆ ಗೆಲುವು ಆಗುವ ಸಾಧ್ಯತೆಗಳೇ ಹೆಚ್ಚು. ಇಬ್ಬರಿಗೂ ಬೇರೆ ಬೇರೆಯದ್ದೇ ಆದ ಫ್ಯಾನ್ಸ್ ಬಳಗವೂ ಇದೆ. ಆದರೂ ತೆರೆಯಲ್ಲಿ ಒಂದೇ ದಿನ ಎದುರಾಳಿಯಾದ್ರೆ, ಬಾಕ್ಸಾಫೀಸ್‌ನಲ್ಲೂ ಶೇರ್ ಮಾಡಿಕೊಳ್ಳಬೇಕಾಗುತ್ತೆ. ಒಟ್ನಲ್ಲಿ ಇದೀಗ ಆಶ್ಚರ್ಯಕರ ರೀತಿಯಲ್ಲಿ ಪ್ರಭಾಸ್ ರಾಜಾಸಾಬ್ ಘೋಷಣೆಯಾಗಿದೆ.

# ಕನ್ನಡ ಅಭಿಮಾನಿಗಳ ಬಗ್ಗೆ ರಶ್ಮಿಕಾ ಕಾಳಜಿ

**ತುಂಬಾ ಕೇರ್‌ಫುಲ್ ಆಗಿರಿ**

ರಶ್ಮಿಕಾ ಮಂದಣ್ಣ ಅಭಿನಯದ ಥಮಾ ಸಿನಿಮಾ ರಿಲೀಸ್ ಆಗಿ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ಪಡೆದುಕೊಳ್ತಿದೆ. ಇದರ ಬೆನ್ನಲ್ಲೇ ರಶ್ಮಿಕಾ ಹಾಗೂ ದೀಕ್ಷಿತ್ ಶೆಟ್ಟಿ ನಟನೆಯ ದಿ ಗರ್ಲ್‌ಫ್ರೆಂಡ್ ಸಿನಿಮಾ ಈ ವಾರ ತೆರೆಗೆ ಬರೋಕೆ ತಯಾರಾಗಿ ನಿಂತಿದೆ. ಈ ಸಂದರ್ಭದಲ್ಲಿ ರಶ್ಮಿಕಾ ಮಂದಣ್ಣ ಅವರ ವಿಡಿಯೋವೊಂದು ಜಾಲತಾಣದಲ್ಲಿ ವೈರಲ್ ಆಗಿದೆ. ಕನ್ನಡ ಅಭಿಮಾನಿಗಳಿಗೆ ರಶ್ಮಿಕಾ ಸಲಹೆಯನ್ನ ನೀಡಿದ್ದಾರೆ. ಜೊತೆಗೆ ಹೊರಗಡೆ ಎಚ್ಚರಿಕೆ ವಹಿಸುವಂತೆ ಕಾಳಜಿಯ ಮಾತುಗಳನ್ನ ಆಡಿದ್ದಾರೆ. ರಶ್ಮಿಕಾ ಮಂದಣ್ಣ ಆಡಿದ ಮಾತು ಈಗ ವೈರಲ್ ಆಗಿದೆ. ನ್ಯಾಷನಲ್ ಕ್ರಶ್ ಅಭಿಮಾನಿಗಳು ಫುಲ್ ಖುಷಿಯಿಂದ ಕುಣಿದಾಡಿದ್ದಾರೆ. ಇನ್ನು ಕೆಲವರು ರಶ್ಮಿಕಾ ಸಿನಿಮಾಗಳು ಸೋಲುತ್ತಿವೆ ಹೀಗಾಗಿ ಈಗ ಕನ್ನಡಿಗರು ಹಾಗೂ ಕನ್ನಡ ಅಭಿಮಾನಿಗಳು ನೆನಪಾಗಿದ್ದಾರಾ ಅಂತ ಕಮೆಂಟ್ಸ್ ಮಾಡ್ತಿದ್ದಾರೆ. ಅಸಲಿಗೆ ಆ ವಿಡಿಯೋದಲ್ಲಿರೋದೇನು ಅಂದ್ರೆ, ''ಹಾಯ್ ಎಲ್ಲರೂ ಚೆನ್ನಾಗಿದ್ದೀರ. ನಾನು ನಿಮ್ಮ (ಫ್ಯಾನ್ಸ್) ಬಗ್ಗೆ ತುಂಬಾ ಯೋಚ್ನೆ ಮಾಡ್ತಾ ಇರ್ತೀನಿ. ನೀವು ಯಾವಾಗಲೂ ನನ್ನ ಮನಸಲ್ಲಿ ಇರ್ತೀರಾ.. ಯೋಚನೆಯಲ್ಲಿ ಇರ್ತೀರಾ.. ನೀವು ಯಾವತ್ತೂ ಸಂತೋಷವಾಗಿ, ಆರೋಗ್ಯವಾಗಿರಬೇಕು. ಹೊರಗಡೆ ವೈರಲ್ ಫೀವರ್ ಇದೆ, ತುಂಬಾ ಕೇರ್‌ಫುಲ್ ಆಗಿರಿ'' ಎಂದು ಅಭಿಮಾನಿಗಳಿಗೆ ರಶ್ಮಿಕಾ ವಿಡಿಯೋ ಮೂಲಕ ಮನವಿ ಮಾಡಿಕೊಂಡಿದ್ದಾರೆ. ರಶ್ಮಿಕಾ ಮಂದಣ್ಣ ಭಾರತೀಯ ಚಿತ್ರರಂಗದಲ್ಲಿ ಹೆಸರು ಮಾಡಿದ ನಟಿ. ಸೂಪರ್‌ಸ್ಟಾರ್ಸ್ ಜೊತೆ ತೆರೆಹಂಚಿಕೊಂಡ ರಶ್ಮಿಕಾ ಆಗಾಗ ಒಂದಲ್ಲ ಒಂದು ಕಾಂಟ್ರವರ್ಸಿಯಿಂದಲೇ ಸದ್ದು ಮಾಡ್ತಾರೆ.


# ಹೊಸ ಸಿನಿಮಾ ಘೋಷಿಸಿದ ಶ್ರೀಜೈ



ಆರ್‌ಎಕ್ಸ್ ಸೂರಿ ಹಾಗೂ ಭೈರಾದೇವಿ ಸಿನಿಮಾಗಳ ಖ್ಯಾತಿಯ ನಿರ್ದೇಶಕ ಶ್ರೀಜೈ ಹೊಸ ಚಿತ್ರ ಕೈಗೆತ್ತಿಕೊಂಡಿದ್ದಾರೆ.

ಪ್ರೊಡಕ್ಷನ್ ನಂ.1 ವರ್ಕಿಂಗ್ ಟೈಟಲ್‌ನಲ್ಲಿ ಸಿನಿಮಾ ಅನೌನ್ಸ್ ಮಾಡಿದ್ದು, ಇತ್ತೀಚಿಗೆ ಬೆಂಗಳೂರಿನ ಬಂಡೆ ಮಹಾಕಾಳಿ ದೇವಸ್ಥಾನದಲ್ಲಿ ಚಿತ್ರದ ಸ್ಕ್ರಿಪ್ಟ್ ಪೂಜೆಯನ್ನ ಸರಳವಾಗಿ ನೆರವೇರಿದೆ. ಶ್ರೀಜೈ ಹೊಸ ಪ್ರಯತ್ನದಲ್ಲಿ ನಾಯಕನಾಗಿ ಸಂದೀಪ್ ನಾಗರಾಜ್ ಕಾಣಿಸಿಕೊಳ್ಳಲಿದ್ದಾರೆ. ಈಗಾಗಲೇ ಸಂದೀಪ್ ಗೂಗ್ಲಿ ಅನಂತು VS ನುಸ್ರುತ್ ಪ್ರಭುತ್ವ 1/2 ಮೆಂಟ್ಲು, ಸಿನಿಮಾಗಳಲ್ಲಿ ನಟಿಸಿದ್ದು, ಇದೀಗ ಶ್ರೀಜೈ ಕಥೆಯಲ್ಲಿ ಕಂಪ್ಲೀಟ್ ಮಾಸ್ ಹಾಗೂ ರಗಡ್ ಗೆಟಪ್‌ನಲ್ಲಿ ಅಭಿನಯಿಸಲಿದ್ದಾರೆ. ಪ್ರೊಡಕ್ಷನ್ ನಂ.1 ಟೈಟಲ್ ನಡಿ ಚಿತ್ರತಂಡ ಪೋಸ್ಟರ್ ರಿಲೀಸ್ ಮಾಡಿದೆ. ಪೋಸ್ಟರ್ ನೋಡ್ತಿದ್ರೆ, ಇದು ರೌಡಿಸಂ ಕಥೆ ಅನ್ನೋದು ಗೊತ್ತಾಗುತ್ತದೆ.

ರಕ್ತ, ಮಚ್ಚು, ಹಣ, ಹಗ್ಗ ಎಲ್ಲವನ್ನೂ ನೋಡ್ತಿದ್ರೆ, ಶ್ರೀಜೈ ರೌಡಿಸಂ ಕಥೆಯನ್ನು ಪ್ರೇಕ್ಷಕರಿಗೆ ಉಣಬಡಿಸಲು ಹೊರಟಂತಿದೆ. ಡ್ರೀಮ್ ವರ್ಲ್ಡ್ ಸಿನಿಮಾಸ್ ಹಾಗೂ ರಾಧಾಕೃಷ್ಣ ಆರ್ಟ್ಸ್ ಬ್ಯಾನರ್‌ನಡಿ ಸಿನಿಮಾ ನಿರ್ಮಾಣವಾಗಲಿದೆ. ಸೋಲೋಮನ್ ಚಿತ್ರಕ್ಕೆ ಕ್ಯಾಮೆರಾ ಹಿಡಿಯಲಿದ್ದು, ಕೆಜಿಎಫ್ ಸಿನಿಮಾ ಖ್ಯಾತಿಯ ಶ್ರೀಕಾಂತ್ ಸಂಕಲನ ಹಾಗೂ ಭೈರಾದೇವಿ ಸಿನಿಮಾಗೆ ಸಂಗೀತ ನಿರ್ದೇಶನ ಮಾಡಿದ್ದ, ಸೆಂಥಿಲ್ ಪ್ರಶಾಂತ್ ಈ ಚಿತ್ರಕ್ಕೂ ಸಂಗೀತ ಒದಗಿಸಲಿದ್ದಾರೆ.



# ಭಾರತ ತಂಡಕ್ಕೆ ದ್ರಾವಿಡ್ ಪುತ್ರ

**ಕರ್ನಾಟಕ ತಂಡದ ನಾಯಕ ಅನ್ವಯ್**

ರಾಹುಲ್ ದ್ರಾವಿಡ್ ಅವರ ಕಿರಿಯ ಪುತ್ರ ಅನ್ವಯ್ ದ್ರಾವಿಡ್ ಭಾರತ ಅಂಡರ್-19 ಚಾಲೆಂಜರ್ ಟ್ರೋಫಿ ತಂಡಕ್ಕೆ ಆಯ್ಕೆಯಾಗಿದ್ದಾರೆ. ಹೈದರಾಬಾದ್‌ನಲ್ಲಿ ನಡೆಯಲಿರುವ ಈ ಟೂರ್ನಿಯಲ್ಲಿ ಅವರು ಸಿ ತಂಡದ ಪರ ಅಗ್ರ ಕ್ರಮಾಂಕದ ಬ್ಯಾಟ್ಸ್‌ಮನ್ ಹಾಗೂ ವಿಕೆಟ್‌ಕೀಪರ್ ಆಗಿ ಆಡಲಿದ್ದಾರೆ.

ಇತ್ತೀಚೆಗೆ ಕರ್ನಾಟಕ ತಂಡದ ನಾಯಕರಾಗಿದ್ದ ಅನ್ವಯ್, ತಮ್ಮ ಆಕ್ರಮಣಕಾರಿ ಬ್ಯಾಟಿಂಗ್‌ನಿಂದ ಹೆಸರುವಾಸಿಯಾಗಿದ್ದಾರೆ. ಯುವ ಆಟಗಾರರ ಪ್ರತಿಭೆಗೆ ವೇದಿಕೆಯಾಗಿರುವ ಈ ಟೂರ್ನಿಯಲ್ಲಿ ಅನ್ವಯ್ ಸಾಮರ್ಥ್ಯ ಪ್ರದರ್ಶಿಸಲಿದ್ದಾರೆ. ಟೀಂ ಇಂಡಿಯಾದ ಮಾಜಿ ನಾಯಕ ಹಾಗೂ ಮಾಜಿ ಮುಖ್ಯ ಕೋಚ್ ರಾಹುಲ್ ದ್ರಾವಿಡ್ ಅವರ ಕಿರಿಯ ಮಗ ಅನ್ವಯ್ ದ್ರಾವಿಡ್‌ಗೆ ಭಾರತ ಅಂಡರ್ 19 ತಂಡದಲ್ಲಿ ಸ್ಥಾನ ಸಿಕ್ಕಿದೆ. ಕಳೆದ ಕೆಲವು ದಿನಗಳಿಂದ ಸುದ್ದಿಯಲ್ಲಿರುವ ಅನ್ವಯ್ ಅವರನ್ನು ಇತ್ತೀಚೆಗಷ್ಟೆ ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ತನ್ನ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸನ್ಮಾನಿಸಿತ್ತು. ಹಾಗೆಯೇ ಕಳೆದ ತಿಂಗಳು ನಡೆದಿದ್ದ ವಿನೂ ಮಂಕಡ್ ಟ್ರೋಫಿಯಲ್ಲಿ ಕರ್ನಾಟಕ ತಂಡದ ನಾಯಕರಾಗಿದ್ದ ಅನ್ವಯ್ ಅವರನ್ನು ಇದೀಗ ಪ್ರಮುಖ ಟೂರ್ನಮೆಂಟ್ ಗಾಗಿ ಭಾರತದ ತಂಡದಲ್ಲಿ ಆಯ್ಕೆ ಮಾಡಲಾಗಿದೆ.

ಅನ್ವಯ್ ದ್ರಾವಿಡ್ ಅವರನ್ನು ಬುಧವಾರ ಹೈದರಾಬಾದ್ ನಲ್ಲಿ ಪ್ರಾರಂಭವಾಗುವ ಪುರುಷರ ಅಂಡರ್-19 ಏಕದಿನ ಚಾಲೆಂಜರ್ ಟ್ರೋಫಿಗೆ ತಂಡದಲ್ಲಿ ಆಯ್ಕೆ ಮಾಡಲಾಗಿದೆ. ಈ ಪಂದ್ಯಾವಳಿಯನ್ನು ವಾರ್ಷಿಕವಾಗಿ ನಡೆಸಲಾಗುತ್ತಿದ್ದು, ಯುವ ಆಟಗಾರರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶವನ್ನು ಒದಗಿಸುತ್ತದೆ. ನಾಲ್ಕು ತಂಡಗಳ ನಡುವೆ ನಡೆಯಲಿರುವ ಈ ಟೂರ್ನಿಯಲ್ಲಿ ಅನ್ವಯ್ ಅವರನ್ನು ಸಿ ತಂಡದಲ್ಲಿ ಸೇರಿಸಲಾಗಿದೆ. ಅಗ್ರ ಕ್ರಮಾಂಕದ ಬ್ಯಾಟ್ಸ್‌ಮನ್ ಮತ್ತು ವಿಕೆಟ್ ಕೀಪರ್ ಪಾತ್ರಗಳನ್ನು ನಿರ್ವಹಿಸುವ ಅನ್ವಯ್, ಆಕ್ರಮಣಕಾರಿ ಬ್ಯಾಟಿಂಗ್‌ಗೆ ಹೆಸರುವಾಸಿಯಾಗಿದ್ದಾರೆ.

ಈ ಪಂದ್ಯಾವಳಿಯು ನವೆಂಬರ್ 5 ರಿಂದ 11, 2025 ರವರೆಗೆ ಹೈದರಾಬಾದ್‌ನಲ್ಲಿ ನಡೆಯಲಿದೆ. ಸಿ ತಂಡವನ್ನು ಆರನ್ ಜಾರ್ಜ್ ಮುನ್ನಡೆಸಲಿದ್ದು, ಆರ್ಯನ್ ಯಾದವ್ ಉಪನಾಯಕನಾಗಿದ್ದಾರೆ. ತಂಡದ ಮೊದಲ ಪಂದ್ಯ ಶುಕ್ರವಾರ ವೇದಾಂತ್ ತ್ರಿವೇದಿ ನೇತೃತ್ವದ ಬಿ ತಂಡದ ವಿರುದ್ಧ ನಡೆಯಲಿದೆ. ಈ ಪಂದ್ಯದಲ್ಲಿ ಅನ್ವಯ್ ದ್ರಾವಿಡ್ ಆಡುವುದನ್ನು ಕಾಣಬಹುದು.



# ವಿಶ್ವಕಪ್ ಹಿಂಪಡೆಯಲಿರುವ ಐಸಿಸಿ



**ಫೋಟೊ ಶೂಟ್ ಬಳಿಕ ವಾಪಾಸ್**

ಡಿವೈ ಪಾಟೀಲ್ ಮೈದಾನದಲ್ಲಿ ನಡೆದ ಮಹಿಳಾ ಏಕದಿನ ವಿಶ್ವಕಪ್‌ನ ಫೈನಲ್ ಮ್ಯಾಚ್‌ನಲ್ಲಿ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ 50 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 298 ರನ್ ಕಲೆಹಾಕಿದ್ದರು. ಈ ಗುರಿಯನ್ನು ಬೆನ್ನತ್ತಿದ ಸೌತ್ ಆಫ್ರಿಕಾ ತಂಡ 45.3 ಓವರ್‌ಗಳಲ್ಲಿ 246 ರನ್‌ಗಳಿಸಿ ಆಲೌಟ್ ಆಗುವ ಮೂಲಕ 52 ರನ್‌ಗಳಿಂದ ಸೋಲೊಪ್ಪಿಕೊಂಡಿತು. ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಭಾರತ ತಂಡವು ಮಹಿಳಾ ವಿಶ್ವಕಪ್ ಗೆಲ್ಲುವ ಮೂಲಕ ಕೋಟ್ಯಂತರ ಭಾರತೀಯರ ಕನಸನ್ನು ನನಸು ಮಾಡಿದ್ದಾರೆ.

ಮುಂಬೈನ ಡಿವೈ ಪಾಟೀಲ್ ಸ್ಟೇಡಿಯಂನಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಸೌತ್ ಆಫ್ರಿಕಾ ತಂಡವನ್ನು 52 ರನ್‌ಗಳಿಂದ ಮಣಿಸಿ ಟೀಮ್ ಇಂಡಿಯಾ ಚೊಚ್ಚಲ ಬಾರಿಗೆ ವಿಶ್ವಕಪ್ ಕಿರೀಟವನ್ನು ಮುಡಿಗೇರಿಸಿಕೊಂಡಿತು. ಈ ವಿಶ್ವ ಚಾಂಪಿಯನ್ ಪಟ್ಟದ ಬೆನ್ನಲ್ಲೇ ಐಸಿಸಿ ಅಧ್ಯಕ್ಷ ಜಯ್ ಶಾ ಅವರು ಭಾರತದ ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರಿಗೆ ಹೊಳೆಯುವ ವಿಶ್ವಕಪ್ ಟ್ರೋಫಿಯನ್ನು ಹಸ್ತಾಂತರಿಸಿದರು. ಆದರೆ ಈ ಟ್ರೋಫಿಯನ್ನು ಐಸಿಸಿ ಹಿಂತೆಗೆದುಕೊಳ್ಳಲಿದೆ ಎಂಬ ವಿಚಾರ ಅನೇಕರಿಗೆ ಗೊತ್ತಿಲ್ಲ. ಐಸಿಸಿ ನಿಯಮದ ಪ್ರಕಾರ, ಚಾಂಪಿಯನ್ ತಂಡಕ್ಕೆ ನೀಡಲಾದ ಟ್ರೋಫಿಯನ್ನು ಫೋಟೊ ಶೂಟ್ ಬಳಿಕ ಹಿಂಪಡೆಯಲಾಗುತ್ತದೆ. ಅಲ್ಲದೆ ಬದಲಿಯಾಗಿ ಆ ಟ್ರೋಫಿಯ ಪ್ರತಿಕೃತಿಯನ್ನು ನೀಡಲಾಗುತ್ತದೆ. ಅಂದರೆ ನಕಲಿ ಟ್ರೋಫಿಯನ್ನು ಹಸ್ತಾಂತರಿಸಲಾಗುತ್ತದೆ. ಐಸಿಸಿ ಇಂತಹದೊಂದು ನಿಯಮ ರೂಪಿಸಿರುವುದು 26 ವರ್ಷಗಳ ಹಿಂದೆ. ಈ ನಿಯಮದ ಪ್ರಕಾರ, ಯಾವುದೇ ತಂಡಕ್ಕೆ ಮೂಲ ಟ್ರೋಫಿಯನ್ನು ನೀಡಲಾಗುವುದಿಲ್ಲ. ಬದಲಾಗಿ ಅದನ್ನೇ ಹೋಲುವ ಮತ್ತೊಂದು ಡಮ್ಮಿ ಟ್ರೋಫಿ ನೀಡಲಾಗುತ್ತದೆ.

ಚಾಂಪಿಯನ್ ತಂಡಕ್ಕೆ ಹಸ್ತಾಂತರಿಸಿದ ಮೂಲ ಟ್ರೋಫಿಯನ್ನು ಹಿಂಪಡೆದ ಬಳಿಕ ಅದನ್ನು ದುಬೈನಲ್ಲಿರುವ ಐಸಿಸಿ ಕಚೇರಿಯಲ್ಲಿ ಇರಿಸಲಾಗುತ್ತದೆ.

# ಸ್ಮೃತಿ ಮಂಧಾನಗೆ ಶಾಕ್ ನೀಡಿದ ಐಸಿಸಿ

**ಇಡೀ ಟೂರ್ನಿಯಲ್ಲಿ ಅಮೋಘ ಪ್ರದರ್ಶನ**



ಭಾರತ 2025ರ ಮಹಿಳಾ ವಿಶ್ವಕಪ್ ಗೆದ್ದರೂ, ಟೀಂ ಇಂಡಿಯಾದ ಸ್ಮೃತಿ ಮಂಧಾನ ತಮ್ಮ ನಂ.1 ಏಕದಿನ ರ‍್ಯಾಂಕಿಂಗ್ ಕಳೆದುಕೊಂಡಿದ್ದಾರೆ. ವಿಶ್ವಕಪ್‌ನಲ್ಲಿ ಅಮೋಘ ಪ್ರದರ್ಶನ ನೀಡಿದ ದಕ್ಷಿಣ ಆಫ್ರಿಕಾದ ಲಾರಾ ವೋಲ್ವಾರ್ಡ್ಟ್ ಅಗ್ರಸ್ಥಾನಕ್ಕೇರಿದ್ದಾರೆ. ವೋಲ್ವಾರ್ಡ್ಟ್ ಎರಡು ಶತಕ ಸೇರಿ 571 ರನ್ ಗಳಿಸಿ, ಮಂಧಾನರನ್ನು ಎರಡನೇ ಸ್ಥಾನಕ್ಕೆ ತಳ್ಳಿದ್ದಾರೆ. ಭಾರತದಲ್ಲಿ ನಡೆದ 2025 ರ ಮಹಿಳಾ ಏಕದಿನ ವಿಶ್ವಕಪ್ ಗೆದ್ದ ಟೀಂ ಇಂಡಿಯಾ ಸಂತಸದ ಅಲೆಯಲ್ಲಿ ತೇಲುತ್ತಿದೆ. ಆದರೆ ಇಡೀ ಟೂರ್ನಿಯಲ್ಲಿ ತಂಡದ ಪರ ಅಮೋಘ ಪ್ರದರ್ಶನ ನೀಡಿದ್ದ ಸ್ಮೃತಿ ಮಂಧಾನಗೆ ಐಸಿಸಿ ಕಡೆಯಿಂದ ದೊಡ್ಡ ಆಘಾತ ಎದುರಾಗಿದೆ. ವಿಶ್ವಕಪ್‌ನಲ್ಲಿ ತಂಡದ ಪರ ಅತ್ಯಧಿಕ ರನ್ ಬಾರಿಸಿದ್ದ ಸ್ಮೃತಿ ಮಂಧಾನ ಇದೀಗ ಏಕದಿನ ರ‍್ಯಾಂಕಿಂಗ್‌ನಲ್ಲಿ ನಂಬರ್ 1ಸ್ಥಾನವನ್ನು ಕಳೆದುಕೊಂಡಿದ್ದಾರೆ. ಐಸಿಸಿ ಮಹಿಳಾ ವಿಶ್ವಕಪ್‌ನಲ್ಲಿ ಮಂಧಾನ ಅದ್ಭುತ ಪ್ರದರ್ಶನ ನೀಡಿದ ಹೊರತಾಗಿಯೂ ತಮ್ಮ ನಂಬರ್ 1 ಶ್ರೇಯಾಂಕವನ್ನು ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ. ಸೆಮಿಫೈನಲ್ ಹಾಗೂ ಫೈನಲ್‌ನಲ್ಲಿ ಶತಕ ಬಾರಿಸಿದ್ದ ದಕ್ಷಿಣ ಆಫ್ರಿಕಾದ ನಾಯಕಿ ಲೌರಾ ವೋಲ್ವಾರ್ಡ್ಟ್ ಮಂಧಾನಾ ಅವರ ಸ್ಥಾನವನ್ನು ಅಲಂಕರಿಸಿದ್ದಾರೆ. ಮಹಿಳಾ ವಿಶ್ವಕಪ್‌ನಲ್ಲಿ ಅತಿ ಹೆಚ್ಚು ರನ್ ಗಳಿಸಿದ ಆಟಗಾರ್ತಿ ಎನಿಸಿಕೊಂಡಿದ್ದ ಲೌರಾ ವೋಲ್ವಾರ್ಡ್ಟ್ ಇಡೀ ಟೂರ್ನಿಯಲ್ಲಿ 571 ರನ್ ಬಾರಿಸಿದ್ದರು. ಇದರ ಫಲವಾಗಿ ಅವರಿಗೆ ವಿಶ್ವದ ನಂ. 1 ಏಕದಿನ ಬ್ಯಾಟರ್ ಪಟ್ಟ ಸಿಕ್ಕಿದೆ. ಇದರ ಜೊತೆಗೆ ತಮ್ಮ ವೃತ್ತಿಜೀವನದ ಅತ್ಯುತ್ತಮ ರೇಟಿಂಗ್ (814) ಪಡೆದುಕೊಂಡಿರುವ ವೋಲ್ವಾರ್ಡ್ ಇತರ ಇಬ್ಬರು ಬ್ಯಾಟರ್‌ಗಳನ್ನು ಹಿಂದಿಕ್ಕಿ ಅಗ್ರ ಸ್ಥಾನವನ್ನು ಅಲಂಕರಿಸಿದ್ದಾರೆ. ವೋಲ್ವಾರ್ಡ್ಟ್, ಐಸಿಸಿ ರ‍್ಯಾಂಕಿಂಗ್‌ನಲ್ಲಿ ನಂಬರ್ 1 ಸ್ಥಾನಕ್ಕೇರಿದ್ದು ಮಾತ್ರವಲ್ಲದೆ ಐಸಿಸಿಯ ಅತ್ಯುತ್ತಮ ವಿಶ್ವಕಪ್ ತಂಡದ ನಾಯಕಿಯಾಗಿಯೂ ಆಯ್ಕೆಯಾದರು. ಮಹಿಳಾ ವಿಶ್ವಕಪ್‌ನಲ್ಲಿ ವೋಲ್ವಾರ್ಡ್ ಅವರ ಪ್ರದರ್ಶನದ ಬಗ್ಗೆ ಹೇಳುವುದಾದರೆ,, ಆಡಿದ ಒಂಬತ್ತು ಪಂದ್ಯಗಳಲ್ಲಿ 71.37 ಸರಾಸರಿಯಲ್ಲಿ 571 ರನ್ ಗಳಿಸಿದ್ದರು. ಇದರಲ್ಲಿ ಎರಡು ಶತಕಗಳು ಮತ್ತು ಮೂರು ಅರ್ಧಶತಕಗಳು ಸೇರಿದ್ದವು. ಇದರ ಜೊತೆಗೆ ಪಂದ್ಯಾವಳಿಯಲ್ಲಿ ಅತಿ ಹೆಚ್ಚು ಬೌಂಡರಿಗಳನ್ನು (73, ಮತ್ತು ಏಳು ಸಿಕ್ಸರ್‌ಗಳು) ಬಾರಿಸಿದ್ದರು. ಹಾಗೆಯೇ ನಾಕೌಟ್ ಪಂದ್ಯಗಳಲ್ಲಿ ಎರಡು ಶತಕ ಸಿಡಿಸಿದ್ದರು. ಇದರ ಪರಿಣಾಮವಾಗಿ ಅವರಿಗೆ ನಂ.1 ಸ್ಥಾನ ಸಿಕ್ಕಿದ್ದರೆ, ಇದೀಗ ಎರಡನೇ ಸ್ಥಾನಕ್ಕೆ ಕುಸಿದಿರು ಮಂಧಾನ 811 ರೇಟಿಂಗ್ ಪಾಯಿಂಟ್ ಪಡೆದಿದ್ದಾರೆ. ಸೆಮಿಫೈನಲ್‌ನಲ್ಲಿ ಆಸ್ಟ್ರೇಲಿಯಾ ವಿರುದ್ಧ ಅಜೇಯ ಶತಕ ಬಾರಿಸಿದ್ದ ಜೆಮಿಮಾ ರೊಡ್ರಿಗ್ಸ್ ಟಾಪ್ 10 ಪಟ್ಟಿಗೆ ಪ್ರವೇಶಿಸಿದ್ದಾರೆ.

# ರಣಜಿ ಅಂಗಳದಲ್ಲಿ 156 ರನ್ ಚಚ್ಚಿದ ಜೈಸ್ವಾಲ್

ರಣಜಿ ಟ್ರೋಫಿಯಲ್ಲಿ ಮುಂಬೈ ಪರ ಆಡುತ್ತಿರುವ ಯಶಸ್ವಿ ಜೈಸ್ವಾಲ್ ರಾಜಸ್ಥಾನ ವಿರುದ್ಧ ಶತಕ ಸಿಡಿಸಿದ್ದಾರೆ. ಈ ಶತಕವು ಮುಂಬೈ ತಂಡಕ್ಕೆ ಚೇತರಿಕೆ ನೀಡಿದೆ. ಇದು ಜೈಸ್ವಾಲ್ ಅವರ ಉತ್ತಮ ಫಾರ್ಮ್ ಅನ್ನು ಮತ್ತೊಮ್ಮೆ ಸಾಬೀತುಪಡಿಸುತ್ತದೆ. 45 ವರ್ಷಗಳಲ್ಲಿ ಟೆಸ್ಟ್ ಕ್ರಿಕೆಟ್‌ನಲ್ಲಿ ಅತ್ಯುತ್ತಮ ಸರಾಸರಿ ಹೊಂದಿರುವ ಆರಂಭಿಕ ಆಟಗಾರ ಎಂಬ ಅವರ ದಾಖಲೆಯನ್ನು ಈ ಪ್ರದರ್ಶನ ಎತ್ತಿ ತೋರಿಸುತ್ತದೆ. ಭಾರತ ಟೆಸ್ಟ್ ತಂಡದ ಖಾಯಂ ಆರಂಭಿಕ ಸ್ಥಾನವನ್ನು ಪಡೆದುಕೊಂಡಿರುವ ಯಶಸ್ವಿ ಜೈಸ್ವಾಲ್ ಪ್ರಸ್ತುತ ದೇಶೀ ಟೂರ್ನಿ ರಣಜಿ ಟ್ರೋಫಿಯಲ್ಲಿ ಆಡುತ್ತಿದ್ದಾರೆ. ಈ ಟೂರ್ನಿಯಲ್ಲಿ ಮುಂಬೈ ಪರ ಆಡುತ್ತಿರುವ ಜೈಸ್ವಾಲ್, ರಾಜಸ್ಥಾನ ವಿರುದ್ಧದ ಈ ಪಂದ್ಯದ ಎರಡನೇ ಇನ್ನಿಂಗ್ಸ್‌ನಲ್ಲಿ ಶತಕ ಬಾರಿಸಿದ್ದಾರೆ. ಈ ಶತಕದ ಮೂಲಕ ರಾಜಸ್ಥಾನ ವಿರುದ್ಧ ಸ್ವಲ್ಪ ಹಿನ್ನಡೆಯಲ್ಲಿ ಕಾಣುತ್ತಿದ್ದ ಮುಂಬೈ ತಂಡದ ಇನ್ನಿಂಗ್ಸ್‌ಗೆ ಚೇತರಿಕೆ ನೀಡಿದ್ದಾರೆ. ರಾಜಸ್ಥಾನ ವಿರುದ್ಧದ ರಣಜಿ ಟ್ರೋಫಿ ಪಂದ್ಯದಲ್ಲಿ ಯಶಸ್ವಿ ಜೈಸ್ವಾಲ್ 120 ಎಸೆತಗಳಲ್ಲಿ 11 ಬೌಂಡರಿಗಳ ಸಹಿತ ತಮ್ಮ ಶತಕ ಪೂರೈಸಿದರು. ಇದರೊಂದಿಗೆ ನಾಲ್ಕು ರೆಡ್-ಬಾಲ್ ಇನ್ನಿಂಗ್ಸ್‌ಗಳಲ್ಲಿ ಜೈಸ್ವಾಲ್ ಎರಡು ಶತಕಗಳು ಸೇರಿದಂತೆ ಮೂರು ಅರ್ಧಶತಕಗಳನ್ನು ಬಾರಿಸಿದ್ದಾರೆ. ರಾಜಸ್ಥಾನ ವಿರುದ್ಧದ ಅವರ ರಣಜಿ ಟ್ರೋಫಿ ಶತಕವು ಅವರ ವೃತ್ತಿಜೀವನದ 17 ನೇ ಪ್ರಥಮ ದರ್ಜೆ ಶತಕವಾಗಿದೆ. ಯಶಸ್ವಿ ಜೈಸ್ವಾಲ್ ರಾಜಸ್ಥಾನ ವಿರುದ್ಧ ಶತಕ ಗಳಿಸುವ ಮೂಲಕ ತಮ್ಮ ಅತ್ಯುತ್ತಮ ಫಾರ್ಮ್ ಅನ್ನು ಸಾಬೀತುಪಡಿಸಿದ್ದಲ್ಲದೆ, 45 ವರ್ಷಗಳಲ್ಲಿ ಟೆಸ್ಟ್ ಕ್ರಿಕೆಟ್‌ನಲ್ಲಿ ಅತ್ಯುತ್ತಮ ಸರಾಸರಿ ಹೊಂದಿರುವ ಆರಂಭಿಕ ಆಟಗಾರ ಎಂಬುದನ್ನು ಮತ್ತೆ ಜಗತ್ತಿಗೆ ತೋರಿಸಿಕೊಟ್ಟಿದ್ದಾರೆ. ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಕನಿಷ್ಠ 2,000 ಟೆಸ್ಟ್ ರನ್ ಗಳಿಸಿದ ಬ್ಯಾಟ್ಸ್‌ಮನ್‌ಗಳಲ್ಲಿ, ಯಶಸ್ವಿ ಜೈಸ್ವಾಲ್ 1980 ರಿಂದ ಆರಂಭಿಕ ಆಟಗಾರರಲ್ಲಿ ಅತ್ಯಧಿಕ ಸರಾಸರಿಯನ್ನು ಹೊಂದಿದ್ದಾರೆ.



# ಜಿತೇಶ್ ಶರ್ಮಾಗೆ ನಾಯಕತ್ವ

**ರೈಸಿಂಗ್ ಸ್ಟಾರ್ ಏಷ್ಯಾಕಪ್‌ಗೆ ಭಾರತ ತಂಡ ಪ್ರಕಟ**

ರೈಸಿಂಗ್ ಸ್ಟಾರ್ ಏಷ್ಯಾಕಪ್ ಟೂರ್ನಿಯು ನವೆಂಬರ್ 14 ರಿಂದ ಶುರುವಾಗಲಿದೆ. ಏಷ್ಯನ್ ರಾಷ್ಟ್ರಗಳ ಉದಯೋನ್ಮುಖ ತಾರೆಗಳನ್ನು ಒಳಗೊಂಡಿರುವ ಈ ಟೂರ್ನಿಯಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿವೆ. ಇಲ್ಲಿ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಗ್ರೂಪ್-ಬಿ ನಲ್ಲಿ ಕಾಣಿಸಿಕೊಂಡಿದ್ದು, ಮೊದಲ ಸುತ್ತಿನಲ್ಲೇ ಸಾಂಪ್ರದಾಯಿಕ ಎದುರಾಳಿಗಳು ಮುಖಾಮುಖಿಯಾಗಲಿದ್ದಾರೆ. ಖತಾರ್‌ನಲ್ಲಿ ನಡೆಯಲಿರುವ ರೈಸಿಂಗ್ ಸ್ಟಾರ್ಸ್ ಏಷ್ಯಾಕಪ್ ಟಿ20 ಟೂರ್ನಿಗಾಗಿ ಭಾರತ ಎ ತಂಡವನ್ನು ಪ್ರಕಟಿಸಲಾಗಿದೆ. 15 ಸದಸ್ಯರುಗಳ ಈ ತಂಡವನ್ನು ವಿಕೆಟ್ ಕೀಪರ್ ಬ್ಯಾಟರ್ ಜಿತೇಶ್ ಶರ್ಮಾ ಮುನ್ನಡೆಸಲಿದ್ದಾರೆ. ಹಾಗೆಯೇ ಉಪನಾಯಕನಾಗಿ ನಮನ್ ಧೀರ್ ಕಾಣಿಸಿಕೊಳ್ಳಲಿದ್ದಾರೆ. ಇನ್ನು ಈ ತಂಡದಲ್ಲಿ ಯುವ ಸ್ಫೋಟಕ ದಾಂಡಿಗರಾದ ವೈಭವ್ ಸೂರ್ಯವಂಶಿ ಹಾಗೂ ಪ್ರಿಯಾಂಶ್ ಆರ್ಯ ಕೂಡ ಸ್ಥಾನ ಪಡೆದಿದ್ದಾರೆ. ಕಳೆದ ಸೀಸನ್ ಐಪಿಎಲ್‌ನಲ್ಲಿ ವೈಭವ್ ಸೂರ್ಯವಂಶಿ ರಾಜಸ್ಥಾನ್ ರಾಯಲ್ಸ್ ಪರ ಆರಂಭಿಕನಾಗಿ ಕಣಕ್ಕಿಳಿದಿದ್ದರು. ಅತ್ತ ಪ್ರಿಯಾಂಶ್ ಆರ್ಯ ಪಂಜಾಬ್ ಕಿಂಗ್ಸ್ ಪರ ಇನಿಂಗ್ಸ್ ಆರಂಭಿಸಿದ್ದರು. ಇದೀಗ ಈ ಇಬ್ಬರು ಯುವ ದಾಂಡಿಗರು ಭಾರತ ಎ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಹಾಗೆಯೇ ನೆಹಾಲ್ ವಧೇರಾ, ಸೂರ್ಯಾಂಶ್ ಶೆಡ್ಗೆ, ರಮಣ್‌ದೀಪ್, ಅಶುತೋಷ್ ಶರ್ಮಾ ಕೂಡ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಇವರೊಂದಿಗೆ ಯುವ ಆಲ್‌ರೌಂಡರ್ ಹರ್ಷ್ ದುಬೆ ಕೂಡ ಕಾಣಿಸಿಕೊಂಡಿದ್ದಾರೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**